ಸಂಪುಟ: ೦೬/ ಸಂಚಿಕೆ: ೨೮೦/ರವಿವಾರ ದಿನಾಂಕ : ೦೫-೦೧-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 280/ SUNDAY Date : 05-01-2025/ RNI No. KARKAN/2019/77640/ Postal Reg No. PMG/KA/NK/BM/135/21-24 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಮುಖ್ಯಮಂತ್ರಿಗೆ ಬಾಣಂತಿ ಸಾವಿನ ವರದಿ ಸಲ್ಲಿಸಿದ ಮಹಿಳಾ ಆಯೋಗ



ಬೆಂಗಳೂರು: ಬಾಣಂತಿಯರ ಸರಣಿ ಸಾವು ಪ್ರಕರಣ ಕರ್ನಾಟಕ ಸರ್ಕಾರದ ಪಾಲಿಗೆ ಕಗ್ಗಂಟಾಗಿ ಪರಿಣಮಿಸಿದೆ. ಪ್ರತಿ ಜಿಲ್ಲೆಯಲ್ಲೂ ಬಾಣಂತಿಯರ ಸಾವಿನ ಸುದ್ದಿಗಳು ವರದಿಯಾಗುತ್ತಿವೆ. ಹೀಗಾಗಿರುವಾಗ ಸಿಎಂ ಸಿದ್ದರಾಮಯ್ಯರನ್ನು ಭೇಟಿಯಾಗಿರುವ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ, ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರ ಸರಣಿ ಸಾವು, ಪರಿಹಾರ ಕ್ರಮಗಳ ಬಗ್ಗೆ ವರದಿ ಸಲ್ಲಿಕೆ ಮಾಡಿದ್ದಾರೆ.

ಕರ್ನಾಟಕದಲ್ಲಿ ಹೆರಿಗೆಯ ನಂತರ ತಾಯಂದಿರ ಸಾವುಗಳು ಸಂಭವಿಸುತ್ತಿವೆ. ನಮ್ಮ ದೇಶವು ವೈದ್ಯಕೀಯ ರಂಗದಲ್ಲಿ ಅತಿ ಹೆಚ್ಚು ಮುಂದುವರೆದಿದ್ದು, ಇಂತಹ ಸಾವುಗಳು ಮುಂದೆ ಸಂಭವಿಸುವುದನ್ನು ತಡೆಗಟ್ಟಲು ಹೆರಿಗೆಯ ಪೂರ್ವ ಮತ್ತು ಹೆರಿಗೆಯ ನಂತರ ಸೂಕ್ತ ಸಮಯದಲ್ಲಿ ವೈದ್ಯಕೀಯ ಚಿಕಿತ್ಸೆಯನ್ನು ನೀಡಿದಾಗ ತಾಯಂದಿರ ಸಾವನ್ನು ತಡೆಗಟ್ಟಬಹುದಾಗಿದೆ. ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮೀ ಚೌಧರಿ ಬಾಣಂತಿಯರ ಸಾವು ಸಂಭವಿಸಿದ ಆಸ್ಪತ್ರೆಗಳಿಗೆ ಭೇಟಿ ನೀಡಿ ಕಂಡ ಸಮಸ್ಯೆಗಳು ಮತ್ತು ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರವು ತೆಗೆದುಕೊಳ್ಳಬೇಕಾದ ಕ್ರಮಗಳನ್ನು ಸೂಚಿಸಿದ್ದಾರೆ.

ವರದಿಯಲ್ಲೇನಿದೆ?

ಗರ್ಭಿಣಿಯರಿಗೆ ಯಥೇಚ್ಛವಾಗಿ ನೀರು ಕುಡಿಯುವಂತೆ ಮಾಹಿತಿ ನೀಡುವುದು. ಪ್ರತಿ ಎರಡು ತಿಂಗಳಿಗೊಮ್ಮೆ ಗಡಿಟಿಜ ಡಿಂಣ-ಣುಟಿಜ ಣಜಣ ಕಡ್ಡಾಯವಾಗಿ ಮಾಡುವುದು. ಗರ್ಭಿಣಿ ಸ್ತ್ರೀಯರಿಗೆ ಸರ್ಕಾರದಿಂದ ದೊರಕುತ್ತಿರುವ ಮೊಟ್ಟೆ ಮುಂತಾದ ಪೌಷ್ಠಿಕ ಆಹಾರಗಳು ಸರಿಯಾಗಿ ದೊರಕುತ್ತಿರುವುದಿಲ್ಲ. ಅವುಗಳನ್ನು ಸರಿಯಾಗಿ ವಿತರಿಸುವಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡುವುದು.

ಎಲ್ಲಾ ತಾಲ್ಲೂಕು ಮತ್ತು ಜಿಲ್ಲಾ ಆಸ್ಪತ್ರೆಗಳಲ್ಲಿ ಹೆರಿಗೆ ಕೊಠಡಿಗಳು, ಖಅಗ, ಗಿಜಟಿಣುಟಚಿ-ಣಂಥಿ ಗಳು ಇರುವಂತೆ ನೋಡಿಕೊಳ್ಳುವುದು ಹಾಗೂ ಅವುಗಳ ಸಂಖ್ಯೆಯನ್ನು ಹೆಚ್ಚಿಸುವುದು. ಇಭಿಟಚಿಟಥಿಚಿ ಮಿಣಗಳು ಇರುವಂತೆ ನೋಡಿಕೊಳ್ಳುವುದು.

ಸರ್ಕಾರಿ ಆಸ್ಪತ್ರೆಗಳಲ್ಲಿ ನುರಿತ ಸ್ಕ್ಯಾನಿಂಗ್ ತಜ್ಞರು, ಸ್ತ್ರೀರೋಗ ತಜ್ಞರು, ರೇಡಿಯಾಲಜಿಸ್ಟ್ ಹಾಗೂ ಇತರೆ ಸಿಬ್ಬಂದಿಗಳ ಕೊರತೆ ಮುಖ್ಯವಾಗಿ ಎದ್ದು ಕಾಣುತ್ತಿದೆ. ರೋಗಿಗಳಿಗನುಸಾರವಾಗಿ ಎಲ್ಲಾ ಆಸ್ಪತ್ರೆಗಳಿಗೆ ಸಿಬ್ಬಂದಿಗಳನ್ನು ಶೀಘ್ರ ನೇಮಕ ಮಾಡಲು ಕ್ರಮ ವಹಿಸುವುದು.

ಸರ್ಕಾರಿ ಆಸ್ಪತ್ರೆಗಳಲ್ಲಿನ ನೀರಿನ ಟ್ಯಾಂಕ್‌ಗಳಲ್ಲಿ ಪಾಚಿಕಟ್ಟಿದ್ದು ನೀರು ಕಲುಷಿತಗೊಂಡಿದ್ದು ಅದೇ ನೀರು ಹೆರಿಗೆ ಕೊಠಡಿಗೂ ಸರಬರಾಜು ಆಗುತ್ತಿದೆ. ಆ ನೀರಿನಲ್ಲಿ ಅಪಾಯಕಾರಿ ಬ್ಯಾಕ್ಟೀರಿಯಾಗಳು ಇರುವ ಸಾಧ್ಯತೆ ಇದ್ದು ಪ್ರಾಣಾಪಾಯಕ್ಕೂ ಎಡೆಮಾಡಿಕೊಡುವ ಸಂಭವವಿರುತ್ತದೆ. ಹಾಗಾಗಿ ಆಸ್ಪತ್ರೆಗಳಲ್ಲಿನ ನೀರಿನ ಟ್ಯಾಂಕ್‌ಗಳನ್ನು ಕಾಲಕಾಲಕ್ಕೆ ಸ್ವಚ್ಛಗೊಳಿಸುವುದು ಹಾಗೂ ನೀರಿನ ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಿ ಕಾಲಕಾಲಕ್ಕೆ ಪರೀಕ್ಷೆ ಮಾಡಿಸಿ ಅಪಾಯಕಾರಿ ಬ್ಯಾಕ್ಟೀರಿಯಾ ಇಲ್ಲದೇ ಇರುವ ಬಗ್ಗೆ ಖಚಿತಪಡಿಸುವಂತೆ ಸೂಚನೆ.

ಸರ್ಕಾರಿ ಆಸ್ಪತ್ರೆಗಳಲ್ಲಿ ಅಪರೇಷನ್ ಥಿಯೇಟರ್, ಐಸಿಯು, ವಾರ್ಡ್ ಮುಂತಾದವುಗಳ ಶುಚಿತ್ವ ಕಾಪಾಡುವಲ್ಲಿ ಆಡಳಿತ ವರ್ಗದವರು ವಿಫಲವಾಗಿದ್ದಾರೆ. ಶೀಘ್ರವಾಗಿ ಶುಚಿತ್ವ ಕಾಪಾಡಲು ಕ್ರಮ ಕೈಗೊಳ್ಳಬೇಕಾಗಿ ಅಧಿಕಾರಿಗಳಿಗೆ ಆದೇಶ ನೀಡುವುದು. ಕಾಲಕಾಲಕ್ಕೆ ಇವುಗಳ ಸ್ವಾಬ್ ಪರೀಕ್ಷೆಯನ್ನು ಮಾಡಿಸಿ ಅಪಾಯಕಾರಿ ಬ್ಯಾಕ್ಟೀರಿಯಾ ಇಲ್ಲದಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು. ಶಸ್ತ್ರ ಚಿಕಿತ್ಸೆ, ರಕ್ತ ಪರೀಕ್ಷೆಗಳನ್ನು ಮಾಡುವಾಗ ಉಪಕರಣಗಳನ್ನು ಸ್ವಚ್ಛಗೊಳಿಸಲು ಸೋಂಕು ನಿವಾರಕ ದ್ರಾವಣಗಳನ್ನು ಬಳಸುತ್ತಿರುವುದಿಲ್ಲ. ಸೋಂಕು ನಿವಾರಕ ದ್ರಾವಣಗಳಿಂದ ಉಪಕರಣಗಳನ್ನು ಸ್ವಚ್ಛಗೊಳಿಸಲು ಕ್ರಮವಹಿಸುವುದು. ಆಟೋಕ್ಲೇವ್ ವಿಧಾನದ ಮೂಲಕ ಸಾಧನಗಳನ್ನು ಸ್ಟೆರಲೈಸೇಶನ್ ಮಾಡುವುದು.

ಬಹುತೇಕ ಸರ್ಕಾರಿ ಆಸ್ಪತ್ರೆಗಳಲ್ಲಿ ಶೌಚಾಲಯಗಳ ಸ್ಥಿತಿ ಶೋಚನೀಯವಾಗಿದೆ. ಶೌಚಾಲಯಗಳ ಸ್ವಚ್ಛತೆ ಇರುವುದಿಲ್ಲ. ಹಲವು ಆಸ್ಪತ್ರೆಗಳಲ್ಲಿ ಶೌಚಾಲಯಗಳಿಗೆ ಬೀಗ ಹಾಕಲಾಗಿದೆ, ಬಾಗಿಲುಗಳು ಇಲ್ಲ. ಹಾಗಾಗಿ ಕೂಡಲೇ ಶೌಚಾಲಯಗಳ ಸ್ವಚ್ಛತೆ ಕಡೆಗೆ ಗಮನ ಹರಿಸುವುದು. ರಾಜ್ಯದಲ್ಲಿ ಸದ್ಯ ಮೃತಪಟ್ಟಿರುವ ಬಾಣಂತಿಯರ ಮಕ್ಕಳಿಗೆ ಅವರ ಉನ್ನತ ವಿದ್ಯಾಭ್ಯಾಸದವರೆಗೆ ಉಚಿತ ಶಿಕ್ಷಣ ನೀಡಲು ಸರ್ಕಾರವು ಮುಂದಾಗುವುದು. ಹೀಗೆ ಸುಮಾರು ಅಂಶಗಳನ್ನು ವರದಿಯಲ್ಲಿ ಉಲ್ಲೇಖಿಸಲಾಗಿದೆ. ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಲಾಗಿದೆ.

## ಜಿಲ್ಲಾಧಿಕಾರಿ ಜೊತೆ ವಿಶೇಷ ಸಭೆ ನಡೆಸಿದ ಸಂಸದ ಜಗದೀಶ್ ಶೆಟ್ಟರ್



ಬೆಳಗಾವಿ : ಕಿತ್ತೂರು – ಧಾರವಾಡ ನೂತನ ರೈಲು ಮಾರ್ಗ ನಿರ್ಮಾಣ ಜಾಢಶಹಾಪೂರ ಹೊನಗಾ ಮತ್ತು ಹಲಗಾ ಮಚ್ಛೆ ನಡುವೆ ರಿಂಗ್ ರಸ್ತೆ ನಿರ್ಮಾಣ ಹಾಗೂ ಬೆಳಗಾವಿ ಹುನಗುಂದ-ರಾಯಚೂರು ನಡುವೆ ರಸ್ತೆ ನಿರ್ಮಾಣ ಕುರಿತು ಪರಿಶೀಲನೆಯನ್ನು ಜಿಲ್ಲಾಧಿಕಾರಿ ಎಮ್.ಡಿ ರೋಷನ್ ಇವರು ಉಪಸ್ಥಿತಿಯಲ್ಲಿ ಆಯಾ ಇಲಾಖೆಯ ಮುಖ್ಯಸ್ಥರೊಂದಿಗೆ ಬೆಳಗಾವಿ ಲೋಕಸಭಾ ಸಂಸದ ಜಗದೀಶ್ ಶೆಟ್ಟರ್ ಅವರು ಚರ್ಚೆ ನಡೆಸಿ, ಮಾಹಿತಿ ಪಡೆದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಈ ಸಭೆ ನಡೆಸಲಾಯಿತು. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಧಾರವಾಡ ಹಾಗೂ ಬಾಗಲಕೋಟೆ ಮೇಲೆ ಪ್ರಸ್ತಾಪಿತ ರಸ್ತೆಯ ನಿರ್ಮಾಣಕ್ಕೆ ಅವಶ್ಯವೆನಿಸಿರುವ ಭೂಸ್ವಾಧೀನ ಪ್ರಗತಿ ವರದಿಯನ್ನು ಆಯಾ ಭೂ ಸ್ವಾಧೀನ ಅಧಿಕಾರಿಗಳಿಂದ ಪಡೆದುಕೊಳ್ಳಲಾಯಿತು.

ಈ ಹಿನ್ನೆಲೆಯಲ್ಲಿ ಸಾಕಷ್ಟು ಪ್ರಗತಿ ಕಂಡು ಬಂದಿದ್ದು, ರಸ್ತೆ ನಿರ್ಮಾಣ ಕಾಮಗಾರಿಯನ್ನು ಶೀಘ್ರ ಪ್ರಾರಂಭಿಸುವಂತೆ ಸೂಚಿಸಿದರು.

ಅದರಂತೆ ಚೋರ್ಲಾ ಮಾರ್ಗವಾಗಿ ಗೋವಾಕ್ಕೆ ತಲುಪುವ ರಸ್ತೆ ಕಾಮಗಾರಿ ಸ್ಥಿತಿಗತಿ ಬಗ್ಗೆ ತಿಳಿದುಕೊಂಡು ಕಾಮಗಾರಿ ಬೇಗನೆ ಪೂರ್ಣಗೊಳಿ ಸುವಂತೆ ಸೂಚಿಸಿದರು.

ಇನ್ನೂ ಬೆಳಗಾವಿ ಕಿತ್ತೂರು ಧಾರವಾಡ ನೂತನ ರೈಲು ಮಾರ್ಗದ ಬಗ್ಗೆ ನಡೆಯುತ್ತಿರುವ ಭೂ ಸ್ವಾಧೀನಕ್ಕೆ ಅನುಕೂಲವಾಗುವ Demarcation ಬಗ್ಗೆ ಮಾಹಿತಿಯನ್ನು KAIDB ಧಾರವಾಡ ಅಧಿಕಾರಿಗಳಿಂದ ಪಡೆದುಕೊಂಡು ಈ ಕುರಿತು ಸಾಕಷ್ಟು ಪ್ರಗತಿ ಸಾಧಿಸಿದ್ದು, ಶೀಘ್ರ ಪೂರ್ಣಗೊಳಿಸಲು ಸಂಸದರು ಆದೇಶಿಸಿದರು.

ಈ ಸಭೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಧಾರವಾಡದ ಭುವನೇಶಕುಮಾರ, ಬಾಗಲಕೋಟೆಯ ಸೈಯದ್ ಅಮನ್, ವಿಶೇಷ ಭೂ ಸ್ವಾಧೀನ ಅಧಿಕಾರಿಗಳಾದ ಜೈನಾಪೂರ, ಚೌವ್ಹಾಣ್ ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

****

## ಗಡಿಯಲ್ಲಿ ಚೀನಾ ಮತ್ತೆ ಕಿರಿಕ್


### 2 ಕೌಂಟಿಗಳ ರಚನೆಗೆ ಭಾರತ ವಿರೋಧ



ನವದೆಹಲಿ: ಭಾರತದ ಗಡಿ ಭಾಗದಲ್ಲಿರುವ ಲಡಾಖ್‌ನಲ್ಲಿ ಚೀನಾ ಮತ್ತೆ ತಗಾದೆ ತೆಗೆದಿದೆ. ಲಡಾಖ್‌ನ ಅಕ್ಸಾಯ್ ಚಿನ್‌ನಲ್ಲಿ ಅಕ್ರಮವಾಗಿ ಚೀನಾ 2 ಕೌಂಟಿಗಳನ್ನು ನಿರ್ಮಾಣ ಮಾಡುವುದಾಗಿ ಘೋಷಿಸಿರುವುದರಿಂದ ಇದನ್ನು ಭಾರತ ಬಲವಾಗಿ ಖಂಡಿಸಿದೆ. "ಈ ಪ್ರದೇಶದಲ್ಲಿ ಭಾರತೀಯ ಭೂಪ್ರದೇಶದ ಅಕ್ರಮ ಚೀನೀ ಆಕ್ರಮಣವನ್ನು ನಾವು ಎಂದಿಗೂ ಒಪ್ಪಿಕೊಂಡಿಲ್ಲ" ಎಂದು ಚೀನಾ ಹೋಟಾನ್ ಪ್ರಿಫೆಕ್ಚರ್‌ನಲ್ಲಿ ಎರಡು ಹೊಸ ಕೌಂಟಿಗಳನ್ನು ಸ್ಥಾಪಿಸುವ ಕುರಿತು ವಿದೇಶಾಂಗ ಸಚಿವಾಲಯ ಹೇಳಿದೆ. ಲಡಾಖ್‌ನ ಭಾಗವಾಗಿರುವ ಚೀನಾದ ಹೊಟಾನ್ ಪ್ರಿಫೆಕ್ಚರ್‌ನಲ್ಲಿ ಎರಡು ಹೊಸ ಕೌಂಟಿಗಳ ಘೋಷಣೆಯ ಕುರಿತು ಭಾರತವು ಚೀನಾದೊಂದಿಗೆ ಗಂಭೀರ ಪ್ರತಿಭಟನೆ ಸಲ್ಲಿಸಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಇಂದು ತಿಳಿಸಿದೆ. ಈ ಬಗ್ಗೆ ಮಾಧ್ಯಮಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, "ಚೀನಾದ ಹೋಟಾನ್ ಪ್ರಿಫೆಕ್ಚರ್‌ನಲ್ಲಿ ಎರಡು ಹೊಸ ಕೌಂಟಿಗಳ ಸ್ಥಾಪನೆಗೆ ಸಂಬಂಧಿಸಿದ ಪ್ರಕಟಣೆಯನ್ನು ನಾವು ನೋಡಿದ್ದೇವೆ. ಈ ಕೌಂಟಿಗಳ ಅಧಿಕಾರ ವ್ಯಾಪ್ತಿಯ ಭಾಗಗಳು ಭಾರತದ ಕೇಂದ್ರಾಡಳಿತ ಪ್ರದೇಶವಾದ ಲಡಾಖ್‌ನಲ್ಲಿವೆ" ಎಂದು ಹೇಳಿದ್ದಾರೆ. ಲಡಾಖ್‌ನಲ್ಲಿ ಚೀನಾದ ಅಕ್ರಮ ಆಕ್ರಮಣವನ್ನು ಭಾರತ ಎಂದಿಗೂ ಒಪ್ಪಿಕೊಂಡಿಲ್ಲ ಎಂದು ಜೈಸ್ವಾಲ್ ಹೇಳಿದ್ದಾರೆ. ಹೊಸ ಕೌಂಟಿಗಳ ರಚನೆಯು ಈ ಪ್ರದೇಶದ ಮೇಲೆ ನಮ್ಮ ಸಾರ್ವಭೌಮತ್ವದ ಬಗ್ಗೆ ಭಾರತದ ದೀರ್ಘಕಾಲೀನ ಮತ್ತು ಸ್ಥಿರವಾದ ನಿಲುವಿನ ಮೇಲೆ ಪ್ರಭಾವ ಬೀರುವುದಿಲ್ಲ. ಇದು ಚೀನಾದ ಅಕ್ರಮಕ್ಕೆ ಒಪ್ಪಿಗೆ ನೀಡುವುದಿಲ್ಲ. ರಾಜತಾಂತ್ರಿಕ ಮಾರ್ಗಗಳ ಮೂಲಕ ನಾವು ಚೀನಾದ ಕಡೆಯಿಂದ ಗಂಭೀರ ಪ್ರತಿಭಟನೆಯನ್ನು ಸಲ್ಲಿಸಿದ್ದೇವೆ ಎಂದು ಅವರು ಹೇಳಿದ್ದಾರೆ. ಟಿಬೆಟ್‌ನ ಯಾಲುರ್ಂಗ್ ತ್ಸಾಂಗ್ಪೋ ನದಿಯಲ್ಲಿ ಚೀನಾ ಜಲವಿದ್ಯುತ್ ಯೋಜನೆಯನ್ನು ನಿರ್ಮಿಸುವ ಬಗ್ಗೆ ಸರ್ಕಾರಕ್ಕೆ ತಿಳಿದಿದೆ ಎಂದು ಜೈಸ್ವಾಲ್ ಹೇಳಿದ್ದಾರೆ. ಚೀನಾ ಸ್ಥಾಪಿಸುವುದಾಗಿ ಘೋಷಿಸಿರುವ ಈ ಕೌಂಟಿಗಳ ಕೆಲವು ಭಾಗಗಳು ಭಾರತದ ಕೇಂದ್ರಾಡಳಿತ ಪ್ರದೇಶವಾದ ಲಡಾಖ್‌ನಲ್ಲಿ ಬರುತ್ತವೆ. ಚೀನಾದ ಈ ಕ್ರಮವು ಅದರ ಸಾರ್ವಭೌಮತೆಗೆ ಸಂಬಂಧಿಸಿದಂತೆ ನವದೆಹಲಿಯ ಸ್ಥಿರವಾದ ಸ್ಥಾನದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಹೇಳಿದ್ದಾರೆ. ಸುಮಾರು 5 ವರ್ಷಗಳ ಕಾಲ ಸ್ಥಗಿತಗೊಂಡಿದ್ದ ಗಡಿ ಮಾತುಕತೆಯನ್ನು ಎರಡು ರಾಷ್ಟಗಳ ವಿಶೇಷ ಪ್ರತಿನಿಧಿಗಳು ಪುನರಾರಂಭಿಸಿದ ದಿನಗಳ ನಂತರ ಎರಡು ಕೌಂಟಿಗಳನ್ನು ಸ್ಥಾಪಿಸುವ ಕುರಿತು ಚೀನಾದ ಘೋಷಣೆ ಬಂದಿದೆ.

## ಹಾಸ್ಟೆಲ್‌ಗಳಿಗೆ ಗುಣಮಟ್ಟದ ಆಹಾರ ಪೂರೈಕೆಗೆ ಪೋರ್ಟಲ್ ಆರಂಭ

## ಸರ್ಕಾರದ ಕ್ರಮ ಎತ್ತಿಹಿಡಿದ ಹೈಕೋರ್ಟ್



ಬೆಂಗಳೂರು: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರಾಜ್ಯಾದ್ಯಂತ ನಡೆಸುವ ವಸತಿ ನಿಲಯಗಳಿಗೆ ಗುಣಮಟ್ಟದ ಆಹಾರ ಪೂರೈಕೆ ಮತ್ತು ಒದಗಿಸುತ್ತಿರುವ ಆಹಾರದ ಬಗ್ಗೆ ಪ್ರತಿಕ್ರಿಯೆ ಅಥವಾ ದೂರುಗಳನ್ನು ದಾಖಲಿಸಲು ರಾಜ್ಯ ಸರ್ಕಾರ ಪೋರ್ಟಲ್ ಆರಂಭಿಸುವ ನಿರ್ಧಾರವನ್ನು ಹೈಕೋರ್ಟ್ ಎತ್ತಿಹಿಡಿದಿದೆ.

ವಸತಿ ನಿಲಯಗಳಿಗೆ ಹೊಸದಾಗಿ ಆಹಾರ ಪೂರೈಕೆ ಮಾಡಲು ಕೆಲವು ಷರತ್ತುಗಳನ್ನು ವಿಧಿಸಿ ಪರಿಷ್ಕರಿಸಿರುವ ಟೆಂಡರ್ ಅನ್ನು ಪ್ರಶ್ನಿಸಿ ಕಲಬುರಗಿ, ಬೀದರ್, ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳ ಶಿವಶಕ್ತಿ ದಾಲ್ ಇಂಡಸ್ಟ್ರೀಸ್ ಮತ್ತು ಟ್ರೇಡರ್ಸ್ ಸೇರಿದಂತೆ ಹಲವು ಸಂಸ್ಥೆಗಳು ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ಏಕಸದಸ್ಯಪೀಠ ಈ ಆದೇಶ ನೀಡಿದೆ.

ಅಲ್ಲದೆ, ಸರ್ಕಾರ ಉದ್ದೇಶಿಸಿರುವ ಪೋರ್ಟಲ್ ಅಭಿವೃದ್ಧಿಗೆ ಏನೇನು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂಬ ಬಗ್ಗೆ ಜನವರಿ 30 ರೊಳಗೆ ವಿವರವನ್ನು ನೀಡುವಂತೆ ನಿರ್ದೇಶನ ನೀಡಿ, ವಿಚಾರಣೆಯನ್ನು ಮುಂದೂಡಿತು.

ಸರ್ಕಾರ ಸದ್ಯದಲ್ಲೇ ಪೋರ್ಟಲ್ ಆರಂಭಿಸಲಾಗುವುದು, ಅದರಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರು ಪೂರೈಕೆ ಮಾಡುತ್ತಿರುವ ಆಹಾರ ಸಾಮಗ್ರಿಗಳ ಬಗ್ಗೆ ದೂರುಗಳಿದ್ದರೂ ಸಲ್ಲಿಸಬಹುದು, ಅವುಗಳನ್ನು ಪರಿಶೀಲಿಸಿ ಸರ್ಕಾರ ಸೂಕ್ತ ಕ್ರಮ ಜರುಗಿಸಲಿದೆ. ಈ ಕುರಿತು ಸಂಬಂಧಿಸಿದ ಅಧಿಕಾರಿಗಳು ಆಹಾರ ಗುಣಮಟ್ಟದ ಬಗ್ಗೆ ತಪಾಸಣೆ ನಡೆಸಿದ ಬಳಿಕ ಅದರ ವಿವರಗಳನ್ನು ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಲಿದ್ದಾರೆ. ಒಂದು ವೇಳೆ ತಪಾಸಣೆ ವೇಳೆ ನಿಯಮಗಳ ಉಲ್ಲಂಘನೆ ಕಂಡುಬಂದರೆ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಸರ್ಕಾರ ಹೇಳಿದೆ. ಸರ್ಕಾರದ ಈ ಕ್ರಮ ನ್ಯಾಯಸಮ್ಮತವಾಗಿದೆ ಎಂದು ಅಭಿಪ್ರಾಯಪಟ್ಟು, ಅರ್ಜಿಗಳನ್ನು ವಜಾಗೊಳಿಸಿ ಆದೇಶಿಸಿದೆ. ರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ನ ಕೆಲವು ತೀರ್ಪುಗಳನ್ನು ಪರಿಶೀಲಿಸಿದ ಬಳಿಕವೇ ಟೆಂಡರ್‌ನಲ್ಲಿ ಮಾರ್ಪಡು ಮಾಡಿದೆ. ಅದರಂತೆ ತಾಲೂಕುಮಟ್ಟದ ಟೆಂಡರ್ ವ್ಯವಸ್ಥೆಯನ್ನು ಜಿಲ್ಲಾಮಟ್ಟಕ್ಕೆ ವಿಸ್ತರಣೆ ಮಾಡಲಾಗಿದೆ. ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರಾಜ್ಯಾದ್ಯಂತ ನಡೆಸುವ ವಸತಿ ನಿಲಯಗಳಿಗೆ ಆಹಾರ ಸಾಮಗ್ರಿ ಪೂರೈಕೆಗೆ ಪ್ರತ್ಯೇಕ ಟೆಂಡರ್‌ಗಳನ್ನು ಕರೆಯಲಾಗುವುದು ಮತ್ತು ಜಿಲ್ಲಾಮಟ್ಟದಲ್ಲಿಯೇ ಮೇಲ್ವಿಚಾರಣೆ ಮಾಡಲಾಗುವುದು. ಆ ನಿಯಮ ಸಮರ್ಪಕವಾಗಿಯೇ ಇದೆ ಎಂದು ಪೀಠ ತಿಳಿಸಿದೆ.

ಜೊತೆಗೆ, ಅರ್ಜಿದಾರರು ಟೆಂಡರ್ ಅವಧಿಯನ್ನು ಒಂದು ವರ್ಷದಿಂದ ಎರಡು ವರ್ಷಕ್ಕೆ ಹೆಚ್ಚಳ ಮಾಡಿರುವುದನ್ನು ಪ್ರಶ್ನಿಸಿದ್ದಾರೆ. ಆದರೆ, ಇದು ಸರ್ಕಾರದ ನೀತಿ ನಿರ್ಧಾರದ ವಿಚಾರವಾಗಿದ್ದು, ತಜ್ಞರ ಅಭಿಪ್ರಾಯ ಆಧರಿಸಿ ಈ ತೀರ್ಮಾನ ಕೈಗೊಳ್ಳಲಾಗಿದೆ. ಅದರಲ್ಲಿ ನ್ಯಾಯಾಲಯ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಪೀಠ ಸ್ಪಷ್ಟಪಡಿಸಿದೆ.

ಪ್ರಕರಣದ ಹಿನ್ನೆಲೆ: ರಾಜ್ಯಾದ್ಯಂತ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನಡೆಸುವ ವಸತಿ ನಿಲಯಗಳಿಗೆ ಕಳಪೆ ಆಹಾರ ಪೂರೈಸಲಾಗುತ್ತಿದೆ ಎಂಬ ವ್ಯಾಪಕ ದೂರುಗಳ ಹಿನ್ನೆಲೆಯಲ್ಲಿ ಸರ್ಕಾರ 2024ರ ಆಗಸ್ಟ್ ತಿಂಗಳಲ್ಲಿ ಟೆಂಡರ್ ನಿಯಮಗಳಲ್ಲಿ ಬದಲಾವಣೆ ಮಾಡಿತ್ತು. ತಾಲೂಕು ಮಟ್ಟದಲ್ಲಿದ್ದ ಟೆಂಡರ್‌ಗಳನ್ನು ಜಿಲ್ಲಾ ಮಟ್ಟಕ್ಕೆ ವಿಸ್ತರಣೆ ಮಾಡಲಾಯಿತು. ಅಂತೆಯೇ ಟೆಂಡರ್ ಅವಧಿಯನ್ನೂ ಸಹ ಒಂದು ವರ್ಷದಿಂದ ಎರಡು ವರ್ಷಕ್ಕೆ ಹೆಚ್ಚಳ ಮಾಡಲಾಗಿತ್ತು. ಇದಕ್ಕೆ ಆಕ್ಷೇಪಿಸಿ ಹಲವು ಟೆಂಡರ್‌ದಾರರು ಹೈಕೋರ್ಟ್ ಮೊರೆ ಹೋಗಿದ್ದರು.

## ಸಂಸ್ಕಾರ ಪಡೆದಿರುವ ಮಕ್ಕಳಿಂದ ಮಾತ್ರ ಸಮಾಜಕ್ಕೆ ಉತ್ತಮ ಕೊಡುಗೆ ನೀಡಲು ಸಾಧ್ಯ -ರಾಜಯೋಗಿಂದ್ರ ಸ್ವಾಮೀಜಿ




ಬೈಲಹೊಂಗಲ- ವ್ಯಸನಗಳಿಂದ ಪಾಲಕರಿಗೆ ನೋವನ್ನುಂಟು ಮಾಡುವ ಯುವಕರು ಅದರಿಂದ ಮುಕ್ತರಾಗಿ ಸನ್ಮಾರ್ಗದ ಹಾದಿಯಲ್ಲಿ ಸಾಗಿ ಜೀವನ ರೂಪಿಸಿಕೊಳ್ಳಲು ಅಯ್ಯಪ್ಪ ಸ್ವಾಮಿ ವ್ರತಾಚರಣೆ ಸಹಕಾರಿಯಾಗಿದೆ ಎಂದು ಕಿತ್ತೂರು ರಾಜಗುರು ಕಲ್ಮಠದ ಮಡಿವಾಳ ರಾಜಯೋಗಿಂದ್ರ ಸ್ವಾಮೀಜಿ ಹೇಳಿದರು.

ಗುರುವಾರ ಸಾಯಂಕಾಲ ಪಟ್ಟಣದ ವಿದ್ಯಾನಗರದಲ್ಲಿನ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನದ 23 ನೇ ವರ್ಷದ ಜಾತ್ರಾ ಮಹೋತ್ಸವದ ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ಧರ್ಮಸಭೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದ ಸಾನಿಧ್ಯ ವಹಿಸಿ ಅವರು ಮಾತನಾಡಿ, ವ್ಯಸನಗಳಿಗೆ ಅಂಟಿಕೊಂಡು ತಮ್ಮ ಅತ್ಯಮೂಲ್ಯ ಸಮಯದ ಜೊತೆಗೆ ಆರೋಗ್ಯವನ್ನು ಹಾಳು ಮಾಡಿಕೊಳ್ಳುವದಕ್ಕೆ ಸಂಸ್ಕಾರದ ಕೊರತೆಯೇ ಕಾರಣವಾಗಿದೆ.

ಸಂಸ್ಕಾರವನ್ನು ಪಡೆದಿರುವ ಮಕ್ಕಳಿಂದ ಮಾತ್ರ ಸಮಾಜಕ್ಕೆ ಉತ್ತಮ ಕೊಡುಗೆ ನೀಡಲು ಸಾಧ್ಯ. ಪ್ರವಚನ, ಕೀರ್ತನ ಹಾಗೂ ಧಾರ್ಮಿಕ ಕಾರ್ಯಕ್ರಮಗಳಿಗೆ ಮಕ್ಕಳನ್ನು ಕರೆ ತರಬೇಕೆಂದರು.

ಅರಳಿಕಟ್ಟಿ ತೋಂಟದಾರ್ಯ ಮಠದ ಶಿವಮೂರ್ತಿ ಸ್ವಾಮೀಜಿ ಮಾತನಾಡಿ, ಕಿತ್ತೂರು ಚನ್ನಮ್ಮಾಜಿ ಸಂಗೊಳ್ಳಿ ರಾಯಣ್ಣನವರಿಂದ ಕ್ರಾಂತಿಯ ನಾಡಾಗಿದ್ದ ಬೈಲಹೊಂಗಲ ಪಟ್ಟಣವು ಇತ್ತೀಚಿಗೆ ಧಾರ್ಮಿಕ ನಾಡು ಎಂಬ ಕೀರ್ತಿಗೆ ಪಾತ್ರವಾಗುತ್ತಿದೆ ಎಂದರು.

ಧಾರ್ಮಿಕ ದತ್ತಿ ಪರಿಷತ್ ಸದಸ್ಯರಾದ ಡಾ.ಮಹಾಂತಯ್ಯ ಆರಾಧ್ರಿಮಠ ಶಾಸ್ತ್ರಿಗಳು ಮಾತನಾಡಿ, ತಾವು ಅಧಿಕಾರ ಸ್ವೀಕರಿಸಿದ ಬಳಿಕ ಮಠಮಾನ್ಯಗಳ, ದೇವಸ್ಥಾನಗಳ ಅಭಿವೃದ್ಧಿಗೆ ರೂ.1 ಕೋಟಿ 45 ಲಕ್ಷ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ. ಆಧ್ಯಾತ್ಮಿಕ ಜೀವಿಗಳಾದ ಶಾಸಕ ಮಹಾಂತೇಶ ಕೌಜಲಗಿ ಅವರ ಸಹಕಾರದೊಂದಿಗೆ ಮುಂಬರುವ ದಿನಗಳಲ್ಲಿ ಅಯ್ಯಪ್ಪ ಸ್ವಾಮಿ ದೇವಸ್ಥಾನ ಅಭಿವೃದ್ಧಿಗೆ ಅನುದಾನ ನೀಡುವ ಭರವಸೆ ನೀಡಿದರು.

ಹಿರಿಯ ಪತ್ರಕರ್ತ ಮಹಾಂತೇಶ ತುರಮರಿ ಮಾತನಾಡಿ, ಮಾಲಾಧಾರಿಗಳು ವ್ರತಾಚರಣೆ ಮುಗಿದ ಬಳಿಕವು ದುಶ್ಚಟಗಳಿಂದ ದೂರವಿದ್ದು ಧರ್ಮದ ಮಾರ್ಗದಲ್ಲಿ ನಡೆಯುವಂತೆ ಕಿವಿಮಾತು ಗಳನ್ನಾಡಿದರು.

ಮುಖ್ಯ ಅತಿಥಿಗಳಾಗಿ ಬೆಣಚನಮರಡಿ ದುರ್ಗಾದೇವಿ ದೇವಸ್ಥಾನದ ಧರ್ಮದರ್ಶಿಗಳಾದ ಕವಲಮ್ಮತಾಯಿಯವರು,ಮಹಾಂತೇಶ ಸಾಣಗಿ, ಮಹಾದೇವಿ ಸಾಣಗಿ, ಶ್ರೀಕಾಂತ ಮತ್ತಿಕೊಪ್ಪ, ಶಂಕರ ಬೋಳನ್ನವರ,ನಾಗರಾಜ ಶೆಟ್ಟಿ, ದೀಪಕ ಶೆಟ್ಟಿ,ಪ್ರದೀಪ ಶೆಟ್ಟಿ, ಅನಿತಾ ಹೋಟಿ ಆಗಮಿಸಿದ್ದರು.

ದೇವಸ್ಥಾನದ ಗುರುಸ್ವಾಮಿಗಳಾದ ವಿಠ್ಠಲ ನಾರಾಯಣಪುರ, ರುದ್ರಪ್ಪ ಮೆಟಗುಡ್ಡ,ವಿಶ್ವನಾಥ ಮೆಟಗುಡ್ಡ,ಮೋಹನ ಪೂಜೇರಿ, ಬಸವರಾಜ ತೋಟಗಿ, ಮಲ್ಲಿಕಾರ್ಜುನ ಉಡಿಕೇರಿ,ಸುರೇಶ ಭಂಡಾರಿ,ಅಭಿಷೇಕ ಬೋಳನ್ನವರ,ಸಚಿನ ರಾವುಳ, ರಮೇಶ ಜಿಗಜಿಂಪಿ,ಗಂಗಾಧರ ಸಾಲಿಮಠ,ಈರಣ್ಣ ಹುಣಶೀಕಟ್ಟಿ ಸೇರಿದಂತೆ ಮತ್ತಿತರರು ಕಾರ್ಯಕ್ರಮ ಯಶಸ್ಸಿಗೆ ಶ್ರಮಿಸಿದರು.

ಇದೇ ವೇಳೆ ಯುವ ಸಾಹಿತಿ, ಗಾಯಕ ವೇ. ಮೂ. ವಿರೇಶ ನಂದಳ್ಳಿಮಠ ಅವರ ರಚನೆಯ ಗೀತೆಗಳ ಧ್ವನಿಸುರುಳಿ ಬಿಡುಗಡೆಗೊಳಿಸಲಾಯಿತು.

ಕಲಾವಿದರಾದ ಓಂಕಾರ್ ಪತ್ತಾರ, ದೊಡ್ಡಪ್ಪ ಮಾದರ, ಕಲಾವೃಕ್ಷ ಡ್ಯಾನ್ಸ್ ಅಕಾಡೆಮಿಯ ವಿದ್ಯಾರ್ಥಿಗಳ ರಸಮಂಜರಿ ಕಾರ್ಯಕ್ರಮಗಳಿಗೆ ಮನಸೋತ ಭಕ್ತಾದಿಗಳು ವಿವಿಧ ಹೂಗಳಿಂದ ಅಲಂಕೃತವಾಗಿರುವ ಅಯ್ಯಪ್ಪಸ್ವಾಮಿ,ದೇವಸ್ಥಾನ, ಹಾಗೂ ಕೆಂಡಸೇವೆಯನ್ನು ಕಣ್ತುಂಬಿಕೊಂಡು ಪ್ರಸಾದ ಸವಿದು ಧನ್ಯತಾ ಭಾವ ಹೊಂದಿದರು.

### ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವ ಪೂರ್ವಭಾವಿ ಸಭೆ

## ಜ.12-13 ರಂದು ಸಂಗೊಳ್ಳಿ ರಾಯಣ್ಣ ಉತ್ಸವ ಆಚರಣೆಗೆ ನಿರ್ಧಾರ: ಶಾಸಕ ಮಹಾಂತೇಶ ಕೌಜಲಗಿ




ಬೆಳಗಾವಿ, : ಪ್ರತಿ ವರ್ಷದಂತೆ ಈ ಬಾರಿಯು ಜನೇವರಿ 12 ಹಾಗೂ 13 ರಂದು ಅದ್ದೂರಿಯಾಗಿ ಸಂಗೊಳ್ಳಿ ರಾಯಣ್ಣನ ಉತ್ಸವವನ್ನು ಆಚರಿಸಲಾಗುವುದು ಎಂದು ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರು ಹಾಗೂ ಬೈಲಹೊಂಗಲ ಶಾಸಕರಾದ ಮಹಾಂತೇಶ ಕೌಜಲಗಿ ಅವರು ಹೇಳಿದರು.

ಸಂಗೊಳ್ಳಿ ಗ್ರಾಮದ ಸ್ಮಾರಕ ಭವನದಲ್ಲಿ ಶನಿವಾರ (ಜ.4) ಜರುಗಿದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವ-2025ರ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಯಣ್ಣನ ಇತಿಹಾಸವನ್ನು ವಿಶ್ವಕ್ಕೆ ತಿಳಿಸುವ ಕಾರ್ಯವನ್ನು ಸರಕಾರದಿಂದ ಮಾಡಲಾಗುತ್ತಿದೆ. ಜನೇವರಿ 12 ಹಾಗೂ 13 ರಂದು ಎರಡು ದಿನಗಳ ಕಾಲ ಜರುಗಲಿರುವ ಉತ್ಸವದ ಉದ್ಘಾಟನಾ ಕಾರ್ಯಕ್ರಮ ಸೇರಿದಂತೆ ಎಲ್ಲ ಕಾರ್ಯಕ್ರಮಗಳಲ್ಲಿ ಗ್ರಾಮಸ್ಥರು ಭಾಗಿಯಾಗುವುದರ ಮೂಲಕ ಉತ್ಸವವನ್ನು ಯಶಸ್ವಿಗೊಳಿಸಲು ಮನವಿ ಮಾಡಿದರು.

ಉತ್ಸವದ ಮೆರವಣಿಗೆಯಲ್ಲಿ ಉತ್ತಮ ಜಾನಪದ ಕಲಾತಂಡಗಳನ್ನು ಆಯ್ಕೆ ಮಾಡಲಾಗುವದು. ಅಲ್ಲದೇ ಕುಸ್ತಿ ಪಂದ್ಯಾವಳಿಗಳನ್ನು ಆಯೋಜಿಸಿ ಉತ್ತಮ ಕುಸ್ತಿ ಪಟುಗಳನ್ನು ಆಹ್ವಾನಿಸಲಾಗುವದು ಎಂದರು.

ರಾಯಣ್ಣನ ಉತ್ಸವ ಗ್ರಾಮಸ್ಥರ ಉತ್ಸವವಾಗಿದ್ದು, ಗ್ರಾಮಸ್ಥರೆಲ್ಲರೂ ಸೇರಿ ಉತ್ಸವ ಯಶಸ್ವಿಗೊಳಿಸಬೇಕು. ಅಲ್ಲದೇ ಉತ್ಸವದ ದಿನಗಳಂದು ಆಯೋಜಿಸಲಾಗುವ ವಿಚಾರ ಸಂಕೀರಣಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಅವರು ಮನವಿ ಮಾಡಿದರು.

ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಮಾತನಾಡಿ, ಎರಡು ದಿನಗಳ ಕಾಲ ಜರುಗಲಿರುವ ರಾಯಣ್ಣನ ಉತ್ಸವವನ್ನು ಅದ್ದೂರಿಯಾಗಿ ಆಯೋಜಿಸಲಾಗುವದು. ಈ ಉತ್ಸವ ಯಶಸ್ವಿಯಾಗಬೇಕಾದರೆ ಗ್ರಾಮಸ್ಥರ ಸಹಕಾರ ಅತ್ಯಗತ್ಯವಾಗಿದೆ ಎಂದರು.

ಮುಂದಿನ ಪೀಳಿಗೆಗೆ ಇತಿಹಾಸವನ್ನು ತಿಳಿಸುವ ಕುರಿತು ಉತ್ಸವಗಳನ್ನು ಆಯೋಜಿಸಲಾಗುತ್ತಿದೆ. ಸಂಗೊಳ್ಳಿ ರಾಯಣ್ಣನ ಉತ್ಸವದ ಯಶಸ್ವಿಗಾಗಿ 13 ಉಪ ಸಮಿತಿಗಳನ್ನು ರಚಿಸಲಾಗುವುದು. ಈ ಸಮಿತಿಗಳಲ್ಲಿ ಅಧಿಕಾರಿಗಳ ಜೊತೆ ಗ್ರಾಮಸ್ಥರನ್ನು ಸದಸ್ಯರನ್ನಾಗಿ ನೇಮಿಸಲಾಗುವದು. ಈ ಸಮಿತಿಗಳ ಸಭೆಯಲ್ಲಿ ಸಂಗೊಳ್ಳಿ ಹಾಗೂ ರಾಯಣ್ಣನ ಇತಿಹಾಸವನ್ನು ಪರಿಣಾಮಕಾರಿಯಾಗಿ ಪಸರಿಸುವಂತಹ ಸಲಹೆಗಳನ್ನು ನೀಡುವಂತೆ ಜಿಲ್ಲಾಧಿಕಾರಿ ಮೊಹಮ್ಮದ ರೋಷನ್ ತಿಳಿಸಿದರು.

ಸಭೆಯಲ್ಲಿ ಕಿತ್ತೂರ ಶಾಸಕರಾದ ಬಾಬಸಾಹೇಬ ಪಾಟೀಲ, ಗ್ರಾಮ ಪಂಚಾಯತ ಅಧ್ಯಕ್ಷೆ ಶ್ರೀಮತಿ ರೂಪಾ ಸುರೇಶ ಚಚಡಿ, ಗ್ರಾಮ ಪಂಚಾಯತ ಸದಸ್ಯರು, ಬೈಲಹೊಂಗಲ ಉಪವಿಭಾಗಾಧಿಕಾರಿ ಪ್ರಭಾವತಿ ಫಕೀರಪುರ, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಬಸವರಾಜ ಹೆಗನಾಯಕ, ಬೈಲಹೊಂಗಲ ಡಿ.ವೈ.ಎಸ್.ಪಿ ರವಿ ನಾಯಕ, ಲೊಕೊಪಯೋಗಿ ಇಲಾಖೆ ಕಾರ್ಯನಿರ್ವಾಹಕ ಅಭಿಯಂತರ ಸೊಬರದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಬೈಲಹೊಂಗಲ ಹಾಗೂ ಕಿತ್ತೂರಿನ ತಹಶೀಲ್ದಾರರು, ಕಾರ್ಯನಿರ್ವಾಹ ಅಧಿಕಾರಿಗಳು, ವಿವಿಧ ಇಲಾಖೆ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ಸಭೆಯಲ್ಲಿ ಭಾಗವಹಿಸಿದ್ದ ಸಾರ್ವಜನಿಕರು ಉತ್ಸವದ ಪ್ರಯುಕ್ತ ಡೊಳ್ಳಿನ ಪದಗಳ ಆಯೋಜನೆ. ದ್ವಾರ ಬಾಗಿಲು ಸೇರಿದಂತೆ ಸಂಗೊಳ್ಳಿ ಗ್ರಾಮವನ್ನು ದೀಪಾಲಂಕಾರದಿಂದ ಅಲಂಕರಿಸಬೇಕು. ಪುರುಷ ಹಾಗೂ ಮಹಿಳಾ ಕುಸ್ತಿ ಪಂದ್ಯಗಳನ್ನು ಆಯೋಜಿಸಬೇಕು. ಸಾಯಂಕಾಲ ಜರುಗುವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ತಡರಾತ್ರಿಯವರೆಗೆ ಜರುಗಿಸಲು ಮನವಿ ಮಾಡಿದರು.

ಮೆರವಣಿಗೆಯಲ್ಲಿ ಪಾಲ್ಗೊಳ್ಳುವ ಕಲಾ ತಂಡಗಳು ಕೊನೆಯವರೆಗೂ ಮೆರವಣಿಗೆ ಜೊತೆ ಸಾಗಬೇಕು. ರಾಯಣ್ಣನ ಜ್ಯೋತಿ ಜಿಲ್ಲಾದ್ಯಂತ ಸಂಚರಿಸಬೇಕು. ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಅವಕಾಶ ಸೇರಿದಂತೆ ಅನೇಕ ಸಲಹೆಗಳನ್ನು ಸಭೆಗೆ ನೀಡಿದರು.

## ಬಸ್ ಪ್ರಯಾಣ ದರದಲ್ಲಿ ಶೇ.15ರಷ್ಟು ಹೆಚ್ಚಳ : ಇಂದಿನಿಂದಲೇ ಪರಿಷ್ಕೃತ ದರ ಜಾರಿ

ಬೆಂಗಳೂರು : ಕರ್ನಾಟಕ ರಾಜ್ಯ ರಸ್ತೆ ಸಾರಿಗೆ (ಕೆ-ಎಸ್ಸಾರ್ಟಿಸಿ), ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ(ಬಿ-ಎಂಟಿಸಿ) ಸೇರಿದಂತೆ ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳ ಬಸ್ ಪ್ರಯಾಣ ದರವನ್ನು ಶೇ.15ರಷ್ಟು ಹೆಚ್ಚಿಸಲು ರಾಜ್ಯ ಸರಕಾರವು ಅನುಮೋದನೆ ನೀಡಿದ್ದು, ನಾಳೆಯಿಂದಲೇ ಪರಿಷ್ಕೃತ ದರ ಜಾರಿಯಾಗಲಿದೆ.


ಬಿಎಂಟಿಸಿಯು 2015ರಲ್ಲಿ ಶೇ.17ರಷ್ಟು ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ಸಾರಿಗೆ ನಿಗಮಗಳು 2020ರಲ್ಲಿ ಶೇ.12ರಷ್ಟು ಪ್ರಯಾಣದ ದರ ಪರಿಷ್ಕರಣೆ ಮಾಡಿತ್ತು. ಪ್ರಯಾಣ ದರ ಪರಿಷ್ಕರಣೆಗಾಗಿ ನಿಗಮದ ಸಿಬ್ಬಂದಿ ವೇತನ ವೆಚ್ಚ, ಇಂಧನ ವೆಚ್ಚ ಹಾಗೂ ನಿರ್ವಹಣಾ ವೆಚ್ಚವನ್ನು ಪರಿಗಣಿಸಲಾಗುತ್ತಿದೆ.

ಪ್ರಸ್ತುತ 9.56 ಕೋಟಿ ರೂ.ಮೊತ್ತವನ್ನು ಹೆಚ್ಚುವರಿಯಾಗಿ ವೆಚ್ಚ ಮಾಡುತ್ತಿದ್ದು, ಸಿಬ್ಬಂದಿ ವೆಚ್ಚ ಸೇರಿ ವಾರ್ಷಿಕವಾಗಿ 3,650 ಕೋಟಿ ರೂ.ನಿಗಮಕ್ಕೆ ಹೊರೆಯಾಗುತ್ತಿದೆ. ಆದರಿಂದ ಶೇ.15ರಷ್ಟು ಪ್ರಯಾಣದ ದರ ಹೆಚ್ಚಳ ಮಾಡಲು ನಿಗಮಗಳು ಪ್ರಸ್ತಾವ ಸಲ್ಲಿಸಲಾಗಿತ್ತು ಎಂದು ತಿಳಿಸಲಾಗಿದೆ.

ನಾಲ್ಕು ನಿಗಮಗಳು ಸುಮಾರು 1,01,648 ಸಿಬ್ಬಂದಿಗಳನ್ನು ಹೊಂದಿದ್ದು, ಆಯಾ ನಿಗಮಗಳು ಸಿಬ್ಬಂದಿ ಸಂಬಳ ಮತ್ತು ಎಲ್ಲ ಭತ್ಯೆಗಳನ್ನು ನಿಗಮಗಳ ಆದಾಯದ ಮೂಲಕ ಮಾತ್ರ ಪಾವತಿಸುತ್ತಿವೆ. ರಾಜ್ಯದ ನಾಲ್ಕು ರಸ್ತೆ ಸಾರಿಗೆ ನಿಗಮಗಳ 2024-25ನೆ ಆರ್ಥಿಕ ವರ್ಷದ ಒಟ್ಟು ಆದಾಯ 8418.46 ಕೋಟಿ ರೂ.ಗಳಾಗಿದ್ದು, ನಾಲ್ಕು ಸಾರಿಗೆ ಸಂಸ್ಥೆಗಳು ಒಟ್ಟು 9511.41 ಕೋಟಿ ರೂ.ಗಳ ವೆಚ್ಚವನ್ನು ಮಾಡಿರುತ್ತವೆ. ಪ್ರಸ್ತುತ 2024-25ನೆ ಆರ್ಥಿಕ ವರ್ಷದಲ್ಲಿ(ನವೆಂಬರ್ ವರೆಗೆ) ನಿವ್ವಳ ಕೊರತೆಯು 1092.95 ಕೋಟಿ ರೂ.ಗಳಷ್ಟಿರುತ್ತದೆ ಎಂದು ಪ್ರಸ್ತಾವದಲ್ಲಿ ತಿಳಿಸಿತ್ತು.

ಸಾರಿಗೆ ನಿಗಮಗಳಿಂದ ಆಚರಣೆ ಮಾಡುತ್ತಿರುವ ವಿವಿಧ ಮಾದರಿಯ ಬಸ್‌ಗಳಿಗೆ ಪ್ರತಿ ಕಿ.ಮೀ.ಗೆ ವಿಧಿಸುತ್ತಿರುವ ದರಗಳನ್ನು ನೆರೆ ರಾಜ್ಯಗಳಿಗೆ ಹೋಲಿಸಿದಲ್ಲಿ ನಮ್ಮ ರಾಜ್ಯದ ನಿಗಮಗಳ ಪ್ರಯಾಣ ದರ ಕಡಿಮೆಯಿದೆ.

ಈ ಎಲ್ಲ ಕಾರಣಗಳಿಂದ ರಾಜ್ಯದ ರಸ್ತೆ ಸಾರಿಗೆ ಸಂಸ್ಥೆಗಳು ಆರ್ಥಿಕವಾಗಿ ಮುನ್ನಡೆಯಲು ಆರ್ಥಿಕ ಪರಿಸ್ಥಿತಿಯ ಸುಧಾರಣೆಗೆ ಹಾಗೂ ಹಮ್ಮಿಕೊಳ್ಳಲಾಗಿರುವ ಯೋಜನೆಗಳನ್ನು ಜಾರಿಗೊಳಿಸಲು ಪ್ರಯಾಣಿಕ ಬಸ್ ದರಗಳನ್ನು ಹೆಚ್ಚಿಸಲು ಅನುಮೋದನೆ ನೀಡಿದೆ.




**ಎಲ್ಲಿಂದ-ಎಲ್ಲಿಗೆ-ಪ್ರಸ್ತುತ ಪ್ರಯಾಣ ದರ (ರೂ.ಗಳಲ್ಲಿ)- ಪರಿಷ್ಕೃತ ಪ್ರಯಾಣ ದರ (ರೂ.ಗಳಲ್ಲಿ)**

ಬೆಂಗಳೂರು-ತುಮಕೂರು-80- 91

ಬೆಂಗಳೂರು-ಮಂಗಳೂರು- 398 - 454

ಬೆಂಗಳೂರು - ಉಡುಪಿ - 452 - 516

ಬೆಂಗಳೂರು- ದಾವಣಗೆರೆ - 320- 362

ಬೆಂಗಳೂರು - ಮೈಸೂರು - 141 - 162

ಬೆಂಗಳೂರು - ಕೋಲಾರ- 74- 85

ಬೆಂಗಳೂರು- ಕಲಬುರಗಿ- 706-805

ಬೆಂಗಳೂರು-ಬೀದರ್- 821-936

ಬೆಂಗಳೂರು- ರಾಯಚೂರು- 560-638

ಬೆಂಗಳೂರು-ಬೆಳಗಾವಿ - 617-697

ಬೆಂಗಳೂರು- ಧಾರವಾಡ-523- 591

# ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆ



ಸಿಂದಗಿ: ರಾಜ್ಯ ಸರ್ಕಾರದ ಮಹತ್ವಕಾಂಕ್ಷೆ ಕಾರ್ಯಕ್ರಮಗಳಾದ ಪಂಚ ಗ್ಯಾರಂಟಿ ಯೋಜನೆಗಳು ಸಮಾಜದ ಕಟ್ಟಕಡೆ ವ್ಯಕ್ತಿಗಳಿಗೂ ತಲುಪಬೇಕು. ಜೊತೆಗೆ ಅರ್ಹರಾದ ಎಲ್ಲ ಫಲಾನುಭವಿಗಳಿಗೆ ತಲುಪಿಸುವ ಅಗತ್ಯ ಕ್ರಮಕೈಕೊಳ್ಳಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಶ್ರೀಶೈಲ ಕವಲಗಿ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಪಟ್ಟಣದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಸರಕಾರದ 5ಗ್ಯಾರಂಟಿ ಯೋಜನೆಗಳ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಅವರು, ಸಾರ್ವಜನಿಕರ ಏಳಿಗೆಗಾಗಿ ರಾಜ್ಯ ಸರ್ಕಾರ ಜಾರಿಗೆ ತಂದ ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ ಹಾಗೂ ಯುವನಿಧಿ ಯೋಜನೆ ಒಳಗೊಂಡ ಪಂಚ ಗ್ಯಾರಂಟಿ ಯೋಜನೆಗಳು ಜನಪರ ಕಾರ್ಯಕ್ರಮಗಳಾಗಿದ್ದು, ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಆರ್ಥಿಕ ಸಬಲೀಕರಣಕ್ಕೆ ತುಂಬಾ ಸಹಕಾರಿಯಾಗಿದೆ. ಯಾವುದೇ ಮಧ್ಯವರ್ತಿಗಳಿಲ್ಲದೇ ಜನರಿಗೆ ನೇರವಾಗಿ ಐದು ಗ್ಯಾರಂಟಿ ಯೋಜನೆಗಳ ಲಾಭ ಸಿಗುತ್ತಿದೆ. ರಾಜ್ಯ ಸರ್ಕಾರದ ಸಾಮಾಜಿಕ ಪರಿವರ್ತನೆಯ ಕಾರ್ಯಕ್ರಮಗಳಿಂದ ಮಹಿಳೆಯರ ಸಬಲೀಕರಣಕ್ಕೆ ಅನುಕೂಲವಾಗಿದೆ ಎಂದರು.ಈ ವೇಳೆ ಸಮಿತಿ ಸದಸ್ಯ ರಜತ ತಾಂಬೆ, ಎಸ್.ಬಿ.ಖಾನಾಪೂರ, ಸುನಂದಾ ಯಂಪೂರೆ, ಎಮ್.ಎ.ಬೀಳಗಿ ಮಾತನಾಡಿ, ರಾಜ್ಯ ಸರಕಾರ ಘೋಷಣೆ ಮಾಡಿರುವ ಪಂಚ ಗ್ಯಾರಂಟಿಗಳು ಕೆಲವರ ಖಾತೆಗಳಿಗೆ ಬರುತ್ತಿಲ್ಲ ಎಂಬ ಕೂಗು ಕೇಳಿ ಬರುತ್ತಿದೆ. ಅದಕ್ಕೆ ಸಂಬಂಧಿಸಿದ ಅಧಿಕಾರಿಗಳು ಗಮನ ಹರಿಸಬೇಕು. ಅನ್ನಭಾಗ್ಯದಲ್ಲಿ ಅಕ್ಕಿ ಮಾಫಿಯಾ ನಡೆಯುತ್ತಿದ್ದು, ಅದರೆಡೆಗೆ ಗಮನವಿರಲಿ. ಬಸ್ಸನಲ್ಲಿ ಪ್ರಯಾಣಿಸುವ ಜನರಿಗೆ ನಿರ್ವಾಹಕರು ಮತ್ತು ಚಾಲಕರು ಮಹಿಳೆಯರಿಗೆ ಅಸಭ್ಯವಾಗಿ ವರ್ತಿಸುತಾರೆ. ಜೊತೆಗೆ ನಿಯಂತ್ರಕ ಬಸ್ಸಿನ್ ಮಾಹಿತಿ ಕೇಳಲು ಹೋದ ಪ್ರಯಾಣಿಕರಿಗೂ ಸರಿಯಾದ ಉತ್ತರ ನೀಡದೆ ನಿರ್ಲಕ್ಷ್ಯ ವಹಿಸುತ್ತಿರುವುದು ಕಂಡು ಬರುತ್ತಿದೆ ಇದಕೆಲ್ಲ ಸಂಬಂಧಿಸಿದ ಅಧಿಕಾರಿಗಳು ನಿಗಾ ವಹಿಸುವಂತೆ ಎಚ್ಚರಿಗೆ ನೀಡಿದರು.

ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಂಭುಲಿಂಗ ಹಿರೇಮಠ ಮಾತನಾಡಿ, ತಾಲೂಕಿನಲ್ಲಿ ಶೇ.99.28ರಷ್ಟು ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆಯ ಲಾಭ ದೊರೆತಿದೆ. 37166 ಫಲಾನುಭವಿಗಳು ಅರ್ಜಿ ಸಲ್ಲಿಸಿದ್ದು, ಅದರಲ್ಲಿ 36116 ಫಲಾನುಭವಿಗಳ ಖಾತೆಗೆ ಜಮಾ ಮಾಡಲಾಗಿದೆ. 252 ಫಲಾನುಭವಿಗಳ ತಾಂತ್ರಿಕ ದೋಷವಿದೆ. 45 ಜನರ ಖಾತೆಗಳಲ್ಲಿ ಐಟಿ, ಜಿಎಸ್‌ಟಿ ಇದ್ದ ಬಗ್ಗೆ ತೋರಿಸುತ್ತಿದೆ. ಅದನ್ನು ಪರಿಶೀಲಿಸಿ ಸರಿ ಪಡಿಸುವುದಾಗಿ ತಿಳಿಸದರು.

ಈ ವೇಳೆ ಅಹಾರ ಇಲಾಖೆಯ ಎಫ್.ಐ ವಿದ್ಯಾ ಹಿಪ್ಪರಗಿ ಮಾತನಾಡಿ, ಅಹಾರ ಇಲಾಖೆಯಲ್ಲಿ ಅಕ್ಕಿ ಮಾಫಿಯಾ ನಡೆಯುತ್ತಿರುವುದು ಗಮನಕ್ಕೆ ಬಂದರೆ ಸೂಕ್ತಕ್ರಮ ಕೈಗೊಳ್ಳುವೆ. ನ್ಯಾಯಬೆಲೆ ಅಂಗಡಿಕಾರರ ಸಭೆ ಕರೆದು ಡಿಜಿಟಲ್ ತೂಕದ ಮಶೀನ್ ಅಳವಡಿಸುವಂತೆ ಸೂಚನೆ ನೀಡುತ್ತೇನೆ ಎಂದು ಉತ್ತರಿಸಿದರು.ಇದೇ ಸಂದರ್ಭದಲ್ಲಿ ಕೆಎಸ್‌ಆರ್‌ಟಿಸಿ ಎಎಸ್ ಸಂತೋಚ ವಿ.ಎಚ್. ಮಾತನಾಡಿ, ತಾಲೂಕಿನಲ್ಲಿ 95ಲಕ್ಷಕ್ಕೂ ಅಧಿಕ ಮಹಿಳೆಯರು ಶಕ್ತಿ ಯೋಜನೆಯ ಲಾಭ ಪಡೆದುಕೊಂಡಿದ್ದು, ಇದರಿಂದ ಈ ಬಾರಿ ನಮ್ಮ ಸಿಂದಗಿ ಘಟಕಕ್ಕೆ 35ಕೋಟಿ ಲಾಭವಾಗಿದೆ. ಜೊತೆಗೆ ವಿವಿದೆಡೆ ಬಸ್ಸಿನ ಸೌಲಭ್ಯವನ್ನು ಒದಗಿಸಲಾಗಿದೆ. ಬೆಂಗಳೂರಿಗೆ ಮಹಿಳೆಯರು ತೆರಳಲು ಮುಂಗಡ 20 ಬರಣಾ ಮಾಡಿ ಟಿಕೆಟ್ ಪಡೆದುಕೊಂಡರೆ ಉಚಿತವಾಗಿ ಪ್ರಾಯಾಣಿಸಬಹುದು ಎಂದರು. ಇದೇ ಸಂದರ್ಭದಲ್ಲಿ ತಾಪಂ ಇಒ ರಾಮು ಅಗ್ನಿ, ಗ್ಯಾರಂಟಿ ಸಮಿತಿಯ ಸದಸ್ಯರಾದ ಎಸ್.ಬಿ.ಖಾನಾಪೂರ, ಎಮ್.ಎ.ಬೀಳಗಿ, ಸುನಂದಾ ಯಂಪೂರೆ, ಆರ್.ಎ.ಪಾಟೀಲ, ಸಾಹೇಬಪಟೇಲ್ ಅವಟಿ, ಪರಶುರಾಮ ಗೌಂಡಿ, ರಜತ ತಾಂಬೆ, ಸಿದ್ದಲಿಂಗಪ್ಪ ಗುಂಡಾಪೂರ, ಸಿದ್ರಾಮಪ್ಪ ಕಲ್ಲೂರ, ತಾಪಂ ಐಇಸಿ ಸಂಯೋಜಕ ಭೀಮರಾಯ ಚೌಧರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳಿದ್ದರು.

# ಪತ್ರಕರ್ತ ಹನುಮಾನಸಿಂಗ್ ಜಮಾದಾರ ಅವರಿಗೆ ಸನ್ಮಾನ




ಗದಗ : ಹಿರಿಯ ಪತ್ರಕರ್ತ ಹನುಮಾನ ಸಿಂಗ್ ಜಮಾದಾರ ಅವರಿಗೆ 2023 ನೇ ಸಾಲಿನ ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಲಭಿಸಿದ್ದಕ್ಕಾಗಿ ಸನ್ಮಾನಿಸಲಾಯಿತು.

1990 ರಿಂದ ಪತ್ರಿಕಾ ರಂಗದಲ್ಲಿ ಸೇವೆ ಸಲ್ಲಿಸಿದ ಅವರು ಹಲವಾರು ಪತ್ರಿಕಾ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸಿದ್ದು ಪತ್ರಿಕಾ ರಂಗದಲ್ಲಿಯೇ 34 ವರ್ಷಗಳ ಅನುಭವ ಹೊಂದಿರುವ ಇವರು ಪ್ರಸ್ತುತ ಗದಗ ಜಿಲ್ಲೆಯಿಂದ ಪ್ರಕಟವಾಗುತ್ತಿರುವ ನವೋದಯ ಕನ್ನಡ ಪ್ರಾದೇಶಿಕ ಪತ್ರಿಕೆಯ ಹಿರಿಯ ವರದಿಗಾರರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇವರಿಗೆ ಈ ಹಿಂದೆ ಗದಗ ಜಿಲ್ಲಾಡಳಿತದಿಂದ ಪತ್ರಿಕಾ ರಂಗದ ಸೇವೆ ಗುರುತಿಸಿ ಸನ್ಮಾನಿಸಲಾಗಿತ್ತು.

ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಗದಗ ಕಚೇರಿಯಲ್ಲಿ ಶುಕ್ರವಾರ ಪ್ರಾಧಿಕಾರದ ಆಯುಕ್ತರಾದ ಡಾ. ಶರಣು ಗೋಗೇರಿ ಸೇರಿದಂತೆ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ, ವಾರ್ತಾಧಿಕಾರಿ ವಸಂತ ಮಡ್ಲೂರ, ವಯಸ್ಕರ ಶಿಕ್ಷಣಾಧಿಕಾರಿ ಶಿವಕುಮಾರ ಕುರಿಯವರ ಸೇರಿದಂತೆ ಶಿವಶಂಕರ ಯಳವತ್ತಿ, ಸಂತೋಷ ಕುರಿ , ಪ್ರತೀಕ ಮೇಳನವರ, ಫಯಾಜ ನದಾಫ್ ಅವರುಗಳು ಸನ್ಮಾನಿಸಿ ಶುಭ ಕೋರಿದರು.

# ಮನಗೂಳಿಯಲ್ಲಿ ಸಿದ್ದೇಶ್ವರ ಸ್ವಾಮೀಜಿಯವರಿಗೆ ನುಡಿನಮನ




ಬಸವನಬಾಗೇವಾಡಿ: ತಾಲೂಕಿನ ಮನಗೂಳಿ ಪಟ್ಟಣದ ಬಸ್ ನಿಲ್ದಾಣದ ಪಕ್ಕದಲ್ಲಿರುವ ಮಾಜಿ ಸಚಿವ ದಿ.ಬಿ.ಎಸ್.ಪಾಟೀಲ ಮನಗೂಳಿ ಅವರ ಪ್ರತಿಮೆ ಆವರಣದಲ್ಲಿ ಗುರುವಾರ ವಿಜಯಪುರ ಜ್ಞಾನಯೋಗಾಶ್ರಮದ ಪೂಜ್ಯ ಸಿದ್ದೇಶ್ವರ ಸ್ವಾಮೀಜಿಯವರ ಗುರುನಮನದಂಗವಾಗಿ ಗುರುವಾರ ನುಡಿ ನಮನ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಹಿರೇಮಠದ ಅಭಿನವ ಸಂಗನಬಸವ ಸ್ವಾಮೀಜಿ ಮಾತನಾಡಿ, ಈ ನಾಡಿಗೆ ಭಕ್ತರಿಗೆ ತಮ್ಮದೇಯಾದಂತಹ ಕೊಡುಗೆಯನ್ನು ನೀಡಿರುವ ಸಿದ್ದೇಶ್ವರ ಪೂಜ್ಯರ ತತ್ವಾದರ್ಶಗಳನ್ನು ಯುವಜನಾಂಗ ಅಳವಡಿಸಿಕೊಳ್ಳಬೇಕಿದೆ. ಅವರು ಹೇಳಿರುವ ಪ್ರವಚನಗಳನ್ನು ಪ್ರತಿಯೊಬ್ಬ ಮಕ್ಕಳಿಗೆ ಕೇಳಿಸುವಂತಹ ಕಾರ್ಯ ಪಾಲಕರು ಮಾಡಬೇಕು. ಇಂತಹ ಪರಮಪೂಜ್ಯರನ್ನು ಪಡೆದ ನಾವೆಲ್ಲರೂ ಧನ್ಯ ಎಂದರು.

ಇಡೀ ಜಗತ್ತಿಗೆ ಸಮಾನತೆ ಸಂದೇಶ ನೀಡಿದ ವಿಶ್ವಗುರು ಬಸವೇಶ್ವರರರು ಜನಿಸಿದ ಬಸವನಬಾಗೇವಾಡಿ, ಪೂಜ್ಯ ಸಿದ್ದೇಶ್ವರರು ಜನಿಸಿದ ಸ್ಥಳ ಬಸವನಬಾಗೇವಾಡಿ ತಾಲೂಕಿನ ನಂದಿಹಾಳ ಪಿಯು ಗ್ರಾಮವಾಗಿದೆ. ಇಂತಹ ಮಹಾನ್ ಪುರುಷರು ಜನಿಸಿದ ಈ ನಾಡು ಪುಣ್ಯದ ಬೀಡಾಗಿದೆ. ಇವರು ನೀಡಿರುವ ಸಂದೇಶಗಳು ಎಲ್ಲರಿಗೂ ಮಾರ್ಗದರ್ಶನವಾಗಲೆಂದರು.

ಮುಖಂಡರಾದ ಅಪ್ಪುಗೌಡ ಪಾಟೀಲ, ವಿಶ್ವನಾಥಗೌಡ ಪಾಟೀಲ ಇತರರು ಮಾತನಾಡಿದರು. ಕಾರ್ಯಕ್ರಮದಲ್ಲಿ ಶರಣಯ್ಯ ನಂದಿಕೋಲಮಠ,ಮಲ್ಲು ಯಾದವಾಡ. ಗೋವಿಂದಪ್ಪ ಚನ್ನಳ, ಶಿವಾನಂದ ಶಿರೋಳ, ಶೇಖಪ್ಪಗೌಡ ಬಿರಾದಾರ, ರವಿಗೌಡ ಪಾಟೀಲ ಇತರರು ಇದ್ದರು.

# ಬಸವನಬಾಗೇವಾಡಿ ಮತಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸಿದ್ದೇನೆ: ಸಚಿವ ಶಿವಾನಂದ ಪಾಟೀಲ



ಬಸವನಬಾಗೇವಾಡಿ, ಕಳೆದ 20 ವರ್ಷದ ಹಿಂದೆ ಅಭಿವೃದ್ಧಿಯಿಂದ ವಂಚಿತವಾಗಿದ್ದ ಬಸವನಬಾಗೇವಾಡಿ ಮತಕ್ಷೇತ್ರವನ್ನು ನಾನು 2004 ಕ್ಕೆಈ ಮತಕ್ಷೇತ್ರಕ್ಕೆ ಬಂದ ನಂತರ ಸರ್ಕಾರದಿಂದ ಕೋಟಿ ಕೋಟಿ ಅನುದಾನವನ್ನು ತರುವ ಮೂಲಕ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸಿದ್ದೇನೆ ಎಂದು ಸಕ್ಕರೆ, ಜವಳಿ, ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದರು.

ಪಟ್ಟಣದಲ್ಲಿ ತಾಲೂಕು ಆಸ್ಪತ್ರೆಯಲ್ಲಿ ಶುಕ್ರವಾರ ನೂತನವಾಗಿ ನಿರ್ಮಿಸಿದ ಸಾರ್ವಜನಿಕ ಆರೋಗ್ಯ ಘಟಕ ಪ್ರಯೋಗಾಲಯ ಕಟ್ಟಡ ಉದ್ಘಾಟಿಸಿದ ನಂತರ ಪುರಸಭೆಯ ವಿವಿಧ ಯೋಜನೆ ಅಡಿಯಲ್ಲಿ ಅಂದಾಜು ರೂ. 17 ಕೋಟಿ ವೆಚ್ಚದ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಸಾರ್ವಜನಿಕ ಆಸ್ಪತ್ರೆಗೆ ಸರ್ಕಾರ ನೀಡಿದ ಅನುದಾನವನ್ನು ಎಲ್ಲಿಯೂ ದುರುಪಯೋಗ ಮಾಡಿಕೊಳ್ಳದೇ ಸದುಪಯೋಗ ಮಾಡಿಕೊಂಡು ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡುವ ಮೂಲಕ ಜಿಲ್ಲಾ ಆಸ್ಪತ್ರೆಯ ಒತ್ತಡವನ್ನು ತಪ್ಪಸಿದ್ದು ಶ್ಲಾಘನೀಯ. ತಾಲೂಕು ಆಸ್ಪತ್ರೆ ಕಳೆದ ಮೂರು ವರ್ಷದಿಂದ ರಾಜ್ಯ ಮಟ್ಟದಲ್ಲಿ ಪ್ರಥಮ, ದ್ವಿತೀಯ ಸ್ಥಾನ ಪಡೆಯುವ ಮೂಲಕ ಹೆಗ್ಗಳಿಕೆಗೆ ಪಾತ್ರವಾಗಿದೆ.

ಇಲ್ಲಿನ ತಾಲೂಕು ಆಸ್ಪತ್ರೆಯಲ್ಲಿ ತಜ್ಞ ವೈದ್ಯರಿಂದ ಗುಣಮಟ್ಟದ ಚಿಕಿತ್ಸೆಯನ್ನು ಜನತೆ ಪಡೆದುಕೊಳ್ಳಬಹುದು ಎಂದು ಹೇಳಿದರು.

ಬಸವನಬಾಗೇವಾಡಿಯ ಬಸವ ಭಕ್ತರ ಬಹು ದಿನಗಳ ಬೇಡಿಕೆಯಾಗಿದ್ದ ಬಸವನಬಾಗೇವಾಡಿ ಅಭಿವೃದ್ಧಿ ಪ್ರಾಧಿಕಾರ ಸ್ಥಾಪನೆಯಾಗಿದೆ. ಮುಂಬರುವ ದಿನಗಳಲ್ಲಿ ಪಟ್ಟಣವು ಇನ್ನಷ್ಟು ಅಭಿವೃದ್ಧಿ ಹೊಂದಲಿದೆ. ಉತ್ತಮ ವ್ಯಾಪಾರದ ಹಿತದೃಷ್ಟಿಯಿಂದ ಪಟ್ಟಣದಲ್ಲಿ ರೂ.40 ಕೋಟಿ ವೆಚ್ಚದಲ್ಲಿ 130 ಕ್ಕೂ ಅಧಿಕ ಮಳಿಗೆಯನ್ನು ಹೊಂದಿದ ಜಿಲ್ಲೆಯಲ್ಲಿಯೇ ಮಾದರಿಯಾದ ಮೆಗಾ ಮಾರುಕಟ್ಟೆಯನ್ನು ಪಟ್ಟಣದ ಹೃದಯ ಭಾಗದಲ್ಲಿ ನಿರ್ಮಾಣ ಮಾಡಲಾಗಿದೆ. ಇದು ವ್ಯಾಪಾರಸ್ಥರಿಗೆ, ಗ್ರಾಹಕರಿಗೆ ಉತ್ತಮ ಅನುಕೂಲ ಕಲ್ಪಿಸುತ್ತದೆ. ಮಾರುಕಟ್ಟೆ ಆವರಣದಲ್ಲಿ ವಾಹನಗಳ ನಿಲುಗಡೆಗೆ ಸ್ಥಳ ಕಲ್ಪಿಸಲಾಗಿದ್ದು, ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆ. ಮುಂದಿನ ದಿನಮಾನಗಳಲ್ಲಿ ಮೆಗಾ ಮಾರುಕಟ್ಟೆಗೆ ಬಸವೇಶ್ವರ ಮಾರುಕಟ್ಟೆ ಎಂಬ ಹೆಸರು ನಾಮಕರಣ ಮಾಡಲಾಗುವುದು ಎಂದು ಹೇಳಿದರು.

ಈ ಭಾಗದ ಜನರ ಬಹು ದಿನಗಳ ಬೇಡಿಕೆಯಾಗಿರುವ ಕಂದಾಯ ಉಪವಿಭಾಗಾಧಿಕಾರಿಗಳ ಕಚೇರಿಯ ಸ್ಥಾಪನೆಗೆ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ. ಈಗಾಗಲೇ ಈ ಕುರಿತು ಪ್ರಸ್ತಾವನೆ ಸಲ್ಲಿಸಲಾಗಿದೆ. ಪಟ್ಟಣದಲ್ಲಿ ಬಸವಣ್ಣನವರ ಆಚಾರ-ವಿಚಾರ ಪ್ರತಿಬಿಂಬಿಸುವಂತಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯ ಸಹಕಾರ ಮಹಾಮಂಡಳ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ, ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷ ಸುರೇಶ ಹಾರಿವಾಳ, ಮುಖಂಡರಾದ ಶೇಖರ ಗೊಳಸಂಗಿ, ಸುರೇಶಗೌಡ ಪಾಟೀಲ, ಸಂಗಮೇಶ ಓಲೇಕಾರ, ಶಿವನಗೌಡ ಬಿರಾದಾರ, ಶಂಕರಗೌಡ ಬಿರಾದಾರ, ಬಸವರಾಜ ಕೋಟಿ, ಜಗದೇವಿ ಗುಂಡಳ್ಳಿ, ಸಂಜೀವ ಕಲ್ಯಾಣಿ, ಪ್ರವೀಣ ಪೂಜಾರಿ, ಶರಣಪ್ಪ ಬೆಲ್ಲದ, ಜಟ್ಟಿಂಗರಾಯ ಮಾಲಗಾರ, ಬಸವರಾಜ ರಾಯಗೊಂಡ, ತಹಶೀಲ್ದಾರ ವೈ.ಎಸ್.ಸೋಮನಕಟ್ಟಿ, ಡಿ.ಎಚ್.ಓ ಸಂಪತ್ತ ಗುಣಾರಿ, ಡಾ.ಸಾಬೀರ ಪಟೇಲ, ಡಾ.ಶ್ರೀನಿಕೇತನ ನಾಯಕ, ಡಾ.ಬಸವರಾಜ ಮುತ್ತತ್ತಿ, ತಾಲೂಕು ಆರೋಗ್ಯಾಧಿಕಾರಿ ಡಾ.ಕವಿತಾ ದೊಡಮನಿ, ಜಿ.ಪಂ ಎಇಇ ವಿಲಾಸ ರಾಠೋಡ, ಲೋಕೋಪಯೋಗಿ ಇಲಾಖೆ ಎಇಇ ಜೆ.ವಿ.ಕಿರಸೂರ, ಪುರಸಭೆ ಮುಖ್ಯಾಧಿಕಾರಿ ಎಚ್.ಎಸ್.ಚಿತ್ತರಗಿ, ಕೆಐಎಡಿಬಿ ಎಇಇ ಆನಂದಸ್ವಾಮಿ, ಡಿ.ವೈ.ಎಸ್.ಪಿ ಬಲ್ಲಪ್ಪ ನಂದಗಾವಿ, ಸಿಪಿಐ ಗುರುಶಾಂತ ದಾಶ್ಯಾಳ ಇತರರು ಇದ್ದರು.

*******

### ಜಿಲ್ಲೆಯಾದ್ಯಂತ ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಕಾರ್ಯ ಆರಂಭ

### ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಅಂತರವಳ್ಳಿ

ಧಾರವಾಡ : 2024-25 ನೇ ಸಾಲಿನ ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಕಾರ್ಯ ಆರಂಭವಾಗಿದೆ. ಜಿಲ್ಲೆಯ ರೈತರು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆಗಳನ್ನು ತಾವೇ ಸ್ವತಃ ಹಿಂಗಾರು ರೈತರ ಬೆಳೆ ಸಮೀಕ್ಷೆ 2024-25 ಎಂಬ ಹೆಸರಿನ ಮೊಬೈಲ್ ಆ್ಯಪ್‌ನ (ತಂತ್ರಾಂಶ) ಮೂಲಕ ಮಾಡಬಹುದಾಗಿದೆ. ಈ ಮೊಬೈಲ್ ಆ್ಯಪ್‌ನ್ನು ಗೂಗಲ್ ಪ್ಲೇ ಸ್ಟೋರನಿಂದ ಡೌನಲೋಡ್ ಮಾಡಿಕೊಂಡು ಸಮೀಕ್ಷೆ ಕೈಗೊಳ್ಳಬಹುದಾಗಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ರೈತರ ಮೊಬೈಲ್ ಆ್ಯಪ್ ಮುಖಾಂತರ ಅಥವಾ ಕಂದಾಯ ಇಲಾಖೆಯಿಂದ ನೇಮಕಗೊಂಡ ಖಾಸಗಿ ನಿವಾಸಿಗಳ ಮೋಬೈಲ್ ಆ್ಯಪ್ ಮುಖಾಂತರವೂ ಕೂಡ ಬೆಳೆ ಸಮೀಕ್ಷೆ ಕೈಗೊಳ್ಳಬಹುದಾಗಿದೆ.

ಬೆಳೆ ಸಮೀಕ್ಷೆ ದತ್ತಾಂಶವನ್ನು ಕೃಷಿ, ತೋಟಗಾರಿಕೆ, ರೇಷ್ಮೆ ಬೆಳೆಗಳ ವಿಸ್ತೀರ್ಣ ಲೆಕ್ಕ ಹಾಕುವ ಕಾರ್ಯದಲ್ಲಿ ಬೆಳೆ ವಿಮೆ ಯೋಜನೆಯ ಸರ್ವೆ ನಂಬರ್‌ವಾರು ಬೆಳೆ ಪರಿಶೀಲನೆ, ಹಾಗೂ ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಳ್ಳಲು, ಕನಿಷ್ಠ ಬೆಂಬಲ ಬೆಲೆ ಯೋಜನೆಯ ಅರ್ಹ ಫಲಾನುಭವಿಗಳನ್ನು ಗುರುತಿಸಲು, ಆರ್.ಟಿ.ಸಿ ಯಲ್ಲಿ ಬೆಳೆ ವಿವರ ದಾಖಲಾತಿಗಾಗಿ, ಎನ್.ಡಿ.ಆರ್.ಎಫ್ ಮತ್ತು ಎಸ್.ಡಿ.ಆರ್.ಎಫ್ ಅಥವಾ ಪ್ರಕೃತಿ ವಿಕೋಪ ಸಂದರ್ಭದಲ್ಲಿ ಬೆಳೆ ಹಾನಿ ಕುರಿತು ವರದಿ ಸಿದ್ದಪಡಿಸುವಲ್ಲಿ, ಬ್ಯಾಂಕ್‌ಗಳಲ್ಲಿ ಬೆಳೆ ಸಾಲ ಪಡೆಯುವ ಸಂದರ್ಭದಲ್ಲಿ ಮತ್ತು ಅರ್ಹ ಫಲಾನುಭವಿಗಳ ಪಟ್ಟಿ ತಯಾರಿಸುವ ಸಂದರ್ಭದಲ್ಲಿ ಬೆಳೆ ಸಮೀಕ್ಷೆ ಆದಾರವಾಗಿಟ್ಟಕೊಂಡು ಸಿದ್ದಪಡಿಸುವುದರಿಂದ ರೈತರು ತಪ್ಪದೇ ತಮ್ಮ ಜಮೀನಿನಲ್ಲಿರುವ ಕೃಷಿ, ತೋಟಗಾರಿಕೆ, ಅರಣ್ಯ, ರೇಷ್ಮೆ ಬೆಳೆಗಳ ವಿವರವನ್ನು ಆ್ಯಪ್‌ನಲ್ಲಿ ನಮೂದಿಸಬೇಕು ಎಂದು ಅವರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿಗಳು, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತಾಧಿಕಾರಿಗಳು, ಸಹಾಯಕ ತೋಟಗಾರಿಕೆ ಅಧಿಕಾರಿಗಳು, ರೇಷ್ಮೆ ಇಲಾಖೆಯ ಅಧಿಕಾರಿಗಳನ್ನು ಅಥವಾ ತಮ್ಮ ಗ್ರಾಮಕ್ಕೆ ನೇಮಕಗೊಂಡ ಬೆಳೆ ಸಮೀಕ್ಷೆ ಕೈಗೊಳ್ಳುವ ಖಾಸಗಿ ನಿವಾಸಿಗಳನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೂಜ್ಯ ಸಿದ್ದೇಶ್ವರ ಸ್ವಾಮೀಜಿ ಆಧ್ಯಾತ್ಮ ಲೋಕದ ಸಿರಿ:ಶ್ರೀಶೈಲ ಬಿರಾದಾರ



ಬಸವನಬಾಗೇವಾಡಿ: : ವಿಜಯಪುರದ ಜ್ಞಾನಯೋಗಾಶ್ರಮದ ಪೂಜ್ಯ ಸಿದ್ದೇಶ್ವರ ಸ್ವಾಮೀಜಿಯವರು ಆಧ್ಯಾತ್ಮ ಲೋಕದ ಸಿರಿಯಾಗಿದ್ದಾರೆ. ಇವರು ನೀಡಿರುವ ಸಂದೇಶಗಳು ಎಂದಿಗೂ ಸ್ಮರಣೀಯವಾಗಿವೆ. ಇವುಗಳನ್ನು ನಾವೆಲ್ಲರೂ ಅಂತರಂಗದಲ್ಲಿ ಅಳವಡಿಸಿಕೊಳ್ಳುವ ಮೂಲಕ ಸನ್ಮಾರ್ಗದಲ್ಲಿ ನಡೆಯೋಣವೆಂದು ರೋಣಿಹಾಳ ಗ್ರಾಮದ ಪ್ರಗತಿಪರ ರೈತ ಶ್ರೀಶೈಲ ಬಿರಾದಾರ ಹೇಳಿದರು.

ಪಟ್ಟಣದ ವಿರಕ್ತಮಠದಲ್ಲಿ ಶಿವಲಿಂಗೇಶ್ವರ ವಿರಕ್ತಮಠದ ಶರಣ ಬಳಗ, ಭಾರತೀಯ ಸೃಜನಶೀಲ ಕನ್ನಡ ಸಾಹಿತ್ಯ ಬಳಗ ಹಾಗೂ ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತಿನ ತಾಲೂಕು ಘಟಕದ ಸಹಯೋಗದಲ್ಲಿ ಪೂಜ್ಯ ಸಿದ್ದೇಶ್ವರ ಸ್ವಾಮೀಜಿಯವರ ಗುರುನಮನ ಕಾರ್ಯಕ್ರಮದಂಗವಾಗಿ ಗುರುವಾರ ಸಂಜೆ ಹಮ್ಮಿಕೊಂಡಿದ್ದ ಅಂತರಂಗದ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪೂಜ್ಯ ಸಿದ್ದೇಶ್ವರ ಸ್ವಾಮೀಜಿಯವರು ಜ್ಞಾನನಿಧಿಯಾಗಿದ್ದರು. ಅವರು ತಮ್ಮ ಪ್ರವಚನದಲ್ಲಿ ಜೀವನ ಮೌಲ್ಯ,ಸಾವಯವ ಕೃಷಿ, ಶರಣರ ಸಂದೇಶ ಸೇರಿದಂತೆ ತತ್ವಶಾಸದಲ್ಲಿರುವ ಸಾರವನ್ನು ನಮಗೆ ಉಣಬಡಿಸಿದ್ದಾರೆ. 12 ನೇ ಶತಮಾನದಲ್ಲಿ ಶರಣರ ಬಸವ ಕಲ್ಯಾಣ ಕೈಲಾಸವಾಗಿತ್ತು. ಇಂದು 21 ನೇ ಶತಮಾನದಲ್ಲಿ ಪೂಜ್ಯ ಸಿದ್ದೇಶ್ವರ ಸ್ವಾಮೀಜಿಯವರು ಇದ್ದ ವಿಜಯಪುರದ ಜ್ಞಾನಯೋಗಾಶ್ರಮವು ಕೈಲಾಸವಾಗಿದೆ ಎಂದರೆ ತಪ್ಪಾಗಲಾರದು. ಇಂತಹ ಪೂಜ್ಯರನ್ನು ಪಡೆದುಕೊಂಡು ಈ ನಾಡು ಧನ್ಯವಾಗಿದೆ. ಇವರು ನೀಡಿರುವ ಸಂದೇಶಗಳನ್ನು ನಾವೆಲ್ಲರೂ ಅರಿತುಕೊಂಡು ಪ್ರೀತಿ,ಸಹಬಾಳ್ವೆಯಿಂದ ನಾವೆಲ್ಲರೂ ಇರೋಣವೆಂದರು.

ಸಾನಿಧ್ಯ ವಹಿಸಿದ್ದ ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಮಾತನಾಡಿ, ನಾವೆಲ್ಲರೂ ಸಿದ್ದೇಶ್ವರ ಸ್ವಾಮೀಜಿಯವರ ಅಂತರಂಗವನ್ನು ಹೊಕ್ಕು ನೋಡಿದಾಗ ಅವರ ಕಾಯಕ ಪ್ರಜ್ಞೆ ನಾವು ಅರಿಯಬಹುದು. ಅವರು ಪ್ರವಚನ ಕಾಯಕ ಮಾಡದೇ ಯಾವುದೇ ಆಹಾರ ಸೇವಿಸುತ್ತಿರಲಿಲ್ಲ ಎಂಬುವದು ಅವರು ಕನ್ಹೇರಿ ಮಠದಲ್ಲಿ ವಿಶ್ರಾಂತಿ ಪಡೆಯುವ ಸಂದರ್ಭದಲ್ಲಿ ನಮಗೆ ಗೊತ್ತಾಯಿತು ಎಂದು ಸ್ಮರಿಸಿಕೊಂಡರು. ಸಿದ್ದೇಶ್ವರ ಸ್ವಾಮೀಜಿಯವರಿಂದ ನಾವೆಲ್ಲರೂ ಕಲಿಯುವದು ಬಹಳವಿದೆ. ಅವರ ನಡೆ-ನುಡಿಯನ್ನು ಅಂತರಂಗದಿಂದ ನೋಡಬೇಕಿದೆ. ಅವರು ಸಮಯ ಕೊಡುತ್ತಿರಲಿಲ್ಲ. ಸಮಯ ತೆಗೆದುಕೊಳ್ಳುತ್ತಿದ್ದರು. ಅವರು ನೀಡಿದ ಸಮಯಕ್ಕೆ ಸರಿಯಾಗಿ ಹಾಜರಾಗುತ್ತಿರುವದನ್ನು ನಾವು ಕಾಣುತ್ತೇವೆ. ಇಂತಹ ಶ್ರೀಗಳ ಸಂದೇಶ ಅರಿತು ನಾವೆಲ್ಲರೂ ಮುನ್ನಡೆಯಬೇಕಿದೆ ಎಂದರು.

ಅಂತರಂಗದ ಅರಿವು ಕಾರ್ಯಕ್ರಮದಲ್ಲಿ ಜರುಗಿದ ಕವಿಗೋಷ್ಠಿಯಲ್ಲಿ ಪ್ರಭಾಕರ ಖೇಡದ, ಸುಮಂಗಲಾ ಮಠಪತಿ, ಶಾಂತಾ ಚೌರಿ, ತಾರಾಮತಿ ಹೂಗಾರ, ಅನಿಲ ಬಿರಾದಾರ,ವಿರೇಶ ಗೂಡ್ಲಮನಿ, ಗಂಗಾಧರ ಪಾರಶೆಟ್ಟಿ, ಪ್ರೊ.ಸುಭಾಸ, ಶಿವಕುಮಾರ ಶಿವಶಿಂಪಿ, ದ್ರಾಕ್ಷಾಯಿಣಿ ಬಾಗೇವಾಡಿ ಸೇರಿದಂತೆ 15 ಕ್ಕೂ ಕವಿಗಳು ತಮ್ಮ ಸ್ವರಚಿತ ಕವನ ವಾಚಿಸಿದರು. ವೇದಿಕೆಯಲ್ಲಿ ಮುಖಂಡ ರವಿಗೌಡ ಚಿಕ್ಕೊಂಡ, ತಾಲೂಕು ಜನಪದ ಪರಿಷತ್ತಿನ ಅಧ್ಯಕ್ಷ ದೇವೇಂದ್ರ ಗೋನಾಳ, ಜ್ಞಾನಭಾರತಿ ವಿದ್ಯಾ ಸಂಸ್ಥೆಯ ಅಧ್ಯಕ್ಷ ಎನ್.ಎಸ್. ಹೂಗಾರ ಇದ್ದರು. ಶರಣು ಬಸ್ತಾಳ ಪ್ರಾರ್ಥಿಸಿದರು. ಕೊಟ್ರೇಶ ಹೆಗ್ಡಾಳ ಸ್ವಾಗತಿಸಿದರು. ಬಸವರಾಜ ಹಂಚಲಿ, ಪಿ.ಎಸ್.ಬಾಗೇವಾಡಿ ನಿರೂಪಿಸಿದರು. ಬಿ.ಪ್ಪಿ.ಚಕ್ರಮನಿ ವಂದಿಸಿದರು. ಇದೇ ಸಂದರ್ಭದಲ್ಲಿ ಚಿನ್ಮಯಿ ಹೆಗ್ಡಾಳ, ಸುಪ್ರೀತ ಹದಿಮೂರ ಚಿಣ್ಣರ ಹುಟ್ಟುಹಬ್ಬವನ್ನು ಆಚರಿಸಲಾಯಿತು.

# ಇಂದು ರಬಕವಿ ಬನಹಟ್ಟಿ ತಾಲ್ಲೂಕು ಕಜಾಪ ಉದ್ಘಾಟನೆ

ರಬಕವಿ-ಬನಹಟ್ಟಿ,ಡಿ3: ಇದೇ 5 ರಂದು ಇಲ್ಲಿನ ಶಿವದಾಸಿಮಯ್ಯ ಸಮುದಾಯ ಭವನದಲ್ಲಿ ಬೆಳಗ್ಗೆ 10 ಕ್ಕೆ ಕನ್ನಡ ಜಾನಪದ ಪರಿಷತ್ತು ರಬಕವಿ ಬನಹಟ್ಟಿ ಘಟಕದ ಉದ್ಘಾಟನೆ ನಡೆಯಲಿದೆ. ಕರ್ನಾಟಕ ರಾಜ್ಯ ಜಾನಪದ ಪರಿಷತ್ತಿನ ಅಧ್ಯಕ್ಷ ಡಾ. ಎಸ್.ಬಾಲಾಜಿ ಘಟಕವನ್ನು ಉದ್ಘಾಟಿಸುವರು. ಜಿಲ್ಲಾ ಘಟಕದ ಅಧ್ಯಕ್ಷ ಡಿ.ಎಂ. ಸಾವಕಾರ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ತಾಲ್ಲೂಕು ಘಟಕದ ಅಧ್ಯಕ್ಷ ಆರ್.ವಿ. ಗೌಡರ ಆಶಯ ನುಡಿಗಳನ್ನು ಆಡಲಿದ್ದಾರೆ. ಸಿದ್ಧರಾಜ ಪೂಜಾರಿ, ಬಿ.ಆರ್.ಪೊಲೀಸಪಾಟೀಲ, ಸಿದ್ದಣ್ಣ ಸಣಕಲ, ಚಿದಾನಂದ ಸೊಲ್ಲಾಪುರ, ಪ್ರೊ.ಕೆ.ಎಸ್. ಕೌಜಲಗಿ, ಆರ್.ಬಿ.ನವಲೆ, ಸುರೇಶ ವಸ್ತ್ರದ, ವಿಶ್ವಜ ಕಾಡದೇವರ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಅನೇಕ ಕಲಾ ತಂಡಗಳು ತಮ್ಮ ಜಾನಪದ ಕಲೆಯನ್ನು ಪ್ರದರ್ಶನ ಮಾಡಲಿವೆ ಎಂದು ಘಟಕದ ಅಧ್ಯಕ್ಷ ಆರ್.ವಿ. ಗೌಡರ ತಿಳಿಸಿದರು.

# ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ



ಬಸವನಬಾಗೇವಾಡಿ: ಪಟ್ಟಣದ ಪುರಸಭೆಗೆ ವಿವಿಧ ಯೋಜನೆಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ಕ್ರಿಯಾ ಯೋಜನೆ ಅನುಸಾರ ಕೈಗೊಂಡ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸಕ್ಕರೆ, ಜವಳಿ, ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲರು ಶುಕ್ರವಾರ ಭೂಮಿ ಪೂಜೆ ನೆರವೇರಿಸಿದರು.

ಸಚಿವ ಶಿವಾನಂದ ಪಾಟೀಲರು ಪುರಸಭೆಯ 2023-24 ನೇ ಸಾಲಿನ ಎಸ್‌ಎಫ್‌ಸಿ ವಿಶೇಷ ಅನುದಾನದಡಿ ರೂ. 3.96 ಕೋಟಿ ವೆಚ್ಚದಲ್ಲಿ ಕೈಗೊಂಡಿರುವ ಪಟ್ಟಣದ ವಿವಿಧ ವಾರ್ಡುಗಳಲ್ಲಿ ಸಿಸಿ ರಸ್ತೆ, ಡಾಂಬರೀಕರಣ ರಸ್ತೆ, ಚರಂಡಿ ಕಾಮಗಾರಿ, ಪುರಸಭೆಯ 2023-24 ನೇ ಸಾಲಿನ ಎಸ್‌ಎಫ್‌ಸಿ ವಿಶೇಷ ಅನುದಾನದಡಿ ರೂ. 70 ವೆಚ್ಚದಲ್ಲಿ ಕೈಗೊಂಡಿರುವ ಪಟ್ಟಣದ ಅರಳಿಕಟ್ಟಿಯಿಂದ ಡಾ.ಅಂಬೇಡ್ಕರ ವೃತ್ತದವರೆಗೂ ವಿದ್ಯುತ್ ಕಂಬ ಮತ್ತು ವಿದ್ಯುತ್ ದೀಪಾಲಂಕಾರ ಅಳವಡಿಸುವ ಕಾಮಗಾರಿ, ಪುರಸಭೆಯ 2023-24 ನೇ ಸಾಲಿನ ಎಸ್‌ಎಫ್‌ಸಿ ವಿಶೇಷ ಅನುದಾನದಡಿ ರೂ. 50 ಲಕ್ಷ ವೆಚ್ಚದಲ್ಲಿ ಕೈಗೊಂಡಿರುವ ಪಟ್ಟಣದ ನಂದಿ ತರಕಾರಿ ಮಾರುಕಟ್ಟೆ ಅಭಿವೃದ್ಧಿ ಕಾಮಗಾರಿ, ಪುರಸಭೆಯ 2023-24 ನೇ ಸಾಲಿನ ಎಸ್‌ಎಫ್‌ಸಿ ವಿಶೇಷ ಅನುದಾನದಡಿ ರೂ. 41 ಲಕ್ಷ ವೆಚ್ಚದಲ್ಲಿ ಕೈಗೊಂಡಿರುವ ಪಟ್ಟಣದ ರಾಜು ಪಟ್ಟಣಶೆಟ್ಟಿ ಬಡಾವಣೆಯಲ್ಲಿ ಘನತ್ಯಾಜ್ಯ ವಿಲೇವಾರಿ ವಾಹನಗಳ ನಿಲುಗಡೆಗೆ ಶೆಡ್ ನಿರ್ಮಾಣ ಮತ್ತು ಸಂಗಮ ಅಗಸರ ಮನೆ ಹತ್ತಿರ ಸಿಸಿ ರಸ್ತೆ ನಿರ್ಮಿಸುವ ಕಾಮಗಾರಿ, ಪುರಸಭೆಯ 2023-24 ನೇ ಸಾಲಿನ ಎಸ್‌ಎಫ್‌ಸಿ ವಿಶೇಷ ಅನುದಾನದಡಿ ರೂ. 5 ಕೋಟಿ ವೆಚ್ಚದಲ್ಲಿ ಪಟ್ಟಣದ ಮೆಗಾ ಮಾರುಕಟ್ಟೆ ಮೊದಲನೆ ಮಹಡಿ ಮುಂದುವರೆದ ಕಾಮಗಾರಿ ಹಾಗೂ ಕೂಡಲಸಂಗಮ ಮಂಗಲ ಕಾರ್ಯಾಲಯದ ಅಭಿವೃದ್ಧಿ ಕಾಮಗಾರಿ, ಪುರಸಭೆ 2023-24 ನೇ ಸಾಲಿನ ಎಸ್‌ಎಫ್‌ಸಿ ವಿಶೇಷ ಅನುದಾನದಡಿ ರೂ. 1 ಕೋಟಿ ವೆಚ್ಚದಲ್ಲಿ ಕೈಗೊಂಡಿರುವ ಮಾರುತಿ ಮಂದಿರದ ಹತ್ತಿರ ಸಭಾಭವನ ನಿರ್ಮಾಣ ಕಾಮಗಾರಿ, ಪುರಸಭೆಯ ನಗರೋತ್ಥಾನ ಹಂತ-4 ಯೋಜನೆಯಡಿ ರೂ.25.36 ಲಕ್ಷ ವೆಚ್ಚದಲ್ಲಿ ಕೈಗೊಂಡಿರುವ ನಂದಿ ಮಾರುಕಟ್ಟೆ ಹತ್ತಿರ ವಾಲ್ಮೀಕಿ ಸಮುದಾಯ ಭವನ ನಿರ್ಮಾಣ ಕಾಮಗಾರಿ, ಹುಡ್ಕೋ ಹತ್ತಿರ ಜಾಮೀಯ ನಗರದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ರೂ. 2.50 ಕೋಟಿ ವೆಚ್ಚದಲ್ಲಿ ಕೈಗೊಂಡಿರುವ ಶಾದಿಮಹಲ್ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಈರಣ್ಣ ಪಟ್ಟಣಶೆಟ್ಟಿ, ಸುರೇಶ ಹಾರಿವಾಳ, ಶಿವನಗೌಡ ಬಿರಾದಾರ, ಶೇಖರ ಗೊಳಸಂಗಿ, ಅನಿಲ ಅಗರವಾಲ, ಬಸವರಾಜ ಕೋಟಿ, ಜಟ್ಟಿಂಗರಾಯ ಮಾಲಗಾರ, ಶಂಕರಗೌಡ ಬಿರಾದಾರ, ಬಸವರಾಜ ರಾಯಗೊಂಡ, ಕಾಶೀನಾಥ ರಾಠೋಡ, ಪ್ರವೀಣ ಪೂಜಾರಿ, ಜಗದೇವಿ ಗುಂಡಳ್ಳಿ, ಪರಶುರಾಮ ಜಮಖಂಡಿ, ಕೆ.ಪಿ. ಕುಲಕರ್ಣಿ, ವಿಠ್ಠಲ ಕುಲಕರ್ಣಿ, ವಾದಿರಾಜ ಯಜುರ್ವೇದಿ, ಎಂ.ಡಿ.ಬಳಗನೂರ, ಅಲ್ತಾಪ ಮುದ್ದೇಬಿಹಾಳ. ಕಮಲಸಾ ಕೊರಬು, ರಫೀಕ ಹೊಕ್ರಾಣಿ,ಶಬ್ಬೀರ ನದಾಫ, ರಜಾಕ ಬಾಗವಾನ, ಇಬ್ರಾಹಿಂ ಬಮ್ಮನಹಳ್ಳಿ, ಮತಾಬ ಬಮ್ಮನಹಳ್ಳಿ, ಚಾಂದಬಾಷಾ ಕೊರಬು,ತಹಶೀಲ್ದಾರ ವೈ.ಎಸ್.ಸೋಮನಕಟ್ಟಿ, ಜಿ.ಪಂ ಎಇಇ ವಿಲಾಸ ರಾಠೋಡ, ಲೋಕೋಪಯೋಗಿ ಇಲಾಖೆ ಎಇಇ ಜೆ.ವಿ.ಕಿರಸೂರ, ಪುರಸಭೆ ಮುಖ್ಯಾಧಿಕಾರಿ ಎಚ್.ಎಸ್.ಚಿತ್ತರಗಿ, ಕೆಐಎಡಿಬಿ ಎಇಇ ಆನಂದಸ್ವಾಮಿ, ಡಿ.ವೈ.ಎಸ್.ಪಿ ಬಲ್ಲಪ್ಪ ನಂದಗಾವಿ, ಸಿಪಿಐ ಗುರುಶಾಂತ ದಾಶ್ಯಾಳ, ಪುರಸಭೆ ಅಭಿಯಂತರರಾದ ಮಹಾದೇವ ಜಂಬಗಿ, ಸಂತೋಷ ಗಿಡ್ಡಸಣ್ಣನವರ, ವ್ಯವಸ್ಥಾಪಕ ಸುರೇಶ ಬಾಗೇವಾಡಿ, ಗುತ್ತಿಗೆದಾರರು ಇತರರು ಇದ್ದರು.

# ಸಮಾನತೆ ವಾಣಿ ವಿಶ್ವಕ್ಕೆ ಸಾರಿದ ದೀರ ಮಹಿಳೆ ಸಾವಿತ್ರಿಬಾಯಿ ಪುಲೆ: ಸಚಿವ ಸತೀಶ ಜಾರಕಿಹೊಳಿ




ಬೆಳಗಾವಿ: ಸರ್ವಧರ್ಮಗಳಿಗೂ ಶಿಕ್ಷಣ ಕಲಿಸಿದ ತಾಯಿ ಸಾವಿತ್ರಿಬಾಯಿ ಪುಲೆಯವರು, ಅಕ್ಷರದ ಕ್ರಾಂತಿಯ ಬೀಜ ಬಿತ್ತಿ ಮನುಜರೆಲ್ಲರೂ ಸಮಾನರೆಂಬ ವಾಣಿಯನ್ನು ವಿಶ್ವಕ್ಕೆ ಸಾರಿದ ದೀರ ಮಹಿಳೆ ಸಾವಿತ್ರಿಬಾಯಿ ಪುಲೆಯವರು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಹೇಳಿದರು.

ಇಲ್ಲಿನ ಡಾ. ಬಿ.ಆರ್.ಅಂಬೇಡ್ಕರ್ ಉದ್ಯಾನವನದಲ್ಲಿ ಶುಕ್ರವಾರ ವಿವಿಧ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಆಯೋಜಿಸಲಾದ ಅಕ್ಷರದವ್ವ ಸಾವಿತ್ರಬಾಯಿ ಫುಲೆ ಜಯಂತಿ ಕಾರ್ಯಕ್ರಮದಲ್ಲಿ ಸಾವಿತ್ರಬಾಯಿ ಫುಲೆಯವರ ಭಾವಚಿತ್ರಕ್ಕೆ ಪುಷ್ಪನಮನ ಅವರು ಮಾತನಾಡಿದರು.

ಈ ವೇಳೆ ಡಾ. ಬಿ.ಆರ್.ಅಂಬೇಡ್ಕರ್ ಉದ್ಯಾನವನಕ್ಕೆ ಆಗಮಿಸಿದ ಸಚಿವರು ಡಾ. ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಪುಷ್ಪ ನಮನ ಸಲ್ಲಿಸಿದರು.

ಅಕ್ಷರದ ಮೊದಲ ತಾಯಿ ಸಾವಿತ್ರಿಬಾಯಿ ಪುಲೆಯವರು ಮಹಿಳೆಯರಿಗೆ ಶಿಕ್ಷಣ ಒದಗಿಸಲು ದೇಶದ ಉದ್ದಕ್ಕೂ ಹೋರಾಟ ಮಾಡಿ ಶಿಕ್ಷಣ ಕಾಂತ್ರಿ ಮಾಡಿದವರು, ದೇಶದ ಎಲ್ಲಾ ಸಮುದಾಯದ ಮಕ್ಕಳಿಗೆ ಶಿಕ್ಷಣ ನೀಡಿದವರು. ಅನಿಷ್ಟ ಪದ್ಧತಿ, ಜಾತಿ ಪದ್ದತಿಯನ್ನು ಹೋಗಲಾಡಿಸಲು ಪ್ರಯತ್ನ ಮಾಡಿದವರು. ಮೇಲೂ, ಕೀಳು ಮೂಡನಂಬಿಕೆಗೆ ನಾಂದಿ ಹಾಡಿ, ದೇಶದ ಅಭಿವೃದ್ಧಿಗಾಗಿ ಮಹಿಳೆಯರಿಗೆ ಶಿಕ್ಷಣ ನೀಡಿದವರು. ಅವರು ವಿಚಾರ ದಾರೆಗಳು ಇಂದಿನ ಯುವಕರಿಗೆ ಸ್ಪೂರ್ತಿಯಾಗಿದೆ. ಆ ಹೋರಾಟ ಫಲವೇ ಎಲ್ಲ ಮಹಿಳೆಯರು ಪ್ರತಿ ರಂಗದಲ್ಲಿ ಬೆಳೆದು ನಿಂತಿದ್ದಾರೆ ಎಂದರು.

ಮಹಿಳೆಯರಿಗೆ ಶಿಕ್ಷಣ ನೀಡುವ ಉದ್ದೇಶದಿಂದ ಸಮಾಜವನ್ನೇ ಎದು-ರಿಸಿದವರು. ಅವಮಾನಗಳನ್ನು ಸಹಿಸಿಕೊಂಡು, ಬಹುವರ್ಷಗಳ ಕಾಲ ಶಿಕ್ಷಣಕ್ಕಾಗಿ ಹೋರಾಡಿ, ಪ್ರತ್ಯೇಕ ಶಾಲೆಗಳನ್ನು ಸ್ಥಾಪಿಸಿ ಕ್ರಾಂತಿಕಾರಿ ಚಳುವಳಿ ಮಾಡಿ ಶಿಕ್ಷಣ ಕ್ಷೇತ್ರಕ್ಕೆ ಅಮೂಲ್ಯವಾದ ಕೊಡುಗೆ ಕೊಟ್ಟ ಆಧುನಿಕ ಶಿಕ್ಷಣದ ತಾಯಿ ಸಾವಿತ್ರಿಬಾಯಿ ಫುಲೆ. ಅವರು ಸ್ವಾತಂತ್ರ್ಯ ಹೋರಾಟದ ಪೂರ್ವದಲ್ಲಿಯೇ ಪ್ರಥಮ ಬಾರಿಗೆ ಮಹಿಳಾ ಶಿಕ್ಷಣ ನಾಂದಿ ಹಾಡಿದ ಜಗತ್ತಿನ ಮೊದಲ ಶಿಕ್ಷಣದ ತಾಯಿ ಎಂದು ಸಚಿವರು ಹೇಳಿದರು.

ಶಿಕ್ಷಣಕ್ಕೆ ಅಷ್ಟೇ ಸಿಮಿತವಾಗದೆ ಸಾಮಾಜಿಕ ಕಳಕಳಿ ಹೊಂದಿದ್ದರು. ಅನಾಥ ಮಕ್ಕಳಿಗೆ ವಸತಿ ನಿರ್ಮಿಸಿದವರು, ಅವರನ್ನು ಜಯಂತಿಗೆ ಮಾತ್ರ ಸೀಮಿತಗೊಳಿಸದೇ ನಿತ್ಯವೂ ನೆನೆಯುವ ಕಾರ್ಯವಾಗಬೇಕು. ಅವರು, ನೀಡಿರುವ ಕೊಡುಗೆಗಳ ಕುರಿತು ಜಾಗೃತ ಕಾರ್ಯಗಳು ನಿರಂತರ ಸಾಗಬೇಕಿದೆ.

ದೇಶಕ್ಕಾಗಿ ನೂರಾರು ಮಹನೀಯರು ಹೋರಾಟ ಮಾಡಿ ಶಿಕ್ಷಣ ನೀಡಿ, ಸಮಾನತೆಯ ಕನಸು ಕಂಡವರು, ಅವರ ಕನಸುಗಳು ನನಸಾಗಬೇಕಾದರೆ ಸಮಾನತೆಯ ದಾರಿಯಲ್ಲಿ ಸಾಗಬೇಕಿದೆ. ನಮ್ಮ ಛಲದಿಂದ ನಾವು ಮುಂದೆ ಸಾಗೋಣ , ಡಾ. ಅಂಬೇಡ್ಕರ್ ಕೊಡುಗೆ, ಬಸವಣ್ಣವರ ಕ್ರಾಂತಿ , ಶ್ರೀ ನಾರಾಯಣ ಗುರು ಅವರ ಸಮಾನತೆ ಹೋರಾಟಗಳು ನಮಗೆ ದಾರಿ ದೀಪ. ಮಕ್ಕಳು ಅವರ ಮಾರ್ಗದಲ್ಲಿ ಸಾಗಬೇಕು ಎಂದು ಸಲಹೆ ನೀಡಿದರು.

ಡಾ.ಬಾಬಾಸಾಹೇಬ ಅಂಬೇಡ್ಕರರು ಸಂವಿಧಾನದಲ್ಲಿ ನೀಡಿದ ಹಕ್ಕು ಮತ್ತು ಅಕ್ಷರದವ್ವ ಸಾವಿತ್ರಿಬಾಯಿ ಘೂಲೆ ಅವರು ಆದರ್ಶಗಳನ್ನು ಇಟ್ಟುಕೊಂಡು ತುಳಿತಕ್ಕೊಳಗಾದವರು ಈಗ ಸಮಾಜದಲ್ಲಿ ಮುಂದೆ ಬಂದಿದ್ದಾರೆ. ಉನ್ನತ ಹುದ್ಧೆಗಳನ್ನು ಅಲಂಕ-ರಿಸಬೇಕೆಂಬ ಛಲವನ್ನು ಇಟ್ಟುಕೊಳ್ಳಬೇಕು. ಇತಿಹಾಸ ಅರಿಯದವರು, ಇತಿಹಾಸ ನಿರ್ಮಿಸಲಾರರು.. ಬಹಳಷ್ಟು ಜನರು ಶ್ರೇಷ್ಠ ಸಂವಿಧಾನವನ್ನು ತೆಗೆದು ಹಾಕುವ ಯತ್ನ ಮಾಡುತ್ತಿದ್ದಾರೆ. ಸಂವಿಧಾನಕ್ಕೆ ಕಂಟಕ ಎದುರಾದಾಗ ನಾವೆಲ್ಲರೂ ಗಟ್ಟಿಯಾಗಿ ನಿಂತು ಹೋರಾಟದೊಂದಿಗೆ, ಜಾಗೃತ ಮೂಡಿಸಿಬೇಕು. ಈಲ್ಲ ಇಲ್ಲವಾದರೆ, ನಮ್ಮ ಸಮುದಾಯದ ಜನರು ನೂರಾರು ವರ್ಷಗಳ ಹಿಂದಕ್ಕೆ ಹೋದರು ಅಚ್ಚರಿ ಪಡಬೇಕಿಲ್ಲ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಬೂಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಪ್ರದೀಪ ಎಂ.ಜೆ, ಕಿರಣ ರಜಪೂತ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಬಸವರಾಜ್ ರಾಯಗೋಳ, ಮಲ್ಲೇಶ ಚೌಗುಲೆ ಹಾಗೂ ಇತರರು ಇದ್ದರು.

# ಅದ್ದೂರಿ ಅಯ್ಯಪ್ಪ ಮೆರವಣಿಗೆ



ಯರಗಟ್ಟಿ: ಸಮೀಪದ ಸತ್ತಿಗೇರಿ ಗ್ರಾಮದ ಅಯ್ಯಪ್ಪಸ್ವಾಮಿ ಸೇವಾ ಸಮೀತಿಯಿಂದ ಅಯ್ಯಪ್ಪಸ್ವಾಮಿ ಮಹಾಪೂಜೆ ಹಾಗೂ ಅನ್ನು ಸಂತರ್ಪಣೆ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮಕ್ಕೆ ಜ್ಯೋತಿ ಬೆಳಗಿಸುವ ಮೂಲಕ ಸತ್ತಿಗೇರಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಚಾಲನೆ ನೀಡಿ ಮಾತನಾಡಿದ ಅವರು ಅಯ್ಯಪ್ಪನನ್ನು ಧರ್ಮಶಾಸ್ತಾ ಮತ್ತು ಮಣಿಕಂಠ ಎಂದೂ ಕರೆಯುತ್ತಾರೆ, ದಕ್ಷಿಣ ಭಾರತದಲ್ಲಿ ಜನಪ್ರಿಯವಾಗಿರುವ ಹಿಂದೂ ದೇವತೆ, ಅವನನ್ನು ಸಾಕಾರವಾಗಿ ಪರಿಗಣಿಸಲಾಗಿದೆ. ಧರ್ಮ, ಸತ್ಯ ಮತ್ತು ಸದಾಚಾರ ಮತ್ತು ಕೆಟ್ಟದ್ದನ್ನು ತೊಡೆದುಹಾಕಲು ಆಗಾಗ್ಗೆ ಕರೆಯುತ್ತಾರೆ. ಅಯ್ಯಪ್ಪನ ಮೇಲಿನ ಭಕ್ತಿಯು ದಕ್ಷಿಣ ಭಾರತದಲ್ಲಿ ಮೊದಲು ಪ್ರಚಲಿತದಲ್ಲಿದ್ದರೂ, ಅವನ ಜನಪ್ರಿಯತೆಯು 20 ನೇ ಶತಮಾನದ ಉತ್ತರಾರ್ಧದಲ್ಲಿ ಮಾತ್ರ ಹೆಚ್ಚಾಯಿತು ಹಿಂದೂ ಧರ್ಮಶಾಸ್ತ್ರದ ಪ್ರಕಾರ, ಅವನು ಹರಿಹರ (ವಿ?ಣ್ಣಿ ಮೋಹಿನಿ, ಮತ್ತು ಶಿವನ ಮಗ). ಅಯ್ಯಪ್ಪನನ್ನು ಅಯ್ಯಪ್ಪ, ಸಾಸ್ತಾವು, ಹರಿಹರಸುಧನ್, ಮಣಿಕಂದನ್, ಶಾಸ್ತಾ ಅಥವಾ ಧರ್ಮ ಶಾಸ್ತಾ ಮತ್ತು ಶಬರಿನಾಥ ಎಂದೂ ಕರೆಯಲಾಗುತ್ತದೆ. 48 ದಿನಗಳ ಕಾಲ ಕಠಿಣ ವೃತಮಾಡಿ ಶಬರಿಮಲೆಗೆ ತೆರಳಿ ಮಕರಜ್ಯೋತಿ ಪುನೀತರಾಗುತ್ತಾರೆ.

ಈ ಸಾಲಹಳ್ಳಿ ರುದ್ರಗೌಡ ಗುರುಸ್ವಾಮಿ, ಕಟಕೋಳ ಚಂದ್ರಕಾತ ಗುರುಸ್ವಾಮಿ, ಸತ್ತಗೇರಿ ಈರಣ್ಣಾ ಗುರುಸ್ವಾಮಿ, ಕೋಡ್ಲಿವಾಡ ನಿಂಗಪ್ಪ ಗುರುಸ್ವಾಮಿ, ಸೊಪ್ಪಡ್ಲ ಮಹಾಂತೇಶ ಗುರುಸ್ವಾಮಿ, ತಲ್ಲೂರು ಪ್ರಶಾಂತ ಗುರುಸ್ವಾಮಿ, ಅಶೋಕ ಗುರುಸ್ವಾಮಿ,ಯರಗಟ್ಟಿ ಈರಣ್ಣಾ ಗುರುಸ್ವಾಮಿ, ಸ್ಥಳೀಯ ಮಾಲಾ ದಾರಿಗಳಾದ ಬಸನಗೌಡ ಪಾಟೀಲ, ಬಂಗಾರೆಪ್ಪ ಕಟ್ಟಿ, ಈರಣ್ಣಾ ನಾವಿ, ರಾಜು ಹಿರೇಮಠ, ಗುರುನಾಥ ಮಟ್ಟಿ, ಈರಣ್ಣಾ ಮಟ್ಟಿ, ಕುಮಾರ ಮಠಪತಿ, ಸಂತೋಷ ಪಾಟೀಲ, ರಾಮು ಮೇಸ್ತ್ರಿ, ಸೇರಿದಂತೆ ಸುತ್ತಲಿನ ಗ್ರಾಮಗಳ ಗುರುಸ್ವಾಮಿಗಳು ಹಾಗೂ ಮಾಲಾದಾರಿಗಳು ಇದ್ದರು

## ಕಾರಂಜಿಮಠದಲ್ಲಿ 282ನೇ ಶಿವಾನುಭವ ಹಾಗೂ ಡಾ. ಶಿವಬಸವ ಸ್ವಾಮಿಗಳವರ 135ನೇ ಜಯಂತಿ ಮಹೋತ್ಸವ ಕಾರ್ಯಕ್ರಮ



ಬೆಳಗಾವಿ ಶಿವಬಸವನಗರ ಕಾರಂಜಿಮಠದ ಶಿವಾನುಭವ ಮಂಟಪದಲ್ಲಿ 282ನೇ ಶಿವಾನುಭವ ಹಾಗೂ ಡಾ. ಶಿವಬಸವ ಮಹಾಸ್ವಾಮಿಗಳವರ 135ನೇ ಜಯಂತಿ ಮಹೋತ್ಸವ ಕಾರ್ಯಕ್ರಮವು ಸೋಮವಾರ ದಿನಾಂಕ 6 ಜನೆವರಿ 2025ರಂದು ಸಾಯಂಕಾಲ 6 ಗಂಟೆಗೆ ಜರುಗುವುದು. ಕಾರ್ಯಕ್ರಮದ ಸಾನ್ನಿಧ್ಯವನ್ನು ಪೂಜ್ಯ ಶ್ರೀ ಮ.ನಿ.ಪ್ರ. ಗುರುಸಿದ್ಧ ಮಹಾಸ್ವಾಮಿಗಳು ವಹಿಸಲಿದ್ದು, ಶ್ರೀ ಸುರೇಶ ಉರಬಿನಟ್ಟಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಶ್ರೀ ಮಹಾಂತೇಶ ಕವಟಗಿಮಠ ಅವರು ಮುಖ್ಯ ಅತಿಥಿಗಳಾಗಿ ಆಗಮಿಸುವರು. ಡಾ. ಸಾವಿತ್ರಿ ಮಹಾದೇವ ಕಮಲಾಪುರ ಅವರು "ವ್ಯಕ್ತಿಗಳಿಂದ ಸಮಾಜದಲ್ಲಿ ಬದಲಾವಣೆ" ಎಂಬ ವಿಷಯ ಕು-ರಿತು ಉಪನ್ಯಾಸ ನೀಡುವರು. ಇದೇ ಸಂದರ್ಭದಲ್ಲಿ ಶ್ರೀ ಬಸವೇಶ್ವರ ಬ್ಯಾಂಕಿಗೆ ಆಯ್ಕೆಯಾದ ಸರ್ವ ಸದಸ್ಯರಿಗೆ ಸನ್ಮಾನ ಮತ್ತು ಶ್ರೀ ಕಾರಂಜಿಮಠದ ಕುಮಾರೇಶ್ವರ ಸಂಗೀತ ಪಾಠಶಾಲೆಯ ಮಕ್ಕಳಿಂದ ಪ್ರಾರ್ಥನೆ ಜರುಗುವುದು ಎಂದು ಶ್ರೀಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಚಿತ್ರವ್ವ ಬಸಪ್ಪ. ಶಿರಗೂರ ಶಿವಾಧೀನ



ಗೋಕಾಕ . ಸಮೀಪದ ಸಂಗನಕೇರಿ ಗ್ರಾಮದ ಹಿರಿಯ ತಾಯಿ ಶ್ರೀಮತಿ ಚಿತ್ರವ್ವ ಬಸಪ್ಪ. ಶಿರಗೂರ (75) ಇವರು ಶುಕ್ರವಾರದಂದು ಬೆಳಿಗ್ಗೆ ನಿಧನರಾದರು. ಮೃತರು ಅಥಣಿ ಆರೂಡಜ್ಯೋತಿ ಪಟ್ಟಣ ಸಹಕಾರಿ ಬ್ಯಾಂಕಿನ ವ್ಯವಸ್ಥಾಪಕರಾದ ಸಿದ್ದು ಸಿರಗೂರ ಅವರ ತಾಯಿಯಾಗಿದ್ದು ಇವರ ಜೊತೆಗೆ ಇಬ್ಬರು ಪುತ್ರರು, ಓರ್ವ ಪುತ್ರಿ, ಪುತ್ರಿಯರು, ಅಳಿಯಂದಿರರು, ಮೊಮ್ಮಕ್ಕಳು, ಮರಿಮಕ್ಕಳು, ಅಪಾರ ಬಂದು ಬಳಗವನ್ನು ಅಗಲಿದ್ದಾರೆ. ಇವರ ನಿಧನಕ್ಕೆ ಅಥಣಿ ಆರೂಡಜ್ಯೋತಿ ಬ್ಯಾಂಕಿನ ಆಡಳಿತ ಮಂಡಳಿ, ಸಕಲ ಸಿಬ್ಬಂದಿ, ಅಥಣಿ ಪತ್ರಕರ್ತರು, ಹಾಗೂ ಹಸಿರು ಕ್ರಾಂತಿ ದಿನಪತ್ರಿಕೆ ಬಳಗ, ಅಪಾರ ಗೆಳೆಯರ ಬಳಗ ಶೋಕ ವ್ಯಕ್ತಪಡಿಸಿದ್ದಾರೆ.

## ರನ್ನ ವೈಭವ-2025 ಆಚರಣೆಗೆ ಸಲಹೆ, ಅಭಿಪ್ರಾಯ ಸಲ್ಲಿಕೆ

ಬಾಗಲಕೋಟೆ : : ಜಿಲ್ಲೆಯ ಮುಧೋಳ ರನ್ನ ಕ್ರೀಡಾಂಗಣದಲ್ಲಿ ಫೆಬ್ರವರಿ 22 ರಿಂದ 24 ವರೆಗೆ ನಡೆಯಲಿರುವ ರನ್ನ ವೈಭವ-2025 ಹಿನ್ನಲೆಯಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ, ಕವಿಗೋಷ್ಠಿ, ವಿಚಾರ ಗೋಷ್ಠಿ ಸೇ-ರಿದಂತೆ ಇತರೆ ಹೊಸ ವಿಷಯಗಳ ಕುರಿತು ಸಾರ್ವಜನಕರು, ಸಾಹಿತಿಗಳು, ಕಲಾಸಕ್ತರು ಹಾಗೂ ಕಲಾವಿದರು ತಮ್ಮ ತಮ್ಮ ಅಭಿಪ್ರಾಯಗಳನ್ನು, ಸಲಹೆಗಳನ್ನು ಜನವರಿ 15 ರೊಳಗಾಗಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಾಗಲಕೋಟೆ ಇವರಿಗೆ ಅಂಚೆ ಮೂಲಕ ಹಾಗೂ ರನ್ನವೈಭವ-2025 ಕಾರ್ಯಕ್ರಮದ ಇಮೇಲ್ rannavai-bhava2025@gmail.com ಮೂಲಕ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ.

## ಬಬಲಾದಿಯ ಅರ್ಥಾರ್ಥ ಸಾರವಾಡದ ಕಾಲಜ್ಞಾನ ಅದ್ಭುತವಾದದು : ಒಂಕಾರಯ್ಯ ಶ್ರೀಗಳು




ಇಂಡಿ: ಬಬಲಾದಿಯ ಅರ್ಥಾರ್ಥ ಸಾರವಾಡದ ಕಾಲಜ್ಞಾನ ಬಹಳ ಅದ್ಭುತವಾದದ್ದು. ಈ ಭವ್ಯ ಪರಂಪರೆಯ ಮೂಲಪುರುಷನೇ ಸಾರವಾಡದ ಚಿಕ್ಕಪ್ಪಯ್ಯ ಎಂದು ಸಾರವಾಡದ ಒಂಕಾರಯ್ಯ ಶ್ರೀಗಳು ಹೇಳಿದರು.

ಅವರು ಬುಧವಾರ ತಾಲೂಕಿನ ಚಿಕ್ಕಬೇವನೂರ ಗ್ರಾಮದ ಸದಾಶಿವ ಅಜ್ಜನ ಮಠದಲ್ಲಿ ಚಿಕ್ಕಬೇವನೂರ ಗೆಳೆಯರ ಬಳಗ ಹಮ್ಮಿಕೊಂಡಿದ್ದ ನೂತನ ಕ್ಯಾಲೆಂಡರ್ ಬಿಡುಗಡೆ ಕಾರ್ಯಕ್ರಮದಲ್ಲಿ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿದರು.

ಸಾರವಾಡದ ಅಧಿದೇವತೆ ಚಿಕ್ಕಪ್ಪಯ್ಯ ಮೊಟ್ಟಮೊದಲು ಕಾಲಜ್ಞಾನದ ಹಾಡುಗಳನ್ನು ಬರೆದು ಶ್ರೀಕಾರ ಹಾಕಿದರು. ನಂತರ ಈ ಪರಂಪರೆಯನ್ನು ಆತನ ಕೃಪಾಪುತ್ರ ಸದಾಶಿವ ಮುತ್ಯ ಮುಂದುವರೆಸಿಕೊಂಡು ಬಂದರು ಕಾಲಜ್ಞಾನದಲ್ಲಿ ಅವರು ಹೇಳಿದ ನುಡಿಗಳು ಇಂದಿಗೂ ಸತ್ಯವಾಗಿದೆ ಎಂದು ಹೇಳಿದರು.

ಪ್ರಸಕ್ತ ವರ್ಷ 2025 ನೇ ವರ್ಷ ಸರಿ ಇಲ್ಲ, ಸಾವುನೋವು ಹೆಚ್ಚಾಗುತ್ತವೆ, ಪ್ರಸಕ್ತ ವರ್ಷ ಇನ್ನೊಂದು ವ್ಯಾದಿ ಬರಲಿದೆ, ಅಪಘಾತಗಳು ಹೆಚ್ಚಾಗಲಿವೆ, ದೇಶ-ದೇಶಗಳ ನಡುವೆ ಯುದ್ಧ ಮುಂದುವರೆಯಲಿವೆ ಎಂದು ನುಡಿದರು.

ಅಕ್ಕಮಹಾದೇವಿ ಸಹಕಾರಿ ಬ್ಯಾಂಕಿನ ಅಧ್ಯಕ್ಷ ಉಮೇಶ ಬಳಬಟ್ಟಿ ಮಾತನಾಡಿ, ತ್ರಿಕಾಲ ಜ್ಞಾನ ಹೊಂದಿದ ಸಾರವಾಡದ ಶ್ರೀ ಮಠದ ಶಾಖಾ ಮಠ ಚಿಕ್ಕಬೇವನೂರ ಗ್ರಾಮದಲ್ಲಿಯೂ ಪ್ರಾರಂಭವಾಗಿದ್ದು ಸಂತಸ ತಂದಿದೆ. ಗ್ರಾಮಸ್ಥರು ಪ್ರತೀ ವರ್ಷವೂ ಸಹ ಜಾತ್ರಾ ಮಹೋತ್ಸವ ನೆರವೇರಿಸುವ ಜೊತೆಗೆ ಸಾಮೂಹಿಕ ವಿವಾಹ, ಧರ್ಮ ಸಭೆಗಳನ್ನು ಏರ್ಪಡಿಸಿ ಬಡವರ ಪಾಲಿಗೆ ಆಸರೆಯಾಗಬೇಕು ಎಂದು ಸಲಹೆ ನೀಡಿದರು.

## ಸತಿ ಬಾಲ್ಯ ವಿವಾಹ- ಇತ್ಯಾದಿ ಅನಿಷ್ಟ ಪದ್ಧತಿಗಳ ಬಗ್ಗೆ ದಿಟ್ಟತನದಿಂದ ದ್ವನಿ ಎತ್ತಿ ಹೋರಾಡಿ ಶಿಕ್ಷಣ ನೀಡಿದ ದೇಶದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿ ಬಾಯಿ ಫುಲೆ

ಹಳ್ಳೂರ . ಹೆಣ್ಣು ಮಕ್ಕಳಿಗೆ 19 ನೇ ಶತಮಾನದಲ್ಲಿ ಹಿಂದುಳಿದ ವರ್ಗಗಳ ಜನರಿಗೆ ಶಿಕ್ಷಣ ನೀಡುತ್ತಿರಲಿಲ್ಲ ಮಹಿಳಾ ಹಕ್ಕುಗಗಳು ಅನಕ್ಷರತೆ ಅಸ್ಪೃಶ್ಯತೆ, ಸತಿ ಬಾಲ್ಯ ವಿವಾಹ, ಇತ್ಯಾದಿ ಅನಿಷ್ಟ ಪದ್ಧತಿಗಳ ಬಗ್ಗೆ ದಿಟ್ಟತನದಿಂದ ದ್ವನಿ ಎತ್ತಿ ಹೋರಾಡಿ ಶಿಕ್ಷಣ ನೀಡಿದ ದೇಶದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿ ಬಾಯಿ ಫುಲೆ ಅವರು ಎಂದು ಶಿಕ್ಷಕಿ ಶಶಿಕಲಾ ಬಾಳೆಂಬಿಡ ಹೇಳಿದರು. ಅವರು ಗ್ರಾಮದ ಸಾವಿತ್ರಿ ಬಾಯಿ ಫುಲೆ ಅವರ ವೃತ್ತದಲ್ಲಿ ಹಮ್ಮಿಕ್ಕೊಂಡ ಸಾವಿತ್ರಿ ಬಾಯಿ ಫುಲೆ ಅವರ 194 ನೇ ಜಯಂತ್ಯೋತ್ಸವ ಆಚರಣೆಲ್ಲಿ ಮಾತನಾಡುತ್ತಾ ಮಹಿಳೆಯರು ಅಬಲೆಯಲ್ಲ ಸಬಲೆ ಎಂದು ತೋರಿಸಿಕೊಟ್ಟ ಮಹಾಮಾತೆ ಸಾವಿತ್ರಿ ಬಾಯಿ ಫುಲೆ ಅವರ ಮಾರ್ಗದರ್ಶನದಲ್ಲಿ ನಾವೆಲ್ಲರೂ ಸಾಗೊನಾ ಎಂದು ಹೇಳಿದರು. ಸಮಾಜ ಸೇವಕ ಮುರಿಗೆಪ್ಪ ಮಾಲಗಾರ ಮಾತನಾಡಿ ಶಿಕ್ಷಣ ಮತ್ತು ಸಾಮಾಜಿಕ ಸುಧಾರಣೆಗೆ ಹಗಲಿರುಳು ಶ್ರಮಿಸಿ ಶಿಕ್ಷಣದ ಕ್ರಾಂತಿಯ ಹ-ರಿಕಾರರಾಗಿ ಮಹಿಳೆಯರನ್ನು ಸ್ವಾವಲಂಬಿ ಜೀವನ ನಡೆಸಲು ಅವಕಾಶ ಮಾಡಿಕೊಟ್ಟವರು ಶಿಕ್ಷಣ ಕಲಿಸಲು ದಾರಿಯಲ್ಲಿ ಹೊರಟಾಗ ಕೆಟ್ಟ ಜನ ಸಗಣೆ ಎರಚಿ ನಿಂದಿಸಿ ಅವಮಾನ ಮಾಡಿದರೂ ಹೆದರದೆ ಮುಚ್ಚು ಮರೆಯಿಲ್ಲದೆ ದಿಟ್ಟತನದಿಂದ ದ್ವನಿ ಎತ್ತಿ ಶಿಕ್ಷಣ ನೀಡಿ ಅಂಧಕಾರವನ್ನು ಕಳೆದು ಜ್ಞಾನದ ಬೆಳಕು ನೀಡಿದ ಸಾವಿತ್ರಿ ಬಾಯಿ ಫುಲೆ ಅವರ ಕೊಡುಗೆ ಅಪಾರವಾದದ್ದು ಎಂದು ಹೇಳಿದರು.



ಪ್ರಾರಂಭದಲ್ಲಿ ಸಾವಿತ್ರಿ ಬಾಯಿ ಫುಲೆ ಮಹಿಳಾ ಮಂಡಳ ಉಪಾಧ್ಯಕ್ಷೆ ಕಸ್ತೂರಿ ನಿಡೋಣಿ ಹಾಗೂ ಶಾಲೆಯ ಶಿಕ್ಷಕಿಯರು ಸಾವಿತ್ರಿ ಬಾಯಿ ಫುಲೆ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಈ ಸಮಯದಲ್ಲಿ ಪ್ರಧಾನ ಗುರುಗಳಾದ ಎಸ್ ಎಚ್ ವಾಸನ.ಭೀಮಶಿ ಮಗದುಮ.ಸಿದ್ಧಪ್ಪ ಕೂಲಿಗೋಡ.ಯಮನಪ್ಪ ನಿಡೋಣಿ.ಮಾದೇವ ಹೊಸಟ್ಟಿ.ಹನಮಂತ ಹಳ್ಳೂರ. ಅಯ್ಯಪ್ಪ ಹೀರೆಮಠ.ಲಕ್ಷ್ಮಣ ನಿಡೋಣಿ.ಭೀಮಪ್ಪ ಹೊಸಟ್ಟಿ. ತುಕಾರಾಮ ಸನದಿ. ಶಂಕರ ಕುಲಿಗೋಡ.ಬಸಪ್ಪ ಹಡಪದ.ಸುರೇಶ ಕತ್ತಿ.ಮಹಾವೀರ ಸಪ್ತಸಾಗರ. ಈರಪ್ಪ ರಾಮಧುರ್ಗ.ಶಂಕರಯ್ಯ ಹೀರೆಮಠ. ಈರಪ್ಪ ಕಮಲದಿನ್ನಿ.ಸೋಮು ಹೀರೆಮಠ. ಲಕ್ಷ್ಮಣ ಕೌಜಲಗಿ. ರಮೇಶ ಹೊಸೂರ. ಬಸಪ್ಪ ಅರಳಿಮಟ್ಟಿ. ದುಂಡಪ್ಪ ಕತ್ತಿ. ಬಾಳಗೌಡ ಪಾಟಿಲ.ಮಹಾಂತೇಶ ಲಿಗಾಡೆ.ದುಂಡಪ್ಪ ಹೊಸಟ್ಟಿ. ಸಂಗಪ್ಪ ಪಟ್ಟಣಶೆಟ್ಟಿ. ನಾರಾಯಣ ಪೂಜೇರಿ. ವಿಠ್ಠಲ ತೋಟಗಿ ಅಕ್ಬರ ಮುಜಾವರ. ಗೋಪಾಲ ಅಟಮಟ್ಟಿ. ಚರಣ ನಾಶಿ. ಬಸು ಹೊಸಮನಿ.ಕಿರಣ ಕಾಗೆ.ಸುರೇಶ ಗಂಟಿಚೋರ.ನರಸಪ್ಪ ಶೇಡಬಾಳ್ಕರ . ಯಲ್ಲಾಲಿಂಗ ಹೊಸಟ್ಟಿ ಸೇರಿದಂತೆ ಸಾವಿತ್ರಿ ಬಾಯಿ ಫುಲೆ ಮಹಿಳ ಮಂಡಳ ಸದಸ್ಯರು,ಗುರು ಹಿರಿಯರು, ಶಿಕ್ಷಕ,ಶಿಕ್ಷಕಿಯರು,ವಿದ್ಯಾರ್ಥಿಗಳಿದ್ದರು.

## ಜೀವ ವೈದ್ಯಕೀಯ ತ್ಯಾಜ್ಯಗಳ ವೈಜ್ಞಾನಿಕ ನಿರ್ವಹಣೆ ಮತ್ತು ವಿಲೆವಾರಿ ಕುರಿತು ತರಬೇತಿ

ಕಾರವಾರ : ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಛೇರಿ, ಕಾರವಾರ, ಜಿಲ್ಲಾ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಇಲಾಖೆ, ಭಾರತೀಯ ವೈದ್ಯಕೀಯ ಸಂಘ (ಕಾರವಾರ / ಶಿರಸಿ), ಹಾಗೂ ಸಾಮೂಹಿಕ ಜೀವ ವೈದ್ಯಕೀಯ ತ್ಯಾಜ್ಯ ಸಂಸ್ಕರಣಾ ಘಟಕ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ಎಲ್ಲ ಸರಕಾರಿ ಹಾಗೂ ಖಾಸಗಿ ಆರೋಗ್ಯ ಘಟಕಗಳಿಗೆ, ಜೀವ ವೈದ್ಯಕೀಯ ತ್ಯಾಜ್ಯಗಳ ವೈಜ್ಞಾನಿಕ ನಿರ್ವಹಣೆ, ವ್ಯವಸ್ಥಾಪನೆ ಹಾಗೂ ವಿಲೇವಾರಿ ಕುರಿತು ತರಬೇತಿ ಕಾರ್ಯಕ್ರಮವು ಗುರುವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಚೇರಿಯ ಸಭಾಂಗಣದಲ್ಲಿ ನಡೆಯಿತು.

ಬೆಂಗಳೂರಿನ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ನಿರ್ದೇಶಕ ಜೆ. ಚಂದ್ರ ಬಾಬು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಜೀವ ವೈದ್ಯಕೀಯ ತ್ಯಾಜ್ಯದ ಪರಿಣಾಮಕಾರಿ ವಿಂಗಡಣೆ, ನಿರ್ವಹಣೆ, ಮತ್ತು ಸುರಕ್ಷಿತವಾಗಿ ವಿಲೇವಾರಿ ಮಾಡುವುದರ ಕುರಿತಾಗಿ ಎಲ್ಲಾ ನೊಡೆಲ್ ಅಧಿಕಾರಿಗಳು, ಜಿಲ್ಲೆಯ ಎಲ್ಲ ಸರ್ಕಾರಿ / ಖಾಸಗಿ ಆಸ್ಪತ್ರೆಗಳ, ಆರೋಗ್ಯ ಘಟಕಗಳ ವೈದ್ಯರು, ನರ್ಸಗಳಿಗೆ ತರಬೇತಿ ನೀಡಿದರು.

ಎಲ್ಲ ಆರೋಗ್ಯ ಘಟಕಗಳು ಜೀವ ವೈದ್ಯಕೀಯ ತ್ಯಾಜ್ಯಗಳನ್ನು ಸಾಮೂಹಿಕ ಜೀವ ವೈದ್ಯಕೀಯ ತ್ಯಾಜ್ಯ ಸಂಸ್ಕರಣಾ ಘಟಕ (Kenera(IMA) CBMWTF,Ankola) ವರೊಂದಿಗೆ ಒಡಂಬಡಿಕೆ ಮಾಡಿಕೊಂಡು ಜೀವ ವೈದ್ಯಕೀಯ ತ್ಯಾಜ್ಯಗಳನ್ನು ವಿಲೇವಾರಿ ಮಾಡಬೇಕಾಗಿರುತ್ತದೆ. ಬಾರ್ ಕೋಡ್ ವ್ಯವಸ್ಥೆಯನ್ನು ಎಲ್ಲ ಆರೋಗ್ಯ ಘಟಕಗಳು ಹಾಗೂ ಸಾಮೂಹಿಕ ಜೀವ ವೈದ್ಯಕೀಯ ತ್ಯಾಜ್ಯ ಸಂಸ್ಕರಣಾ ಘಟಕಗಳು ಜೀವ ವೈದ್ಯಕೀಯ ತ್ಯಾಜ್ಯ ನಿರ್ವಹಣೆ ನಿಯಮಗಳು 2016 ರನ್ವಯ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ತರಬೇತಿಯಲ್ಲಿ ಅಂಕೋಲಾದ ಕೆನರಾ ಐಎಮ್‌ಎ, ಕಾಮನ್ ಬಯೋಮೆಡಿಕಲ್ ವೆಸ್ಟ್ ಮೆನೆಜ್‌ಮೆಂಟ್ ಅಧ್ಯಕ್ಷ ಡಾ.ಎನ್.ವಿ ನಾಯಕ, ಕಾರ್ಯದರ್ಶಿ ಡಾ.ನೀತಿನ್ ಪಿಕಳೆ, ಕಾರವಾರ ಐಎಮ್‌ಎ ಅಧ್ಯಕ್ಷ ಸುರೇಶ್ ಭಟ್, ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ. ಅನ್ನಪೂರ್ಣ ವಸ್ತ್ರದ, ಪಶುಸಂಗೋಪನಾ ಇಲಾಖೆಯ ಉಪ ನಿರ್ದೇಶಕ ಡಾ. ಮೋಹನ ಕುಮಾರ, ಜಿಲ್ಲಾ ಆಯುಷ್ ಅಧಿಕಾರಿ ಡಾ. ಲಲಿತಾ ಶೆಟ್ಟಿ , ನೊಡೆಲ್ ಅಧಿಕಾರಿಗಳು, ಜಿಲ್ಲೆಯ ಎಲ್ಲ ಸರ್ಕಾರಿ / ಖಾಸಗಿ ಆಸ್ಪತ್ರೆಗಳ, ಆರೋಗ್ಯ ಘಟಕಗಳ ವೈದ್ಯರು, ನರ್ಸ್‌ಗಳು ಮತ್ತಿತರರು ಉಪಸ್ಥಿತರಿದ್ದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಛೇರಿಯ ಪರಿಸರ ಅಧಿಕಾರಿ ಬಿ.ಕೆ., ಸಂತೋಷ್ ಪ್ರಸ್ತಾವಿಕವಾಗಿ ಮಾತನಾಡಿದರು. ಡಿ.ಎಚ್.ಇ.ಒ ಬಸವರಾಜ ಸ್ವಾಗತಿಸಿ, ನಿರೂಪಿಸಿದರು. ಕರಾಮಾನಿ ಮಂಡಳಿಯ ಯೋಜನಾ ಸಹಾಯಕಿ ಡಾ. ಅಮೃತಾ ಶೇಟ್ ವಂದಿಸಿದರು.

## ಬಿಎಸ್‌ಎನ್‌ಎಲ್ ಗ್ರಾಹಕರನ್ನು ಡಿಜಿಟಲ್ ಮೋಡ್‌ನಲ್ಲಿ ಮರುಪರಿಶೀಲಿಸುವ ಕುರಿತು

ಕಾರವಾರ, : ದೂರ ಸಂಪರ್ಕ ಇಲಾಖೆಯ ಮೊಬೈಲ್ ಸಂಖ್ಯೆ (ಸಿಮ್) ತೆಗೆದುಕೊಂಡ ಎಲ್ಲಾ ಬಿಎಸ್‌ಎನ್‌ಎಲ್ ಗ್ರಾಹಕರನ್ನು ಡಿಜಿಟಲ್ ಮೋಡ್‌ನಲ್ಲಿ ಮರು ಪರಿಶೀಲಿಸುವಂತೆ ತಿಳಿಸಿದ್ದಾರೆ.

ಮರು-ಪರಿಶೀಲನೆಯು ಅಸ್ತಿತ್ವದಲ್ಲಿರುವ ಗ್ರಾಹಕರ ಗುರುತನ್ನು ದೃಢೀಕರಿಸುವ ಪ್ರಕ್ರಿಯೆಯಾಗಿದ್ದು, ಯಾವುದೇ ಬಿಎಸ್‌ಎನ್‌ಎಲ್ ಸಿಎಸ್‌ಸಿಗಳು, ಬಿಎಸ್-ಎನ್‌ಎಲ್ ಫ್ರಾಂಚೈಸಿ ಮತ್ತು ಚಿಲ್ಲರೆ ವ್ಯಾಪಾರಿಗಳ ಅಂಗಡಿಗಳಲ್ಲಿ ಗ್ರಾಹಕರು ತಮ್ಮ ಮೊಬೈಲ್ ಸಂಖ್ಯೆಯನ್ನು (ಸಿಮ್) ಮರು ಪರಿಶೀಲಿಸಬಹುದು. ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಗ್ರಾಹಕರು ಮತದಾರರ ಗುರುತಿನ ಚೀಟಿ ಅಥವಾ ಆಧಾರ್ ಕಾರ್ಡ್ ಅಥವಾ ಡ್ರೈವಿಂಗ್ ಲೈಸೆನ್ಸ್‌ನ ಮೂಲ ಗುರುತಿನ ಪುರಾವೆಯನ್ನು ಒದಗಿಸಬೇಕಾಗುತ್ತದೆ. ಮರು ಪರಿಶೀಲನೆ ಅಗತ್ಯವಿರುವ ಮೊಬೈಲ್ ಸಂಖ್ಯೆಗೆ ಒಟಿಪಿ ಬರುತ್ತದೆ. ಈ ಎಲ್ಲಾ ಗ್ರಾಹಕರು ಜ.31 ರೊಳಗಾಗಿ ಮರು ಪರಿಶೀಲನೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಹತ್ತಿರದ ಬಿಎಸ್‌ಎನ್‌ಎಲ್ ಸಿಎಸ್‌ಸಿ ಅಥವಾ ಫ್ರಾಂಚೈಸಿ/ಚಿಲ್ಲರೆ ವ್ಯಾಪಾ-ರಿಗಳ ಮಳಿಗೆಗೆ ಭೇಟಿ ನೀಡುವಂತೆ ಬಿಎಸ್‌ಎನ್‌ಎಲ್ ಕಾರ್ಯಾಚರಣಾ ಪ್ರದೇಶದ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ೩೯ ನೇ ವಾರ್ಷಿಕ ರಾಷ್ಟ್ರೀಯ ಸಂಶೋಧನಾ ಸಮ್ಮೇಳನ

# ರಾಷ್ಟ್ರದ ಆರ್ಥಿಕ ಹಾಗೂ ಸಾಮಾಜಿಕ ಬೆಳವಣಿಗೆಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರ



ಗದಗ : ಭಾರತದಲ್ಲಿ ಸಹಕಾರ ಚಳುವಳಿಯು ಒಂದು ಶತಮಾನಕ್ಕೂ ಹೆಚ್ಚು ಇತಿಹಾಸವನ್ನು ಹೊಂದಿದ್ದು, ರಾಷ್ಟ್ರದ ಆರ್ಥಿಕ ಹಾಗೂ ಸಾಮಾಜಿಕ ಬೆಳವಣಿಗೆಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರವಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ.ಪಾಟೀಲ ಅವರು ತಿಳಿಸಿದರು

ನಾಗಾವಿಯ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯದ ಆಡಿಟೋ-ರಿಯಂದಲ್ಲಿ ಶುಕ್ರವಾರ ಗದಗನ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ , ಭಾರತೀಯ ಸಹಕಾರ ಅಧ್ಯಯನ ಸಂಸ್ಥೆ ಪುಣೆ, ಕರ್ನಾಟಕ ರಾಜ್ಯ ಸೌಹಾರ್ದ ಸಂಂ-ಯುಕ್ತ ಸಹಕಾರಿ ನಿಯಮಿತ ಬೆಂಗಳೂರು ಮತ್ತು ವೈಕುಂಟ್ ಮೇಹ್ತಾ ರಾಷ್ಟ್ರೀಯ ಸಹಕಾರ ನಿರ್ವಹಣೆ ಸಂಸ್ಥೆ, ಪುಣೆ ಇವರ ಸಹಯೋಗದಲ್ಲಿ ನಾಗಾವಿಯ ಕ.ರಾ.ಗ್ರಾ.ಪಂ. ರಾ.ವಿ.ವಿ.ದ ಆಡಿಟೋರಿಯಂ ಹಾಲ್‌ದಲ್ಲಿ ಹಮ್ಮಿಕೊಳ್ಳಲಾಗಿದ್ದ ಸ್ಥಿತಿಸ್ಥಾಪಕತ್ವ ಮತ್ತು ಸುಸ್ಥಿರತೆಗಾಗಿ ಸಹಕಾರ ವ್ಯವಹಾರ ಮಾದರಿ ಎಂಬ ವಿಷಯದ ಮೇಲೆ 39ನೇ ವಾರ್ಷಿಕ ರಾಷ್ಟ್ರೀಯ ಸಂಶೋಧನಾ ಸಮ್ಮೇಳನವನ್ನು ?ಲಉದ್ಘಾಟಿಸಿ ಮಾತನಾಡಿದರು.

ಗದಗ ಜಿಲ್ಲೆಯ ಕಣಗಿನಹಾಳದಲ್ಲಿ 1905 ರಲ್ಲಿ ಸಿದ್ದನಗೌಡ ಸಣ್ಣ ರಾಮನಗೌಡ ಪಾಟೀಲ ಅವರು ಮೊದಲ ಕೃಷಿ ಸಾಲ ಸಹಕಾರ ಸಂಘವನ್ನು ಸ್ಥಾಪಿಸುವ ಮೂಲಕ ಸಹಕಾರದ ಬೀಜಗಳನ್ನು ಬಿತ್ತಿದರು. ನಂತರ ಜಿಲ್ಲೆಯ ಹಿರೇ ಹಂದಿಗೋಳ ಹಾಗೂ ಹುಲಕೋಟಿಯಲ್ಲಿ ಸಹಕಾರ ಸಂಘ ಸ್ಥಾಪನೆಗೊಂಡವು. 1904 ರಲ್ಲಿ ಸಹಕಾರಿ ಕ್ರೆಡಿಟ್ ಸೊಸೈಟಿಗಳ ಕಾಯಿದೆಯನ್ನು ಜಾರಿಗೊಳಿಸಿದಾಗಿನಿಂದ 2011 ರ 97 ನೇ ಸಾಂವಿಧಾನಿಕ ತಿದ್ದುಪಡಿಯವರೆಗೆ, ಸಹಕಾರಿ ಸಂಸ್ಥೆಗಳು ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಆರ್ಥಿಕ ಒಳಗೊಳ್ಳುವಿಕೆಯ ಪ್ರಮುಖ ಸಾಧನಗಳಾಗಿ ಹೊರಹೊಮ್ಮಿವೆ ಎಂದರು.

ಸಹಕಾರಿ ಹೃದಯ ಸ್ಥಿತಿಸ್ಥಾಪಕತ್ವ, ಹೊಂದಿಕೊಳ್ಳುವ ಮತ್ತು ಬಲವಾಗಿ ಹೊರ ಹೊಮ್ಮುವ ಸಾಮರ್ಥ್ಯ , ಭಾರತದ ಸಹಕಾರಿ ಚಳುವಳಿಯ ಮೂಲಾಧಾರವಾಗಿವೆ. ಭಾರತದ ಸಹಕಾರಿ ಕ್ಷೇತ್ರವು 8.50 ಕೋಟಿ ಸೊಸೈಟಿಗಳು ಮತ್ತು 29 ಕೋಟಿ ಸದಸ್ಯರನ್ನು ಹೊಂದಿರುವ ವಿಶ್ವದಲ್ಲೇ ಅತಿ ದೊಡ್ಡ ಸಹಕಾರ ಕ್ಷೇತ್ರ ಹೊಂದಿರುವ ದೇಶವಾಗಿದೆ. ಈ ಸಂಸ್ಥೆಗಳು ಕೃಷಿ, ಸಂಬಂಧಿತ ವಲಯಗಳು, ಬ್ಯಾಂಕಿಂ-ಗ್ ಮತ್ತು ಅದರಾಚೆಗಿನ ಬೆಳವಣಿಗೆಯ ಎಂಜಿನ್‌ಗಳಾಗಿ ಕಾರ್ಯನಿರ್ವಹಿಸುತ್ತವೆ, ರಾಷ್ಟ್ರದ ಆರ್ಥಿಕ ಮತ್ತು ಸಾಮಾಜಿಕ ರಚನೆಗೆ ಗಮನಾರ್ಹವಾಗಿ ಕೊಡುಗೆ ನೀಡುತ್ತಿವೆ.

ಸ್ವಾತಂತ್ರ್ಯ ಪೂರ್ವ ಬೆಳವಣಿಗೆಯ ಪ್ರಮುಖ ಲಕ್ಷಣಗಳನ್ನು ವಿವರಿಸಿದ ಸಚಿವರು, ಸಹಕಾರಿ ಭೀಷ್ಮ ಕೆ.ಎಚ್. ಪಾಟೀಲರಂತಹ ನಾಯಕರು ಸಹಕಾರಿಗಳನ್ನು ಸಮಗ್ರ ಅಭಿವೃದ್ಧಿಗೆ ಸಾಧನವಾಗಿ, ಕೈಗೆಟುಕುವ ಸಾಲ, ಗ್ರಾಮೀಣ ಮೂಲಸೌಕರ್ಯ, ಶಿಕ್ಷಣ, ಕೈಗಾ-ರಿಕೆ, ಜವಳಿ, ಜಾನುವಾರುಗಳ ಆಹಾರ ಮತ್ತು ಸಾಮಾಜಿಕ ಸಮಾನತೆಯನ್ನು ಉತ್ತೇಜಿಸುವ ಸಾಧನಗಳಾಗಿ ರೂಪಿಸಿದರು ಎಂದರು.

ಪ್ರಸಕ್ತ ವರ್ಷವನ್ನು ರಾಷ್ಟ್ರೀಯ ಸಹಕಾರ ವರ್ಷವೆಂದು ಘೋಷಣೆ ಮಾಡಲಾಗಿದೆ. ಪ್ರಸಕ್ತ ವರ್ಷದಲ್ಲಿ ಸಹಕಾರಿ ರಂಗ ಉದಯಿಸಿದ ಗದಗ ಜಿಲ್ಲೆಯಲ್ಲಿಯೇ ಕಾರ್ಯಕ್ರಮ ಆಯೋಜಿಸಿರುವುದು ಖುಷಿ ತಂದಿದ್ದು ಗದಗ ಜಿಲ್ಲೆ ನಮ್ಮ ಹೆಮ್ಮೆ ಎಂದು ಸಚಿವ ಎಚ್. ಕೆ.ಪಾಟೀಲ ಹರ್ಷ ವ್ಯಕ್ತಪಡಿಸಿದರು

ಕ.ರಾ.ಗ್ರಾ. ಪಂ.ರಾ. ವಿ.ವಿ. ರೆಜಿಸ್ಟ್ರಾರ್ ಡಾ.ಸುರೇಶ ನಾಡಗೌಡರ ಪ್ರಾಸ್ತಾವಿಕವಾಗಿ ಮಾತನಾಡಿ ಸ್ಥಿತಿಸ್ಥಾಪಕತ್ವ ಮತ್ತು ಸುಸ್ಥಿರತೆಗಾಗಿ ಸಹಕಾರ ವ್ಯವಹಾರ ಮಾದರಿ ಎಂಬ ವಿಷಯದ ಮೇಲೆ 39ನೇ ವಾರ್ಷಿಕ ರಾಷ್ಟ್ರೀಯ ಸಂಶೋಧನಾ ಸಮ್ಮೇಳನ ವಿಶ್ವ ವಿದ್ಯಾಲಯದಲ್ಲಿ ಆಯೋಜಿಸಿರುವುದು ಅತ್ಯಂತ ಸಮಂಜಸವಾಗಿದೆ. ಈ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜನೆ ಮಾಡಲು ಹಾಗೂ ವಿಶ್ವ ವಿದ್ಯಾಲಯ ಸ್ಥಾಪನೆಗೆ ಕಾರಣೀಭೂತರಾದ ಸಚಿವರಾದ ಎಚ್. ಕೆ.ಪಾಟೀಲ ಅವರು ಅಭಿನಂದನಾರ್ಹರು ಎಂದು ಪ್ರಶಂಸನಾಪೂರ್ವಕ ಮಾತುಗಳನ್ನಾಡಿದರು.

ಈ ಸಂದರ್ಭದಲ್ಲಿ ಪುಣೆಯ ಭಾರತೀಯ ಸಹಕಾರ ಅಧ್ಯಯನ ಸಂಸ್ಥೆಯ ಅಧ್ಯಕ್ಷ ಜಿ. ಎಚ್. ಅಮಿನ್, ಬೆಂಗಳೂರು ಚಾಣಕ್ಯ ವಿಶ್ವವಿದ್ಯಾಲಯ ಕುಲಪತಿ ಪ್ರೊ.ಯಶವಂತ ಡೋಗ್ರೆ, ಪಿ.ಎಲ್.ಡಿ. ಬ್ಯಾಂಕ್‌ದ ಗುರಣ್ಣಾ ಬಳಗಾನೂರ, ಮರ್ಚಂಟ್ ಲಿಬರಲ್ ಕೋ ಆಪರೇಟಿವ್ ಬ್ಯಾಂಕ್‌ದ ಅಧ್ಯಕ್ಷರಾದ ಮೋಹನ ಕೋಟಿ, ನಬಾರ್ಡದ ಜಿ.ಜಗದೀಶ , ಕೆಎಸ್‌ಎಸ್‌ಎಫ್‌ಸಿಎಲ್ ದ ಉಪಾಧ್ಯಕ್ಷರಾದ ಎ.ಆರ. ಪ್ರಸನ್ನಕುಮಾರ್, ಪುಣೆಯ ಇಂಡಿಯನ್ ಸೊಸೈಟಿ ಫಾರ್‌ಸ್ಟಡೀಸ್‌ಇನ ಕೋ ಆಪರೇಷನ್‌ದ ಕಾರ್ಯದರ್ಶಿ ಡಾ. ಅನಿಲ ಕರಂಜಿಕರ್, ಕೆ.ಎಸ್.ಎಸ್.ಎಫ್.ಸಿ. ಎಲ್. ಮ್ಯಾನೇಜಿಂಗ್ ಡೈರೆಕ್ಟರ್ ಶರಣಗೌಡ ಪಾಟೀಲ, ವಿಶ್ವವಿದ್ಯಾಲಯದ ಡಾ. ಅಬ್ದುಲ್ ಅಜೀಜ್ ಮುಲ್ಲಾ , ಡಾ. ಅಭಯಕುಮಾರ್ ಗಸ್ತಿ ಹಾಜರಿದ್ದರು.

# ಬೈಲಹೊಂಗಲದಲ್ಲಿ ಮನೆ ಮಾಡಿದ ಜಾತ್ರಾ ಸಂಭ್ರಮ

# ಭಕ್ತರನ್ನು ಉದ್ಧರಿಸುವ ಶ್ರೀ ಸದ್ಗುರು ಮಡಿವಾಳೇಶ್ವರರು



**ಜ. 5ರಂದು ಮುಂಜಾನೆ ಲಿಂ. ತಂಗೆಮ್ಮಾ ತಾಯಿಯವರ 79 ನೇ ಜಯಂತಿ ಮಹೋತ್ಸವ, ಸಂಜೆ 7ಕ್ಕೆ 43 ನೇ ಜಾತ್ರಾ ಮಹೋತ್ಸವದ ಪ್ರವಚನ ಮಂಗಳ. ಜ.6 ರಂದು 10 ಗಂಟೆಗೆ ಸಾಮೂಹಿಕ ವಿವಾಹ, ನೂತನ ಶಿಲಾಮಠದ ಲೋಕಾರ್ಪಣೆ ಸಂಜೆ 4 ಕ್ಕೆ ಗಜಪಡೆಗಳೊಂದಿಗೆ ಗುರು ಮಡಿವಾಳೇಶ್ವರರ ಮಹಾಥೋತ್ಸವವು ಅದ್ದೂರಿಯಾಗಿ ನಡೆಯಲಿದೆ. ನಾಡಿನ ವಿವಿಧ ಮಠಾಧೀಶರು, ಸಹಸ್ರರು ಭಕ್ತರು ಸಾಕ್ಷಿಯಾಗಲ್ಲಿದ್ದಾರೆ.**





**ವಿಶೇಷ ವರದಿ–ಮಹಾಂತೇಶ ರಾಜಗೋಳಿ**


ಬೈಲಹೊಂಗಲ– ಕನ್ನಡ ನಾಡಿನ ಪವಾಡ ಪುರುಷರು, ಮಹಾತಪಸ್ವಿಗಳಲ್ಲಿ ಶ್ರೀಗುರು ಮಡಿವಾಳೇಶ್ವರರು ಅಗ್ರಗಣ್ಯರು. ಸಮಾಜ ಸುಧಾರಣೆಗೆ ಅವರು ನೀಡಿದ ಕೊಡುಗೆ ಅಮೋಘವಾಗಿದ್ದು, ಭಕ್ತರ ಮನದಲ್ಲಿ ಅಜರಾಮರರಾಗಿದ್ದಾರೆ.

ಇಂತಹ ಮಹಾತಪಸ್ವಿಯ ಶ್ರೀ ಗುರು ಮಡಿವಾಳೇಶ್ವರ ಮಠವು ಬೈಲಹೊಂಗಲ ನಾಡಿನಲ್ಲಿ ಧಾರ್ಮಿಕ ಕಾರ್ಯಗಳನ್ನು ಮಾಡುತ್ತಾ ಭಕ್ತರನ್ನು ಉದ್ಧಾರ ಮಾಡುತ್ತಾ, ನಾಡಿನ ಪ್ರಮುಖ ಧಾರ್ಮಿಕ ಕೇಂದ್ರವಾಗಿದೆ. ಅಂದಿನ ಪುಟ್ಟ ಮಠವು ಇಂದು ಜೀರ್ಣೋದ್ಧಾರಗೊಂಡ ಶಿಲಾಮಠವು 2 ಕೋಟಿ ರೂ. ವೆಚ್ಚದಲ್ಲಿ ಭಕ್ತರ ತನು, ಮನ, ಧನದಿಂದ ಸಹಕಾರದಿಂದ ನಿರ್ಮಾಣಗೊಂಡು ಜ.6 ರಂದು ಪೂಜ್ಯರುಗಳ ಸಾನಿಧ್ಯದಲ್ಲಿ ಲೋಕಾರ್ಪಣೆಗೊಳ್ಳುತ್ತಿರುವದು ಭಕ್ತರ ಸಂತಸವನ್ನು ಇಮ್ಮಡಿಗೊಳಿಸಿದೆ.

ಶ್ರೀಮಠದ ವಿಶೇಷತೆ–ಅರಭಾಂವಿ ಕೆಂಪು ಕಲ್ಲಿನ ವಿಭಿನ್ನ ಆಕರ್ಷಕ ಚಿತ್ತಾರಗಳಲ್ಲಿ ಮೂಡಿ ಬಂದ 3 ಅಂತಸ್ತಿನ ಮಠವು ಹಳೆಯ ಶೈಲಿಯ ವಿನ್ಯಾಸದಲ್ಲಿದ್ದು, ಮೇಲಂತಸ್ತಿನಲ್ಲಿ ಪಿರ್ಯಾಮಿಡ್ ಆಕೃತಿಯಲ್ಲಿ ದ್ಯಾನ, ಯೋಗ ಮಂದಿರ ಹೊಂದಿದೆ. ಗುರು ಕುಟೀರ, ಶ್ರೀ ಮಡಿವಾಳೇಶ್ವರರ ಗದ್ದುಗೆ ಹೊಂದಿ ಭಕ್ತರ ಸಕಲ ಸೌಕರ್ಯ ನೀಡುವ ನಿಟ್ಟಿನಲ್ಲಿ ಆಕರ್ಷಣೀಯವಾಗಿದೆ. ಲೋಕಾರ್ಪಣೆಗಾಗಿ ವಿದ್ಯುತ್ತ ದೀಪಗಳಿಂದ ಕಂಗೊಳಿಸುತ್ತಿದೆ. ಅಲ್ಲದೆ ಪಟ್ಟಣದ ಇಂಚಲ ಕ್ರಾಸದಿಂದ ಕಮಾನ ವಿದ್ಯುತ್ತ ದೀಪಗಳು ಜಾತ್ರೆಯ ವೈಭವ ಹೆಚ್ಚಿಸಿದೆ.

ವೀರಭದ್ರೇಶ್ವನ ಅವತಾರ–ವೀರಭದ್ರೇಶ್ವನ ಅವತಾರವೇ ಎಂದು ನಂಬಲಾದ ಮಡಿವಾಳೇಶ್ವರರು ಕಿತ್ತೂರು ಚನ್ನಮ್ಮಾಜೀಯ ಆಳ್ವಿಕೆಯಲ್ಲಿ ರಾಜಗುರು ಮುದಿ ಮಡಿವಾಳೇಶ್ವರರಿಗೆ ತೋಟದಲ್ಲಿ ಬಾಳೆ ಎಲೆಯಲ್ಲಿ ಸರ್ಪದ ರಕ್ಷಣೆಯಲ್ಲಿ ಕಂಡರು. ಬಾಲ ಮಡಿವಾಳೇಶನನ್ನು ಸಾಕಿದ ಚನ್ನಮ್ಮಾಜಿ 12 ನೇ ವರ್ಷದಲ್ಲಿ ಕಾಶಿಗೆ ವಿದ್ಯಾಭ್ಯಾಸಕ್ಕೆ ಅವರನ್ನು ಕಳಿಸಿದರು. ಅಲ್ಲಿ ಶಾರದಾಪೀಠದ ಶಾರದಾದೇವಿ ಆರಾಧಕರಾಗಿ ಎಲ್ಲ ಪಂಡಿತರಿಗೂ ಮಿಗಿಲಾಗಿ ವಿದ್ಯಾಭ್ಯಾಸ ನಡೆಸಿ ಸೈ ಎನಿಸಿಕೊಂಡರು. ಕಿತ್ತೂರು ರಾಜರು ಕುತಂತ್ರಿಗಳ ಮಾತಿನಂತೆ ಅವ–ರಿಗೆ ಕಲ್ಮಠದ ರಾಜಗುರು ಪಟ್ಟ ತಪ್ಪಿಸಬೇಕೆಂದು ಕಾಶಿಗೆ ತೆರಳಿ ಗಂಗಾಜಲ ತರಲು ಕಳಿಸಿದರು. ಕೇವಲ 12 ದಿನಗಳಲ್ಲಿ ಕಾಶಿಗೆ ತೆರಳಿ ಅಲ್ಲಿಯು ತಮ್ಮ ಪವಾಡ ನಡೆಸಿ, ನೇಪಾಳ ರಾಜನನ್ನು ಸಾವಿನಿಂದ ಬದುಕಿಸಿದರು. ಗಂಗಾಜಲದೊಂದಿಗೆ ಬರುವಷ್ಟರಲ್ಲಿ ಗಂದಿಗವಾಡ ಗುರುಸಿದ್ದಸ್ವಾಮಿ ರಾಜಗುರು ಪಟ್ಟವೇರಿದ್ದಕ್ಕೆ ಆಕ್ರೋಶಗೊಂಡು ಕಿತ್ತೂರಿಗೆ ಶಾಪ ಹಾಕಿದರು. ಬೆನ್ನತ್ತಿ ಬಂದ ಸೈನಿಕರು ಅವರನ್ನು ಬೆಳವಡಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಕೂಡಿ ಹಾಕಿ ಕೀಲಿ ಜಡಿದಾಗ ತಮ್ಮ ಪವಾಡದಿಂದ ಮಾಯವಾಗಿ, ನಾಡ ಸಂಚಾರ ಮಾಡುತ್ತಾ, ಸೊಗಲದ ಗುಹೆಯಲ್ಲಿ ಅನೇಕ ವರ್ಷಗಳ ಕಾಲ ತಪಗೈದರು. ನಂತರ ಹಾವು ಕಚ್ಚಿ ಸಾವಿನ ಅಂಚಿನಲ್ಲಿದ್ದ ಹಂಗರಕಿ ದೇಸಾಯಿ ಅವರ ಮಗನನ್ನು ತಮ್ಮ ಪವಾಡದಿಂದ ಬದುಕಿಸಿ, ಅವರಿಂದ ಭೂಮಿಯನ್ನು ಕಾಣಿಕೆ ಪಡೆದು





ಗರಗದಲ್ಲಿ ಮಠ ಸ್ಥಾಪಿಸಿದರು. ಗರಗದಲ್ಲಿ ಜೀವಂತ ಸಮಾಧಿಯಾದ ಇಂದು ಅವರ ಸಮಾಧಿ ಗರಗದ ಸುಕ್ಷೇತ್ರವಾಗಿದೆ.

ನಾಡಿನ ಅನೇಕ ಸ್ಥಳಗಳಲ್ಲಿ ಸಂಚರಿಸಿದ ಫಲವಾಗಿ ಅವರು ಪಾದ ಸ್ಪರ್ಶದ ಭಾಗಗಳು ಇಂದು ಮಠಗಳಾಗಿ ನಿರ್ಮಾಣವಾಗಿವೆ. ಪೂಜ್ಯರು ಬೈಲಹೊಂಗಲಕ್ಕೆ ಆಗಮಿಸಿದಾಗ, ಮಹಿಳೆಯರು ನೀರು ಕೊಡದೆ ಅವರನ್ನು ಅವಮಾನಿಸಿದ್ದರಿಂದ ಮುಂಜಾನೆ ಹೊಂಗಲ ಸಂಜೆ ಅಮಂಗಲ ಎಂದು ಶಾಪ ನೀಡಿದರಂತೆ, ಆಗ ಪತ್ತಾರ ಎಂಬ ವೃದ್ದೆ ಮನವಿಯಂತೆ ಮುಂದಿನ ದಿನಗಳಲ್ಲಿಇಲ್ಲಿ ಮಹಿಳೆಯೋರ್ವಳು ನನ್ನನ್ನು ಆರಾಧಿಸುತ್ತಾಳೆ ಆಗ ಇಲ್ಲಿ ನನ್ನ ವೈಭವಗಳು ಜರುಗುತ್ತವೆ ನಿಮ್ಮ ಊರಿಗೆ ನೀಡಿದ ಶಾಪ ದೂರವಾಗುವದು ಎಂದರಂತೆ ಎಂದು ಹಿರಿಯರು ಹೇಳುತ್ತಿರುವದು ಇಂದು ಸತ್ಯವಾಗಿದೆ.

ಬೈಲಹೊಂಗಲ ಮಡಿವಾಳೇಶ್ವರರ ಆರಾದಕರಾದ ಶಿವಶರಣೆ, ಲಿಂ. ತಂಗೆಮ್ಮಾ ತಾಯಿ ಸುಮಾರು 50 ವರ್ಷಗಳ ಕಾಲ ಧಾರ್ಮಿಕ ಕಾರ್ಯಗಳನ್ನು ಮಾಡಿದ್ದು ಇತಿಹಾಸವೆ ಸರಿ. ಜೂನ 15 1987 ರಂದು ಶ್ರೀ ಗುರು ಮಡಿವಾಳೇಶ್ವರರ ಮಠವನ್ನು ಸ್ಥಾಪಿಸಿ, ಜನರನ್ನು ಅಧ್ಯಾತ್ಮದತ್ತ ತಿರುಗಿಸಿದ್ದರು. ಭಕ್ತರು ಅವರ ಮಹಿಮೆಯನ್ನು ಇಂದಿಗೂ ಕೊಂಡಾಡುತ್ತಿರುವರು. ಸಹಸ್ರಾರು ಸಂಖ್ಯೆಯ ಮಹಿಳಾ ಭಕ್ತರ ಪಡೆಯನ್ನೆ ಹೊಂದಿದ್ದ ಶಿವಶರಣೆ ತಂಗೆಮ್ಮಾ ತಾಯಿ ಹುಟ್ಟು ಹಾಕಿದ ಮಡಿವಾಳೇಶ್ವರ ಗದ್ದುಗೆಯ ನಿತ್ಯ ಅಭಿಷೇಕ, ಜಾತ್ರಾ ವೈಭವ, ಗಜ ಪಡೆಯೊಂದಿಗೆ ರಥೋತ್ಸವ, ಪುರವಂತರಿಂದ ವೀರಭದ್ರೇಶ್ವರರ ಸೇವೆ, ಸಾಮೂಹಿಕ ವಿವಾಹ, ಧಾರ್ಮಿಕ ಸಮಾರಂಭಗಳು, ಪ್ರತಿ ವರ್ಷ ವಿಭಿನ್ನ ರೀತಿಯ ಸಿಹಿ ಪದಾರ್ಥದ ಮಹಾ ಪ್ರಸಾದ ಅದ್ದೂರಿಯಾಗಿ ನಡೆಯುತ್ತವೆ. ಅವರ ಧಾರ್ಮಿಕ ಕಾರ್ಯಗಳನ್ನು ಕಂಡ ಪಟ್ಟಣದ ಪುರಸಭೆ ಆಡಳಿತ ಮಂಡಳಿ ಸುಮಾರು 9 ಗುಂಟೆ ಜಾಗೆಯನ್ನು ನೀಡಿದ್ದು, ಆ ಸ್ಥಳದಲ್ಲೂ ಈಗ ಶಂಭೋಲಿಂಗ ದೇವಸ್ಥಾನ ನಿರ್ಮಾಣವಾಗಿದೆ. ಶಂಭೋಲಿಂಗ, ಗಂಗಾಮಾತಾ, ಈಶ್ವರ, ನಾಗದೇವರ ವಿಗ್ರಹಗಳನ್ನು ನಿರ್ಮಿಸಲಾಗಿದೆ. ಶ್ರೀ ಮಠದಲ್ಲಿ ಮಡಿವಾಳೇಶ್ವರರ ಗದ್ದುಗೆ, ಬಸವೇಶ್ವರರ, ಚನ್ನಬಸವೇಶ್ವರರ ಮೂರ್ತಿ, ಆಂಜನೆಯ, ಅಕ್ಕಮಹಾದೇವಿ, ಲಿಂ. ತಂಗೇಮ್ಮಾ ತಾಯಿಯ ಮೂರ್ತಿಗಳು ದಿನನಿತ್ಯ ಭಕ್ತರಿಂದ ಪೂಜೆಗೊಳಪಡುತ್ತಿವೆ. ತಂಗೆಮ್ಮಾ ತಾಯಿಯವರು ನವ್ಹಂಬರ 10 2012 ರಂದು ಲಿಂಗೈಕ್ಯರಾದ ನಂತರ ಇಂದಿನ ಮಡಿವಾಳೇಶ್ವರ ಸ್ವಾಮೀಜಿ ಅವರು ಶಿವಯೋಗ ಮಂದಿರದಲ್ಲಿ ವಿದ್ಯಾಭ್ಯಾಸ, ಬೆಂಗಳೂರಿನ ಪ್ರಸಿದ್ದ ಜಯೇಂದ್ರಪುರಿ ಶ್ರೀಗಳ ರಾಜರಾಜೇಶ್ವರಿ ಮಠದಲ್ಲಿ ಸಂಸ್ಕ್ರತ ಅಧ್ಯಯನ ಪೀಠದಲ್ಲಿ ಸಂಸ್ಕ್ರತ ಪಾಂಡಿತ್ಯ ಪಡೆದು ಆದ್ಯಾತ್ಮದ ಮೂಲಕ ಸಮಾಜದ ಸುಧಾರಣೆಗೆ ಶ್ರಮಿಸುತ್ತಿದ್ದಾರೆ.

ಎಲ್ಲ ಧಾರ್ಮಿಕ ವಿಧಾಯಕ ಕಾರ್ಯ, ಪ್ರವಚನ, ಜಾತ್ರಾ ಮಹೋತ್ಸವ ಅಲ್ಲದೆ ತಂಗೆಮ್ಮಾತಾಯಿಯವರ ಜಯಂತಿ ಕಾರ್ಯಕ್ರಮಗಳನ್ನು ಕೈಕೊಂಡು ಮಠದ ಕೀರ್ತಿಯನ್ನು ಹೆಚ್ಚಿಸುತ್ತಿದ್ದಾರೆ.

## ಅಕ್ಕ ಕೆಫೆ'ಗೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ



ಹಾವೇರಿ ಜಿಲ್ಲಾ ಪಂಚಾಯತ್ ಆವರಣದ ಕೆಳಮಹಡಿಯಲ್ಲಿ ಜಿಲ್ಲಾ ಪಂಚಾಯತ್ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಗಳ ಅಡಿಯಲ್ಲಿ ವಿವಿಧ ಮಹಿಳಾ ಸಂಘಟನೆಗಳು ತೆರೆದಿರುವ ವಿವಿಧ ಮಳಿಗೆಗಳನ್ನು ಹಾಗೂ ನೂತನವಾಗಿ ನಿರ್ಮಾಣವಾಗಿರುವ *ಅಕ್ಕ ಕೆಫೆಯನ್ನು* ಜವಳಿ, ಕಬ್ಬು, ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವಾನಂದ ಪಾಟೀಲ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಶಾಸಕರು ಹಾಗೂ ವಿಧಾನಸಭೆ ಉಪ ಸಭಾಧ್ಯಕ್ಷ ರುದ್ರಪ್ಪ ಲಮಾಣಿ, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ, ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಅಭಿವೃದ್ಧಿ ನಿಗದಮ ಅಧ್ಯಕ್ಷ ಬಸವರಾಜ ಶಿವಣ್ಣವರ, ಶಾಸಕರಾದ ಯು ಬಿ ಬಣಕಾರ, ಶ್ರೀನಿವಾಸ ಮಾನೆ, ಪ್ರಕಾಶ ಕೋಳಿವಾಡ, ಯಾಸಿರ್ ಅಹ್ಮದಖಾನ್ ಪಠಾಣ, ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಣಾಧಿಕಾರಿ ಅಕ್ಷಯ ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶು ಕುಮಾರ್ ಇತರರು ಉಪಸ್ಥಿತರಿದ್ದರು.

## ಬೆಳಗಾವಿ ವಿಭಾಗದ ಕಾಂಗ್ರೆಸ್ ಕಾರ್ಮಿಕರ ಉಪಾಧ್ಯಕ್ಷರ ಆಯ್ಕೆ

ಬೆಳಗಾವಿ: ಕರ್ನಾಟಕ ಪ್ರದೇಶ ಕಾಂಗ್ರೆಸ್ ಕಾರ್ಮಿಕರ ವಿಭಾಗದ ಬೆಳಗಾವಿ ಜಿಲ್ಲಾ ಉಪಾಧ್ಯಕ್ಷರಾಗಿ ಬಸವರಾಜ ನಾಯಿಕ (ಹುಲ್ಯಾನೂರ) ಅವರನ್ನು ಆಯ್ಕೆಮಾಡಿ ಸಚಿವ ಸತೀಶ ಜಾರಕಿಹೊಳಿ ಆದೇಶ ಪತ್ರ ಹಸ್ತಾಂತ–ರಿಸಿದರು.

ಈ ಸಂದರ್ಭದಲ್ಲಿ ಬುಡಾ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ, ಕೆಪಿಸಿಸಿ ಕಾರ್ಮಿಕ ಘಟಕ ಜಿಲ್ಲಾ ಅದ್ಯಕ್ಷರ ಮಂಜುನಾಥ ಕಾಂಬಳೆ, ಹಾಗೂ ಕಾಂಗ್ರೇಸ ಯುವ ಮುಖಂಡರು,ಕಾರ್ಯಕರ್ತರು ಹಾಜರಿದ್ದರು.



## ಜ.೮ ರಂದು ಲೋಕಾಯುಕ್ತ ಜನ ಸಂಪರ್ಕ ಸಭೆ

ಬೆಳಗಾವಿ, ಬೆಳಗಾವಿ ಜಿಲ್ಲೆಯ ಸವದತ್ತಿ ತಾಲೂಕಿನಲ್ಲಿ ಜ.8 ರಂದು ಬೆಳಿಗ್ಗೆ 11 ಗಂಟೆಯಿಂದ 02 ಗಂಟೆಯವರೆಗೆ ಸವದತ್ತಿ ತಾಲ್ಲೂಕು ಪಂಚಾಯತಿ ಸಭಾ ಭವನದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಜರುಗಲಿದೆ.

ಬೆಳಗಾವಿ ಲೋಕಾಯುಕ್ತ ಅಧಿಕಾರಿಗಳು ಸವದತ್ತಿ ತಾಲೂಕಿನ ಎಲ್ಲ ತಾಲೂಕಾ ಮಟ್ಟದ ಅಧಿಕಾರಿಗಳ ಸಮಕ್ಷಮದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸರ್ಕಾರಿ ಕಛೇ–ರಿಯಲ್ಲಿಯ ಅಧಿಕಾರಿಗಳು ಸಾರ್ವಜನಿಕರ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ದೂರು ಸಲ್ಲಿಸಿದಲ್ಲಿ, ಸ್ಥಳದಲ್ಲಿಯೇ ಅಧಿಕಾ–ರಿಗಳಿಂದ ಪರಿಹರಿಸಿಕೊಳ್ಳಬಹುದು.

ಸರ್ಕಾರಿ ಅಧಿಕಾರಿಗಳು ಕೆಲಸ ಮಾಡಿಕೊಡುವಲ್ಲಿ ಹಣಕ್ಕೆ ಬೇಡಿಕೆ ಇಟ್ಟಲ್ಲಿ/ಒತ್ತಾಯಿಸಿದಲ್ಲಿ ಅಥವಾ ಸರ್ಕಾರಿ ಅಧಿಕಾರಿಯ ಅಕ್ರಮ ಆಸ್ತಿ ಸಂಪಾದನೆ ಬಗ್ಗೆ ಮಾಹಿತಿ ಇದ್ದಲ್ಲಿ, ಲೋಕಾಯುಕ್ತ ಅಧಿಕಾ–ರಿಗಳೊಂದಿಗೆ ನೇರವಾಗಿ/ಗುಪ್ತವಾಗಿ ಮಾಹಿತಿ ನೀಡಿ, ಸದರಿ ಸಭೆಯ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ವಿವರಗಳಿಗಾಗಿ ಕಛೇರಿ ದೂರವಾಣಿ ಸಂಖ್ಯೆ: (1) 0831–2950756 ಮತ್ತು (2) 0831–2421922, ಸಂಪರ್ಕಿಸಬಹುದು ಎಂದು ಪೋಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

ಬೆಳಗಾವಿ, – 2024–25 ನೇ ಸಾಲಿಗೆ ಇಲಾಖೆಯ ಬ್ಯಾಟರಿ ಚಾಲಿತ ವ್ಹೀಲ್‌ಚೇರ್(ಗಾಲಿಕುರ್ಚಿ) ಯೋಜನೆಯಡಿ ಶೇ.75 ಮತ್ತು ಅದಕ್ಕಿಂತ ಹೆಚ್ಚಿನ ದೈಹಿಕ ವಿಕಲಚೇತನರಾಗಿದ್ದು, ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಚಾಲನೆ ಮಾಡಲು ಸಾಮರ್ಥ್ಯ ಹೊಂದಿರದ ಹಾಗೂ ಕನಿಷ್ಠ ಒಂದು ಕೈ, ಒಂದು ಕಣ್ಣು ಸ್ವಾಧೀನದಲ್ಲಿದ್ದು, ಬ್ಯಾಟರಿಚಾಲಿತ ವ್ಹೀಲ್‌ಚೇರ್ ಚಲಾಯಿಸಲು ಇತರೆ ಎಲ್ಲಾ ರೀತಿಯಲ್ಲಿ ಸದೃಢರಾಗಿರುವ ದೈಹಿಕ ವಿಕಲಚೇತನರಿಂದ ಸೌಲಭ್ಯಕ್ಕಾಗಿ ಸೇವಾ ಸಿಂಧು ತಂತ್ರಾಂಶದಡಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಬೆಳಗಾವಿ ಜಿಲ್ಲೆಯಲ್ಲಿನ ಕನಿಷ್ಠ 18 ವರ್ಷ ಗರಿಷ್ಠ 60 ವರ್ಷಗಳ ವಯೋಮಿತಿಯಲ್ಲಿರುವ ಅರ್ಹ ಹಾಗೂ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ಅಗತ್ಯವಿರುವ ದೈಹಿಕ ವಿಕಲಚೇತನರು ಸದರಿ ಯೋಜನೆಯಡಿ ಜ.31 ರ ಒಳಗಾಗಿ ಸೇವಾ ಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿ ಹಾಗೂ ಅರ್ಜಿ ನಮೂನೆಗಾಗಿ ತಾಲೂಕಿನ ವಿವಿದೋದ್ದೇಶ ಮನರ್ವಸತಿ ಕಾರ್ಯಕರ್ತ (ಎಂ.ಆರ್.ಡಬ್ಲ್ಯೂ.)ರನ್ನು ಅಥವಾ ಕಛೇರಿ ದೂರವಾಣಿ ಸಂಖ್ಯೆ: 0831–2476096/7 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.ಎಲ್.ಇಡಿ ಪೂರಕ ಪರೀಕ್ಷೆ ನಿಷೇಧಾಜ್ಞೆ ಜಾರಿ

ಬೆಳಗಾವಿ, : ಜನವರಿ–2025 ರ ಮಾಹೆಯ ಡಿ.ಎಲ್.ಇಡಿ ಪ್ರಥ–ಮ, ದ್ವಿತಿಯ ವರ್ಷದ ಪೂರಕ ಪರೀಕ್ಷೆಗಳು ಜ.6 ರಿಂದ ಜ.11 ರ ವರೆಗೆ ಮರಾಠಿ ಟಿಟಿಐ, 02ನೇ ರೇಲ್ವೆ ಗೇಟ್ ಹತ್ತಿರ, ಟಿಳಕವಾಡಿ, ಬೆಳಗಾವಿಯಲ್ಲಿ ನಡೆಯಲಿವೆ

ಸದರಿ ಪರೀಕ್ಷೆಗಳ ಕಾಲಕ್ಕೆ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟ–ರ್ ವ್ಯಾಪ್ತಿಯಲ್ಲಿ ಬೆಳಿಗ್ಗೆ 9 ಗಂಟೆಯಿಂದ ಸಂಜೆ 6 ಗಂಟೆವರೆಗೆ ಕಾನೂನು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳುವ ಸಲುವಾಗಿ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಸಾರ್ವಜನಿಕರು ಗುಂಪು–ಗುಂಪಾಗಿ ಸೇರುವುದನ್ನು ನಿಷೇಧಿಸಿ ಪರೀಕ್ಷಾ ಕೇಂದ್ರದ ಸುತ್ತಲೂ ಬೆಳಗಾವಿ ನಗರ ಪೋಲಿಸ್ ಆಯುಕ್ತರು ನಿಷೇಧಾಜ್ಞೆಯನ್ನು ಹೊರಡಿಸಿರುತ್ತಾರೆ.

## ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಅರಿವು ಕಾರ್ಯಕ್ರಮ

### ಹೆಣ್ಣು ಕುಟುಂಬದ ಏಳ್ಗೆಗೆ ಹಗಲಿರುಳು ಶ್ರಮಿಸುತ್ತಾಳೆ - ಜಿ.ಪಂ.ಉಪ ಕಾರ್ಯದರ್ಶಿ ಡಾ.ರಂಗಸ್ವಾಮಿ



ಹಾವೇರಿ. ಹೆಣ್ಣು ತಾಯಿ, ತಂಗಿ–ಅಕ್ಕ, ಮಡದಿ ಹೀಗೆ ಎಲ್ಲ ಪಾತ್ರಗಳನ್ನು ಜವಾಬ್ದಾರಿಯಿಂದ ನಿಭಾಯಿಸುವ ಮೂಲಕ ತನ್ನ ಕುಟುಂಬದ ಏಳ್ಗೆಗೆ ಹಗಲಿರುಳು ಶ್ರಮಿಸುತ್ತಾಳೆ. ಹಾಗಾಗಿ ಹೆಣ್ಣನ್ನು ಭೂಮಿ ತಾಯಿಗೆ ಹೋಲಿಸಲಾಗುತ್ತದೆ ಎಂದು ಜಿ.ಪಂ.ಉಪ ಕಾರ್ಯದರ್ಶಿ ಡಾ.ಎಸ್. ರಂಗಸ್ವಾಮಿ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ(ತಡೆಗಟ್ಟುವಿಕೆ, ನಿಷೇಧಸುವಿಕೆ, ನಿವಾರಿಸುವಿಕೆ) ಅಧಿನಿಯಮ 2013 ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಹಿಳೆಯನ್ನು ಗೌರವಿಸುವ ಮನೆ ನಂದಗೋಕಲವಾಗಿರುತ್ತದೆ. ಯಾವ ಮನೆಯಲ್ಲಿ ಮಹಿಳೆ ಗೌರವ ಇಲ್ಲರುವುದಿಲ್ಲವೋ ಅದು ನರಕವಾಗಿರುತ್ತದೆ. ಹಾಗಿ ಹೆಣ್ಣನ್ನು ಗೌವರದಿಂದ ಕಾಣಬೇಕು ಎಂದು ಹೇಳಿದರು. ವಕೀಲರಾದ ಶ್ರೀಮತಿ ಕವಿತಾ ಕಿತ್ತೂರ ಅವರು ಮಾತನಾಡಿ, ದೇಶ ಎಷ್ಟೇ ಮುಂದುವರೆದಿದ್ದರೂ ಸಹ ಇಂದು ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯಗಳು ನಡೆಯುತ್ತಿರುವುದು ವಿಷಾದದ ಸಂಗತಿಯಾಗಿದೆ. ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯಗಳು ನಡೆದಾಗ ಧೈರ್ಯವಾಗಿ ಧ್ವನಿ ಎತ್ತಬೇಕು ಹಾಗೂ ದೂರು ನೀಡಲು ಮುಂದೆ ಬರಬೇಕು. ತಮ್ಮ ಕೆಲಸ ಸ್ಥಳಗಳಲ್ಲಿ ಅನುಚಿತವಾಗಿ ವರ್ತಿಸಿದರೆ ಕೂಡಲೇ ಪ್ರತಿಭಟಿಸಬೇಕು ಎಂದರು.

ಸರ್ಕಾರಿ, ಅರೆ ಸರ್ಕಾರಿ ಹಾಗೂ ಖಾಸಗಿ ಕ್ಷೇತ್ರಗಳಲ್ಲಿ 10 ಕ್ಕಿಂತ ಹೆಚ್ಚು ಮಹಿಳೆಯರು ಕಾರ್ಯನಿರ್ವಹಿಸುತ್ತಿದ್ದರೆ ಆಂತ–ರಿಕ ದೂರು ಸಮಿತಿ ಹಾಗೂ 10 ಕ್ಕಿಂತ ಕಡಿಮೆ ಮಹಿಳೆಯರು ಕೆಲಸ ಮಾಡುತ್ತಿದ್ದರೆ ಸ್ಥಳೀಯ ದೂರು ಸಮಿತಿ ರಚಿಸಲಾಗುತ್ತದೆ. ಲೈಂಗಿಕ ದೌರ್ಜನ್ಯ ನಡೆದಾಗ ಕೂಡಲೇ ಸಮಿತಿಗಳ ಗಮನಕ್ಕೆ ತರಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಶ್ರೀನಿವಾಸ ಆಲದರ್ತಿ ಮಾತನಾಡಿ, ಕಚೇರಿಗಳಲ್ಲಿ ಲೈಂಗಿಕ ದೌರ್ಜನ್ಯಗಳು ನಡೆದಾಗ ಜಿಲ್ಲಾ ಮಟ್ಟದ ದೂರು ನಿವಾರಣಾ ಸಮಿತಿ ದೂರು ಸಲ್ಲಿಸುವ ಮೂಲಕ ನ್ಯಾಯ ಪಡೆದುಕೊಳ್ಳಬಹುದು. ಈ ಕುರಿತು ಅಧಿಕಾರಿಗಳು ತಮ್ಮ ಕಚೇರಿ ಸಿಬ್ಬಂದಿಗಳಿಗೆ ಮಾಹಿತಿ ನೀಡಬೇಕು. ಕಾಯ್ದೆಗಳ ಸದುಪಯೋಗವಾಗಬೇಕು ಎಂದರು.


ಕಾರ್ಯಕ್ರಮದಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಹಾಗೂ ಲೈಂಗಿಕ ಕಿರುಕುಳ ತಡೆಯುವ ಜಿಲ್ಲಾ ಮಟ್ಟದ ದೂರು ನಿವಾರಣಾ ಸಮಿತಿ ಅಧ್ಯಕ್ಷೆ ಶ್ರೀಮತಿ ಮಮತಾ ಹೊಸಗೌಡ್ರ, ಇಡಾರಿ ಸಂಸ್ಥೆ ಅಧ್ಯಕ್ಷರು ಹಾಗೂ ಲೈಂಗಿಕ ಕಿರುಕುಳ ತಡೆಯುವ ಜಿಲ್ಲಾ ಮಟ್ಟದ ದೂರು ನಿವಾರಣಾ ಸಮಿತಿ ಸದಸ್ಯೆ ಶ್ರೀಮತಿ ಪರಿಮಳ ಜೈನ್, ಚೈತನ್ಯ ರೂರಲ್ ಡವಲಮೆಂಟ್ ಸೊಸೈಟಿ ಹಾಗೂ ಲೈಂಗಿಕ ಕಿರುಕುಳ ತಡೆಯುವ ಜಿಲ್ಲಾ ಮಟ್ಟದ ದೂರು ನಿವಾರಣಾ ಸಮಿತಿ ಸದಸ್ಯೆ ಶ್ರೀಮತಿ ಗೀತಾ ಪಾಟೀಲ ಹಾಗೂ ಲ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ಶ್ರೀಮತಿ ಭಾರತಿ ಭಜಂತ್ರಿ ಉಪಸ್ಥಿತರಿದ್ದರು. ಶ್ರೀಮತಿ ವಿಜಯಲಕ್ಷ್ಮೀ ಪಾಟೀಲ ಸ್ವಾಗತಿಸಿದರು.

## ಜ.೭ ರಂದು ಪೂರ್ವಭಾವಿ ಸಭೆ

ಹಾವೇರಿ.: ಹಾವೇರಿ ನಗರಸಭೆ 2025–26ನೇ ಸಾಲಿನ ಆಯವ್ಯಯ ತಯಾರಿಕೆ ಕುರಿತು ಸಂಘ–ಸಂಸ್ಥೆಗಳಿಂದ ಹಾಗೂ ಸಾರ್ವಜನಿಕರಿಂದ ಸಲಹೆ ಹಾಗೂ ಸೂಚನೆಗಳನ್ನು ಪಡೆಯಲು ಪೂರ್ವಭಾವಿ ಸಭೆ ಜನವರಿ 7 ರಂದು ಬೆಳಿಗ್ಗೆ 11 ಗಂಟೆಗೆ ಹಾವೇರಿ ನಗರಸಭೆ ಸಭಾಭವನದಲ್ಲಿ ಆಯೋಜಿಸಲಾಗಿದೆ ಎಂದು ನಗರಸಭೆ ಪ್ರಕಟಣೆ ತಿಳಿಸಿದೆ.

****

## ಜೈನ್ ಅಸೋಸಿಯೇಷನ್ ರಾಜ್ಯ ಉಪಾಧ್ಯಕ್ಷರಿಗೆ ಸನ್ಮಾನ



ಮೋಳೆ ;- ಕರ್ನಾಟಕ ರಾಜ್ಯ ಜೈನ್ ಅಸೋಸಿಯೇಷನ್ ಆಡಳಿತ ಮಂಡಳಿಯ ಚುನಾವಣೆಯಲ್ಲಿ ರಾಜ್ಯ ಉಪಾಧ್ಯಕ್ಷರಾಗಿ ಆಯ್ಕೆಗೊಂಡ ಕಾಗವಾಡ ತಾಲೂಕಿನ ಉಗಾರ ಗ್ರಾಮದ ಪದ್ಮಾವತಿ ಮಂದಿರದ ಧರ್ಮಾಧಿಕಾರ ಶೀತಲಗೌಡ ಪಾಟೀಲ ಭರ್ಜರಿ ಗೆಲುವು ಸಾಧಿಸಿರುವುದಕ್ಕೆ ಐನಾಪುರ ಪಟ್ಟಣದ ಜೈನ ಸಮುದಾಯದ ವತಿಯಿಂದ ಸನ್ಮಾನಿಸಲಾಯಿತು.

ಇತ್ತೀಚಿಗೆ ನಡೆದ ಚುನಾವಣೆಯಲ್ಲಿ ಶೀತಲಗೌಡ ಪಾಟೀಲರು ಕರ್ನಾಟಕ ರಾಜ್ಯ ಜೈನ್ ಅಸೋಸಿಯೇಷನ್ ಆಡಳಿತ ಮಂಡಳಿಯ ನಿರ್ದೇಶಕ ಸ್ಥಾನ ಹಾಗೂ ರಾಜ್ಯ ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ದಿಸಿದ್ದರು, ಎರಡು ಸ್ಥಾನಗಳಲ್ಲಿ ಸ್ಪರ್ದಿಸಿ ಗೆಲುವು ಸಾಧಿಸಿದ್ದಕ್ಕಾಗಿ ಇಂದು ಐನಾಪುರ ಜೈನ ಸಮಾಜದ ವತಿಯಿಂದ ಸನ್ಮಾನಿಸಲಾಯಿತು ಎಂದು ವಿದ್ಯಾವರ್ದಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಸಂಜಯ ಕುಚನೂರೆ ಹೇಳಿದರು.

ಅವರು ಶನಿವಾರ ಉಗಾರ ಪಟ್ಟಣದಲ್ಲಿ ಏರ್ಪಡಿಸಿ ಸಮಾರಂಭದಲ್ಲಿ ಸನ್ಮಾನಿಸಿ ಮಾತನಾಡುತ್ತಿದ್ದರು. ಶೀತಲಗೌಡ ಪಾಟೀಲರು ಗಡಿ ಭಾಗದಿಂದ ರಾಜ್ಯ ಉಪಾಧ್ಯಕ್ಷ ಸ್ಥಾನಕ್ಕೆ ಗೆಲುವು ಸಾಧಿಸಿರುವದರಿಂದ ಜೈನ ಸಮಾಜಕ್ಕೆ ಆನೆ ಬಲ ಬಂದಂತಾಗಿದೆ ಎಂದರು. ಮುಂಬರುವ ದಿನಮಾನಗಳಲ್ಲಿ ಈ ಭಾಗದ ಸಮಾಜ ಬಾಂದವ-ರಿಗೆ ಸದಸ್ಯತ್ವವನ್ನು ನೀಡುವ ಮೂಲಕ ಸಮಾಜದ ಕೆಲಸ ಮಾಡಲು ಸ್ಪೂರ್ತಿ ತುಂಬಬೇಕೆಂದು ಸಂ-ಜಯ ಕುಚನೂರೆ ಹೇಳಿದರು.

ಸನ್ಮಾನ ಸ್ವೀಕರಿಸಿದ ಶೀತಲಗೌಡ ಪಾಟೀಲ ಮಾತನಾಡಿ ಕರ್ನಾಟಕ ರಾಜ್ಯ ಜೈನ್ ಅಸೋಸಿಯೇಷನ್ ತಮ್ಮೆಲ್ಲರ ಆಸ್ತಿ, ಅದನ್ನು ಉಳಿಸಿ ಬೆಳೆಸಿಕೊಂಡು ಹೋಗುವುದು ತಮ್ಮೆಲ್ಲರ ಜವಾಬ್ದಾರಿ. ಮುಂಬರುವ ದಿನಮಾನಗಳಲ್ಲಿ ಪೂಜ್ಯದ ಆದ-'ೇಶ ಪಡೆದು ಆಸಕ್ತಿ ಹೊಂದಿದ ಎಲ್ಲರಿಗೂ ಸದಸ್ಯತ್ವ ನೀಡುವ ಜವಾಬ್ದಾರಿ ನನ್ನದು ಎಂದು ಶೀತಲಗೌಡ ಪಾಟೀಲ ಹೇಳಿದದರು.

ಈ ವೇಳೆ ಜೈನ ಸಮಾಜದ ಮುಖಂಡರಾದ ಬಾಳಾಸಾಬ ದಾನೊಳ್ಳಿ, ತಾತ್ಯಾಸಾಬ ಬೋಗಾರ, ಅಪ್ಪಾಸಾಬ ಚೌಗುಲೆ, ಅನುಪ ಶೆಟ್ಟಿ, ಯಶವಂತ ಪಾಟೀಲ, ಪ್ರದೀಪ ಲಿಂಬಿಕಾಯಿ, ಪ್ರಮೋದ ಲಿಂಬಿಕಾಯಿ, ಮಹಾವೀರ ಪಾಟೀಲ,ಸಂದೀಪ ಪಾಟೀಲ, ಭರತೇಶ ಪಾಟೀಲ,ಮಹೇಂದ್ರ ತೆರದಾಳೆ, ಶೈಲೇಶ ಚೌಗುಲೆ, ಪ್ರತೀಕ ಕುಚನೂರೆ, ಶೀತಲ ಪಾಟೀಲ, ಪ್ರಮೋದ ಪಾಟೀಲ, ಸಿದ್ದಾಂತ ಪಾಟೀಲ, ಸನ್ನಿ ಪಾಟೀಲ ಸೇರಿದಂತೆ ಅನೇಕರು ಇದ್ದರು.

## ಜಿಲ್ಲಾ ವಿಜ್ಞಾನ ಕೇಂದ್ರಗಳ ಅಭಿವೃದ್ಧಿಗೆ ಒತ್ತು- ಸಚಿವ ಎನ್.ಎಸ್. ಭೋಸರಾಜು



ಕೊಪ್ಪಳ : ರಾಜ್ಯದಲ್ಲಿರುವ ಜಿಲ್ಲಾ ವಿಜ್ಞಾನ ಕೇಂದ್ರಗಳ ಅಭಿವೃದ್ಧಿಗೆ ಮನವಿಗಳು ಬರುತ್ತಿದ್ದು ಅವುಗಳ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ ಎಂದು ಸಣ್ಣ ನೀರಾವರಿ. ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಭೋಸರಾಜು ಹೇಳಿದರು.

ಅವರು ಶನಿವಾರ ಕೊಪ್ಪಳ ನಗರದಲ್ಲಿರುವ ಉಪ- ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಭೇಟಿ ನೀಡಿದ ನಂತರ ಮಾಧ್ಯಮ ಪ್ರತಿನಿಧಿಗಳಿಗೆ ಮಾಹಿತಿ ನೀಡಿ ಮಾತನಾಡಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಶೇ. 50:50 ರ ಅನುದಾನದಲ್ಲಿ ಈಗಾಗಲೇ ರಾಯಚೂರು. ಯಾದಗಿರಿ ಮತ್ತು ಮಂಗಳೂರಿನಲ್ಲಿ ಒಳ್ಳೆಯ ವಿಜ್ಞಾನ ಕೇಂದ್ರಗಳನ್ನು ಮಾಡುತ್ತಿದ್ದೇವೆ. ಅದರಂತೆ ಉತ್ತರ ಕರ್ನಾಟಕದ ಜಿಲ್ಲೆಯ ಎಲ್ಲಾ ಕಡೆ ಪ್ರೌಢ ಶಾಲೆಯ ಮಕ್ಕಳಿಗೆ ಅನುಕೂಲವಾಗುವ ಮತ್ತು ಅವರಿಗೆ ವಿಜ್ಞಾನದ ಕುರಿತು ಮಾಹಿತಿ ನೀಡಲು ಈ ಕೇಂದ್ರಗಳನ್ನು ಅಭಿವೃದ್ಧಿಪಡಿಸಲು ಅನುದಾನವನ್ನು ನೀಡಲಾಗುವುದು ಎಂದರು.

ಮೊಬೈಲ್ ವ್ಯಾನಗಳ ಮುಖಾಂತರ ಶಾಲೆಗಳಿಗೆ ತೆರಳಿ ವಿಜ್ಞಾನದ ಮಾಹಿತಿಯನ್ನು ಮಕ್ಕಳಿಗೆ ನೀಡಲಾಗುತ್ತದೆ. ಜಿಲ್ಲಾ ವಿಜ್ಞಾನ ಕೇಂದ್ರದ ಅಧ್ಯಕ್ಷರು ಜಿಲ್ಲಾಧಿಕಾರಿಗಳು ಆಗಿರುವುದರಿಂದ ಆಗಾಗ್ಗೆ ಸಭೆ ನಡೆಸಿ ವಿಜ್ಞಾನ ಕೇಂದ್ರಕ್ಕೆ ಬೇಕಾಗುವ ಸೌಲಭ್ಯಗಳನ್ನು ಒದಗಿಸಬೇಕು. ಇದಕ್ಕೆ ಆಯಾ ಜಿಲ್ಲೆಯ ಸಚಿವರು. ಸಂಸದರು. ಶಾಸಕರು ತಮ್ಮ ಸ್ಥಳೀಯ ಅನುದಾನದಲ್ಲಿ ನೆರವನ್ನು ನೀಡುವ ಮೂಲಕ ವಿಜ್ಞಾನ ಕೇಂದ್ರಗಳ ಅಭಿವೃದ್ಧಿಗೆ ಎಲ್ಲರೂ ಸಹಾಯ ಸಹಕಾರ ನೀಡಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ಜಿಲ್ಲಾಧಿಕಾರಿ ನಲಿನ್ ಅತುಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಮಾಜಿ ಸಂಸದರಾದ ಸಂಗಣ್ಣ ಕರಡಿ, ಕೊಪ್ಪಳ ತಹಶೀಲ್ದಾರ ವಿಠಲ್ಲ ಚೌಗಲೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಶ್ರೀಶೈಲ ಬಿರಾದಾರ ಸೇರಿದಂತೆ ಉಪ- ಪ್ರಾದೇಶಿಕ ವಿಜ್ಞಾನ ಕೇಂದ್ರದ ಇತರೆ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

*********

## ಲೋಕಾಯುಕ್ತ ಜನ ಸಂಪರ್ಕ ಸಭೆ

ಗದಗ: ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಅವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಛೇರಿಯ ಪೊಲೀಸ್ ಅಧಿಕಾರಿಗಳು ಜನೆವರಿ 8 ರಂದು ಬೆ 10.30 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ತಹಶೀಲ್ದಾರ ಕಛೇರಿ ಸಭಾ ಭವನ ಲಕ್ಷ್ಮೆ?ಮೇಶ್ವರದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕ-ರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಸದರಿ ದಿನಾಂಕದಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು.

ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು, ಅಹವಾಲುಗಳನ್ನು ಹಾಗೂ ತಮ್ಮ ಸರಕಾರಿ ಕೆಲಸಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡಿಕೊಡಲು ಅಧಿಕಾರಿಗಳು ಉದ್ದೇಶ ಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸಬಹುದು. ಸರಕಾರಿ ಅಧಿಕಾರಿಗಳು ಸರಕಾರದ ಯೋಜನೆಗಳ ಲಾಭವನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಉದ್ದೇಶಪೂರ್ವಕ ತಾರತಮ್ಯ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸಬಹುದಾಗಿದೆ.

ಸರಕಾರದ ಯೋಜನೆಗಳ ಅನುಷ್ಠಾನದಲ್ಲಿ ಅನಗತ್ಯ ವಿಳಂಬ, ಕಳಪೆ ಕಾಮಗಾರಿ ನಡೆಸಿ ಹಣ ದುರುಪಯೋಗ ಪಡಿಸಿದ ದೂರುಗಳ ಬಗ್ಗೆ ಹಾಗೂ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ನಿಗದಿತ ಸಮಯದೊಳಗೆ ಮಾಡಿಕೊಡದೆ, ಅಕ್ರಮ ಸಂಭಾವನೆ (ಲಂಚದ ಹಣ)ಯ ಸಲುವಾಗಿ ಅನಗತ್ಯ ವಿಳಂಬ ಮಾಡುತ್ತಿದ್ದರೆ ಲಿಖಿತ ದೂರನ್ನು ದಾಖಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಗದಗ ಆರಕ್ಷಕ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

********

## ಅರ್ಜಿ ಆಹ್ವಾನ

ಧಾರವಾಡ : ಜನವರಿ 26, 2025 ರಂದು ಜರುಗಲಿರುವ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ನಡೆಯುವ ಸನ್ಮಾನ ಕಾರ್ಯಕ್ರಮಕ್ಕಾಗಿ 2024 ನೇ ವರ್ಷದ ರಾಷ್ಟ್ರಮಟ್ಟದ ಕ್ರೀಡಾ ಕೂಟದಲ್ಲಿ ಭಾಗವಹಿಸಿ ಪದಕ ವಿಜೇತ ಹಾಗೂ ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿದ ಕ್ರೀಡಾಪಟುಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಸಾಧಕರು ಜನವರಿ 16, 2025 ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836-2447424ಗೆ ಅಥವಾ ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ನಯಾನಗರ ಪಿಕೆಪಿಎಸ್‌ಗೆ ಅಧ್ಯಕ್ಷ- ಉಪಾಧ್ಯಕ್ಷರ ಅವಿರೋಧ ಆಯ್ಕೆ





ಬೈಲಹೊಂಗಲ-ತಾಲೂಕಿನ ನಯಾನಗರ ಗ್ರಾಮದ ವಿವಿದ್ಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘಕ್ಕೆ ಐದು ವರ್ಷದ ಅವಧಿಗೆ ಬುಧವಾರ ನಡೆದ ಅಧ್ಯಕ್ಷ-ಉಪಾಧ್ಯಕ್ಷರ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಮುದಕಪ್ಪ ಬಸಪ್ಪ ತೋಟಗಿ ಹಾಗೂ ಉಪಾದ್ಯಕ್ಷರಾಗಿ ಚಂದ್ರಪ್ಪ ಹಣಮಂತಪ್ಪ ಉಜ್ಜನಕೊಪ್ಪ ಇವರು ಸರ್ವಾನುಮತದಿಂದ ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ.

ಸದಸ್ಯರಾದ ಜಗದೀಶ ಅಡಕಿ, ಬೀಮಪ್ಪ ಕ-ರಿದೇಮಣ್ಣವರ, ಬಸಟೆಪ್ಪ ಅಡಕಿ, ಬಸವರಾಜ ತೋಟಗಿ, ಬಸನಗೌಡ ಸಂಕಣ್ಣವರ, ಸುಮಿತ್ರಾ ಹಂಪಿಹೊಳಿ, ಪಾರವ್ವ ತೋಟಗಿ, ರಮೇಶ ಅರವಳ್ಳಿ, ಮಂಜುನಾಥ ಹಡಪದ, ಬಸಪ್ಪ ಕಾಳೆ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಚುನಾವಣಾಧಿಕಾರಿಯಾಗಿ ರಾಕೇಶ ಗೋವನಕೊಪ್ಪ ಕಾರ್ಯನಿರ್ವಹಿಸಿದರು. ಸಂಘದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ಕಾಲಗಗ್ಗರಿ ಹಾಗೂ ಗ್ರಾಮದ ಹಿರಿಯರು, ಮುಖಂಡರು ಪಾಲ್ಗೊಂಡಿದ್ದರು.

## ಹಿರಿಯ ಪತ್ರಕರ್ತರಾದ ಹನುಮಾನಸಿಂಗ್ ಜಮಾದಾರ ಅವರು ಮಾಧ್ಯಮ ಅಕಾಡೆಮಿ ಪ್ರಶಸ್ತಿಗೆ ಆಯ್ಕೆ



ಗದಗ : ಕರ್ನಾಟಕ ಮಾಧ್ಯಮ ಅಕಾಡೆಮಿಯ 2023 ಹಾಗೂ 2024 ರ ವಾರ್ಷಿಕ ಪ್ರಶಸ್ತಿಗಳನ್ನು ಗುರುವಾರ ಘೋಷಿಸಲಾಗಿದೆ.

ನಗರದ ಹಿರಿಯ ಪತ್ರಕರ್ತರಾದ ಹನುಮಾನಸಿಂಗ್ ಜಮಾದಾರ ಅವರ ಪತ್ರಿಕಾ ರಂಗದಲ್ಲಿ ಸಲ್ಲಿಸಿದ ಜೀವಮಾನ ಸಾಧನೆಗಾಗಿ 2023 ರ ಸಾಲಿನ ವಿಶೇಷ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ ಮತ್ತು ನಗರದಲ್ಲಿ ವರದಿಗಾರರಾಗಿ ಸೇವೆ ಸಲ್ಲಿಸಿದ್ದ ಸಿದ್ದಯ್ಯ ಹಿರೇಮಠ ಹಾಗೂ ಪ್ರಕಾಶ ಶೇಠ ಅವರು ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪ್ರಶಸ್ತಿ ಪ್ರಧಾನ ಸಮಾರಂಭದ ದಿನಾಂಕ ಸದ್ಯದಲ್ಲಿಯೇ ಪ್ರಕಟಿಸಲಾಗುವದು ಎಂದು ಮಧ್ಯಮ ಅಕಾಡೆಮಿಯ ಅಧ್ಯಕ್ಷ ಅಯೇಷಾ ಕಾನುಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಕುರಿತು ರೈತರಲ್ಲಿ ಮನವಿ

ಧಾರವಾಡ : 2024-25 ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ಬೆಳೆ ಸಮೀಕ್ಷೆ ಆ್ಯಪ್ ಬಿಡುಗಡೆ ಮಾಡಿದ್ದು ರೈತರು ತಾವು ಬೆಳೆದ ಬೆಳೆಗಳ ಮಾಹಿತಿಯನ್ನು ಬೆಳೆ ಸಮೀಕ್ಷೆ ಆ್ಯಪ್‌ನಲ್ಲಿ ನೊಂದಾಯಿಸಬೇಕು. ಸರಕಾರದ ವಿವಿಧ ಯೋಜನೆಗಳಾದ ಫಸಲ ಭೀಮಾ ಯೋಜನೆ, ಬೆಳೆ ಪರಿಹಾರ, ಬೆಂಬಲ ಬೆಲೆ ಯೋಜನೆಗಳ ಸೌಲಭ್ಯವನ್ನು ಪಡೆಯಲು ಬೆಳೆ ಸಮೀಕ್ಷೆ ಮಾಡುವುದು ಅವಶ್ಯಕವಾಗಿರುತ್ತದೆ. ಬೆಳೆ ವಿಮೆ ಮಾಡಿಸಿದ ರೈತರು ಕಡ್ಡಾಯವಾಗಿ ತಾವು ಬೆಳೆದ ಬೆಳೆಯನ್ನು ಬೆಳೆ ಸಮೀಕ್ಷೆಯಡಿ ನೋಂದಾಯಿಸಬೇಕು. ಬೆಳೆ ಸಮೀಕ್ಷೆ ಆ್ಯಪ್‌ನ್ನು ಗೂಗಲ್ ಪ್ಲೇಸ್ಟೋರ್‌ನಲ್ಲಿ ಲಭ್ಯವಿದ್ದು, ಹಿಂಗಾರು ರೈತರ ಬೆಳೆ ಸಮೀಕ್ಷೆ 2024 ಎಂದು ಟೈಪ್ ಮಾಡಿ ಆ್ಯಪ್ ಡೌನ್ಲೋಡ್ ಮಾಡುವ ಮೂಲಕ ಪಡೆದು ಬೆಳೆ ಸಮೀಕ್ಷೆ ಮಾಡಬಹುದು ಹಾಗೂ ಖಾಸಗಿ ನಿವಾಸಿಗಳನ್ನು ಸಂಪರ್ಕಿಸಿ ಖಾಸಗಿ ನಿವಾಸಿ ಬೆಳೆ ಆ್ಯಪ್ ಮೂಲಕವು ಬೆಳೆ ಸಮೀಕ್ಷೆಯನ್ನು ಮಾಡಿಸಬಹುದು ಎಂದು ಧಾರವಾಡ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕ ರಾಜಶೇಖರ ಅಣಗೌಡರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೂತನ ಅಧ್ಯಕ್ಷರಿಗೆ, ಪದಾಧಿಕಾರಿಗಳಿಗೆ, ಸದಸ್ಯರಿಗೆ ಕೃಷಿ ಇಲಾಖೆಯಿಂದ ಸನ್ಮಾನ



ಸಿಂದಗಿ: ತಾಲೂಕಾ ಕೃಷಿಕ ಸಮಾಜದ 2025-26 ರಿಂದ 2029-30 ರ ಅವಧಿಯ ಕಾರ್ಯಕಾರಿ ಸಮಿತಿಯ ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳ ಆಯ್ಕೆಗಾಗಿ ಪಟ್ಟಣದ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯದಲ್ಲಿ ಮಂಗಳವಾರ ಚುನಾವಣೆ ಜರುಗಿತು. ಶಿವಪ್ಪಗೌಡ ಬಿರಾದಾರ ಅವರು ಪುನಃ ಅಧ್ಯಕ್ಷರಾಗಿ, ಉಪಾಧ್ಯಕ್ಷರಾಗಿ ಬಸಯ್ಯ ಹಿರೇಮಠ, ಪ್ರಧಾನಕಾರ್ಯದರ್ಶಿಯಾಗಿ ದೇವೆಂದ್ರ ಬಡಿಗೇರ, ಖಜಾಂಚಿಂ-ಯಾಗಿ ಶ್ಯಾಯಪ್ಪ ಪೂಜಾರಿ, ಜಿಲ್ಲಾ ಪ್ರತಿನಿಧಿಯಾಗಿ ರಮೇಶ ಪೂಜಾರ ಅವರು ಸರ್ವಾನುಮತದಿಂದ ಅವಿರೋಧವಾಗಿ ಆಯ್ಕೆಯಾದರು.

ಚುನಾವಣಾಧಿಕಾರಿಯಾಗಿ ಸಹಾಯಕ ಕೃಷಿ ನಿರ್ದೇಶಕ ಡಾ.ಎಚ್. ವಾಯ್.ಸಿಂಗೆಗೋಳ, ಸಹಾಯಕ ಚುನಾವಣಾಧಿಕಾರಿಯಾಗಿ ಕೃಷಿ ಅಧಿಕಾರಿ ಶಿವಾನಂದ ಹೂವಿನಹಳ್ಳಿ ಅವರು ಕಾರ್ಯನಿರ್ವಹಿಸಿದರು.

ಚುನಾವಣೆ ಸಂದರ್ಬದಲ್ಲಿ 2025-26 ರಿಂದ 2029-30 ರ ಅವಧಿಯ ಕಾರ್ಯಕಾರಿ ಸಮಿತಿಯ ಸದಸ್ಯರಾದ ಹಿಕ್ಕನಗೂತ್ತಿಯ ನಾಗಪ್ಪ ಬಿರಾದಾರ, ಬಂದಾಳದ ರೇವಣಸಿದ್ದಪ್ಪ ಬಡಾನೂರ, ಸಿಂದಗಿಯ ಸಿದ್ದಪ್ಪ ಹಿರೇಕುರಬರ, ಷಡಕ್ಷರಯ್ಯ ನಂದಿಕೋಲ, ಅರವಿಂದ ಬಿರಾದಾರ, ಶಶಿಕಲಾ ಬಿರಾದಾರ, ಆರ್.ಪಿ. ಬಿರಾದಾರ, ವಕೀಲ ಬಿ.ಜಿ. ನೆಲ್ಲಗಿ, ಅಶೋಕ ಅಲ್ಲಾಪೂರ ಅವರು ಚುನಾವಣೆ ಪ್ರಕ್ರೀಯೆಯಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಕೃಷಿ ಇಲಾಖೆಯಿಂದ ನೂತನ ಅಧ್ಯಕ್ಷ ಶಿವಪ್ಪಗೌಡ ಬಿರಾದಾರ, ಉಪಾಧ್ಯಕ್ಷ ಬಸಯ್ಯ ಹಿರೇಮಠ, ಪ್ರಧಾನಕಾರ್ಯದರ್ಶಿ ದೇವೆಂದ್ರ ಬಡಿಗೇರ, ಖಜಾಂಚಿ ಶ್ಯಾಯಪ್ಪ ಪೂಜಾರಿ, ಜಿಲ್ಲಾ ಪ್ರತಿನಿಧಿ ರಮೇಶ ಪೂಜಾರ ಹಾಗೂ ಸದಸ್ಯರನ್ನು ಸನ್ಮಾನಿಸಿ ಗೌರವಿಸಿದರು. ಸನ್ಮಾನೋತ್ತರವಾಗಿ ನೂತನ ಅಧ್ಯಕ್ಷ ಶಿವಪ್ಪಗೌಡ ಬಿರಾದಾರ ಮಾತನಾಡಿ, ಕೃಷಿ ಸಮಾಜದ ಎಲ್ಲ ಪದಧಿಕಾ-ರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ. ಇದಕ್ಕೆ ಕಾರಣರಾದ ಎಲ್ಲ ಪದಾಧಿಕಾರಿಗಳು, ಸದಸ್ಯರಿಗೆ ಅಭಿನಂಧನೆ ಸಲ್ಲಿಸುತ್ತೇನೆ. ತಾಲೂಕಿನ ಕೃಷಿಕರು, ರೈತರ ಪರವಾಗಿ ನಾನು ಪ್ರಾಮಾಣಿಕವಾಗಿ ಕೆಲಸವನ್ನು ಮಾಡುತ್ತಿದ್ದೇನೆ. ಸರ್ಕಾರದಿಂದ ಸಿಗುವ ಸವಲತ್ತುಗಳನ್ನು ರೈತರಿಗೆ ತಲಿಪಿಸುವ ನಿಟ್ಟಿನಲ್ಲಿ ನಿಷ್ಠೆಯಿಂದ ಕೆಲಸವನ್ನು ಮಾಡಿದ್ದೇನೆ. ಈ ಫಲವಾಗಿ ಜಿಲ್ಲೆಯಲ್ಲಿಯೇ ಸಿಂದಗಿ ತಾಲೂಕಿನಲ್ಲಿ ಕೃಷಿಕ ಸಮಾಜದ ಕಾರ್ಯಾಲಯದ ಕಟ್ಟಡ ನಿರ್ಮಾಣಮಾಡಲಾಗಿದೆ. ಕಟ್ಟಡ ನಿರ್ಮಾಣದ ಕಾರ್ಯದಲ್ಲಿ ಸಹಾಯಕ ಕೃಷಿ ನಿರ್ದೇಶಕ ಡಾ. ಎಚ್.ವಾಯ.ಸಿಂಗೆಗೋಳ ಅವರ ಪಾತ್ರವು ಪ್ರಮುಖವಾಗಿದೆ. ಸಾಕಷ್ಟು ಶ್ರಮ ವಹಿಸಿ. ಜನಪ್ರತಿನಿಧಿಗಳಲ್ಲಿ ಅನುದಾನ ತರುವ ಮೂಲಕ ಕಟ್ಟಡ ನಿರ್ಮಾಣ ಮಾಡಲಾಗಿದೆ. ಅಲ್ಲದೇ 50ಜನ ರೈತರಿಗೆ ಕೃಷಿ ಅಧ್ಯಯನ ಪ್ರವಾಸ ಮಾಡಲಿಸಲಾಗಿದೆ. ಎಲ್ಲ ಪದಾಧಿಕಾರಿಗಳ ಹಾಗೂ ಸದಸ್ಯರ ಸಹಕಾರದಿಂದ ತಾಲೂಕಿನಲ್ಲಿ ಕೃಷಿ ಸಮಾಜದ ಚಟುವಟಿಕೆಗಳನ್ನು ಹೆಚ್ಚು ಹೆಚ್ಚು ಮಾಡೋಣ ಎಂದು ಹೇಳಿದರು. ನೂತನ ಜಿಲ್ಲಾ ಪ್ರತಿನಿಧಿ ರಮೇಶ ಪೂಜಾರ, ಕಾರ್ಯಕಾರಿ ಸಮಿತಿ ನೂತನ ಸದಸ್ಯ ಬಿ.ಜಿ. ನೆಲ್ಲಗಿ ಮಾತನಾಡಿ, ಸಿಂದಗಿ ತಾಲೂಕಿನಲ್ಲಿ ಕೃಷಿಕ ಸಮಾಜದ ಬೆಳವಣಿಗೆಯಲ್ಲಿ ಅಧ್ಯಕ್ಷ ಶಿವಪ್ಪಗೌಡ ಬಿರಾದಾರ ಅವರ ಪಾತ್ರ ಹಿರಿಯದಾಗಿದೆ. ಅವರ ಮಾರ್ಗದರ್ಶನದಲ್ಲಿ ತಾಲೂಕಿನ ರೈತರಿಗೆ ಅನಕೂಲಕರವಾಗುವ ಕೃಷಿ ಮೇಳ, ಕಾರ್ಯಾಗಾರ ಸೇರಿದಂತೆ ವಿನೂತನ ಕಾರ್ಯಕ್ರಮಗಳನ್ನು ಆಯೋಜಿಸೋಣ ಎಂದು ಹೇಳಿದರು.

ಸಹಾಯಕ ಕೃಷಿ ನಿರ್ದೇಶಕ ಡಾ.ಎಚ್.ವಾಯ್.ಸಿಂಗೆಗೋಳ ಮಾತನಾಡಿ, ಕೃಷಿ ಚಟುವಟಿ-ಕೆ ಉತ್ತೇಜನ ಕಾರ್ಯಕ್ರಮಗಳಲ್ಲಿ ಪದಾಧಿಕಾರಿಗಳ ಸಲಹೆ ಪಡೆಯಲಾಗುವುದು ಎಂದು ಹೇಳಿದರು. ಈ ಸಂದರ್ಭದಲ್ಲಿ ರೈತರು ಹಾಗೂ ಕೃಷಿ ಇಲಾಖೆಯ ಸಿಬ್ಬಂಧಿ ಭಾಗವಹಿಸಿದ್ದರು.

## ಮತದಾರಪಟ್ಟಿ ಪರಿಷ್ಕರಣೆ ವೀಕ್ಷಕರಾದ ಎನ್. ಜಯರಾಂ ಭೇಟಿ ;ಅಧಿಕಾರಿಗಳೊಂದಿಗೆ ಸಭೆ



ಧಾರವಾಡ : ಧಾರವಾಡ ಜಿಲ್ಲೆಯ ಮತದಾರ ಪಟ್ಟಿ ಪರಿಷ್ಕರಣೆ ವೀಕ್ಷಕರಾದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಎನ್. ಜಯರಾಂ ಅವರು ಇಂದು ಧಾರವಾಡ ಜಿಲ್ಲೆಗೆ ಭೇಟಿ ನೀಡಿ, ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾ-ರಿಗಳ ಕಚೇರಿ ಸಭಾಂಗಣದಲ್ಲಿ ಪ್ರಗತಿ ಪರಿಶೀಲನೆ ಮಾಡಿದರು.

ಅವರು ಅಧಿಕಾರಿಗಳೊಂದಿಗೆ ಸಭೆ ಜರುಗಿಸಿ, ಜಿಲ್ಲೆಯ ಮತದಾರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯ ನಿಯಮಾನುಸಾರ ಜರುಗಬೇಕು. ಸಹಾಯಕ ಚುನಾವಣಾಧಿಕಾ-ರಿಗಳು ಮತದಾರ ಪಟ್ಟಿ ಪರಿಷ್ಕರಣೆ ಮೇಲುಸ್ತುವಾರಿ ವಹಿಸಿ, ಪರಿಶೀಲಿಸಬೇಕು.

ಮತದಾರರ ಹೆಸರು, ಅಡ್ಡಹೆಸರು, ವಯಸ್ಸು ಅರ್ಜಿ ನಮೂನೆ-8 ರ ಅನುಸಾರ ದಾಖಲಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಮತದಾರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯ ಉತ್ತಮವಾಗಿ ಜರುಗಿದ್ದು, ಅಂತಿಮ ಮತದಾರ ಪಟ್ಟಿ ಪ್ರಕಟಿಸುವ ಪೂರ್ವದಲ್ಲಿ ಮತ್ತೊಮ್ಮೆ ಸಂಬಂಧಿಸಿದ ಮತದಾರ ನೋಂದಣಿ ಅಧಿಕಾರಿಗಳು, ಸಹಾಯಕ ಮತದಾರ ನೋಂದಣಿ ಅಧಿಕಾ-ರಿಗಳು ಪರಿಶೀಲಿಸಬೇಕೆಂದು ಎನ್. ಜಯರಾಂ ಅವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಮತದಾರ ನೋಂದಣಿ ಅಧಿಕಾರಿ ಆಗಿರುವ ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಆಯುಕ್ತರಾದ ಮತದಾರ ನೋಂದಣಿ ಅಧಿಕಾರಿ ಡಾ. ಈಶ್ವರ್ ಉಳ್ಳಾಗಡ್ಡಿ, ಸಹಾಯಕ ಮತದಾರ ನೋಂದಣಿ ಅಧಿಕಾ-ರಿಗಳು ಹಾಗೂ ತಹಶಿಲ್ದಾರರಾದ ಡಾ. ದೊಡ್ಡಪ್ಪ ಹೂಗಾರ, ಕಲಗೌಡ ಪಾಟೀಲ, ಬಿ.ಜಿ ಮಜ್ಜಗಿ, ವಿರೇಶ ಮುಳಗುಂದಮಠ, ರಾಜು ಮಾವರಕರ, ಸುಧೀರ ಸಾಹುಕಾರ, ಬಸವರಾಜ ಬೆಣ್ಣಿಶಿರೂರ, ಮಂಜುನಾಥ ದಾಸಪ್ಪನವರ ಹಾಗೂ ಇತರರು ಇದ್ದರು

********

## ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜ. 6 ರಿಂದ ಜ. 10 ವರೆಗೆ ಪ್ರಥಮ ಕಿತ್ತೂರ ಕರ್ನಾಟಕ ಜಾಂಬೋರೇಟ್ ಆಯೋಜನೆ

ಧಾರವಾಡ : ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆಯಿಂದ ಪ್ರಥಮ ಕಿತ್ತೂರು ಕರ್ನಾಟಕ ಜಾಂಬೋರೇಟ್‌ನ್ನು ಜನವರಿ 6, 2025 ರಿಂದ ಜನವರಿ 10, 2025 ರವರೆಗೆ ಹಮ್ಮಿಕೊಳ್ಳಲಾಗಿದ್ದು, ಜನವರಿ 6, 2025 ರಂದು ಸಂಜೆ 4 ಗಂಟೆಗೆ ಧಾರವಾಡ ದಡ್ಡಿಕಮಲಾಪೂರದ ಸಸ್ಯ ಚೇತನ ಜಿಲ್ಲಾ ತರಬೇತಿ ಕೇಂದ್ರದಲ್ಲಿ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕ-ರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು. ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಜಾಂಬೋರೇಟ್ ಕೈಪಿಡಿಯನ್ನು ಬಿಡುಗಡೆ ಮಾಡುವರು.

ಕಾರ್ಮಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತ ಪಿ.ಜಿ. ಆರ್. ಸಿಂಧ್ಯ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕ ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜೆ.ಎನ್.ಗಣೇಶ ಹಾಗೂ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಅಧ್ಯಕ್ಷ ಸೈಯದ್ ಅಜೀಮ್ ಪೀರ್ ಎಸ್. ಖಾದ್ರಿ ಶಾಸಕರಾದ ಅರವಿಂದ ಚಂದ್ರಕಾಂತ ಬೆಲ್ಲದ, ಎನ್. ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ್, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ರಾಮಪ್ಪ ಕೃಷ್ಣಪ್ಪ ಬಡಿಗೇರ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕಿರ್ ಸನದಿ, ಮಂಡಿಹಾಳ ಗ್ರಾಮ ಪಂಚಾಯತ ಅಧ್ಯಕ್ಷೆ ನಿಂಗವ್ವ ಬ. ಹೊಟಗಿ, ಮುಗದ ಗ್ರಾಮ ಪಂಚಾಯತ ಅಧ್ಯಕ್ಷ ರವಿ. ಚ. ಕಸಮಳಗಿ, ದಡ್ಡಿಕಮಲಾಪೂರ ಗ್ರಾಮ ಪಂಚಾಯತ ಸದಸ್ಯ ಚಟ್ಟು ಕಾನೆಮಾಲೆ ಹಾಗೂ ಲಕ್ಷ್ಮೀ ಧನರಾಜ್ ಮಟವಾಲೆ ಅವರು ಭಾಗವಹಿಸುವರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ.ಬ್ಯಾಕೋಡ್, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ, ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತೆ ಜಯಶ್ರೀ ಶಿಂತ್ರಿ, ಸಿಸ್ಲೆಪ್ ನಿರ್ದೇಶಕ ಡಾ. ಬಿ.ಕೆ.ಎಸ್. ವರ್ಧನ್, ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ ಹೊಸಮನಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ, ಪ.ಪೂ.ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೆ.ಪಿ.ಸುರೇಶ, ಶಾ.ಶಿ.ಇಲಾಖೆಯ ಉಪನಿರ್ದೇಶಕಿ ಜಯಶ್ರೀ ಕಾರೇಕರ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ ಉಪಾಧ್ಯಕ್ಷ ಗಜಾನನ ಮನ್ನಿಕೇರಿ, ಧಾರವಾಡ ಜಿಲ್ಲಾ ಮಾಜಿ ಮುಖ್ಯ ಆಯುಕ್ತ ಎಮ್.ಎಮ್.ಲೋಂಡೆ, ಬಾಗಲಕೋಟೆ ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಮುಖ್ಯ ಆಯುಕ್ತ ಡಿ.ಕೆ.ನಂದನೂರ, ಕಾರವಾರ ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಮುಖ್ಯ ಆಯುಕ್ತ ಡಾ. ಜಿ.ಜಿ.ಸಭಾಹಿತ್, ಗದಗ ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಮುಖ್ಯ ಆಯುಕ್ತ ಆರ್.ಎಸ್. ಬುರುಡಿ, ಶಿರಸಿ ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಮುಖ್ಯ ಆಯುಕ್ತ ವಿ.ಎಚ್.ಭಟ್ಕಳ, ಹಾವೇರಿ ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಮುಖ್ಯ ಆಯುಕ್ತ ಸುರೇಶ ಹುಗ್ಗಿ, ವಿಜಯಪೂರ ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಮುಖ್ಯ ಆಯುಕ್ತ ಸಿದ್ದಣ್ಣ.ಎಂ. ಸಕ್ರಿ ಅವರು ಭಾಗವಹಿಸುವರು.

ಜನವರಿ 9, 2025 ರಂದು ಸಂಜೆ 4 ಗಂಟೆಗೆ ಧಾರವಾಡ ದಡ್ಡಿಕಮಲಾಪೂರದ ಸಸ್ಯ ಚೇತನ ಜಿಲ್ಲಾ ತರಬೇತಿ ಕೇಂದ್ರದಲ್ಲಿ ಸಮಾರೋಪ ಸಮಾರಂಭ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಸಂಸ್ಥೆಯ ಜಿಲ್ಲಾ ಮುಖ್ಯ ಆಯುಕ್ತ ಶ್ರೀಶೈಲ ಚ. ಕರಿಕಟ್ಟಿ, ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಸ್ಕೌಟ್ಸ್ ವಿಭಾಗದ ರಾಜ್ಯ ಆಯುಕ್ತ ಎಂ.ಎ.ಖಾಲಿದ್, ಗೈಡ್ಸ್ ವಿಭಾಗದ ರಾಜ್ಯ ಆಯುಕ್ತೆ ಗೀತಾ ನಟ-ರಾಜ, ಸ್ಕೌಟ್ಸ್ ವಯಸ್ಕ ಸಂಪನ್ಮೂಲದ ರಾಜ್ಯ ಆಯುಕ್ತ ಚಿನ್ನಸ್ವಾಮಿ ರೆಡ್ಡಿ, ಗೈಡ್ಸ್ ವಯಸ್ಕ ಸಂಪನ್ಮೂಲದ ರಾಜ್ಯ ಆಯುಕ್ತೆ ಬಿ.ವ್ಹಿ. ರಾಮಲತಾ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಕಾರ್ಯದರ್ಶಿ ಕೆ.ಗಂಗಪ್ಪಗೌಡ, ರಾಜ್ಯ ಕೋಶಾಧಿಕಾರಿ ಟಿ.ಪ್ರಭಾಕರ, ಜಂಟಿ ರಾಜ್ಯ ಕಾರ್ಯದರ್ಶಿ ಎಮ್.ಎಸ್.ಸತೀಶ ಹಾಗೂ ಸಹಾಯಕ ರಾಜ್ಯ ಆಯುಕ್ತ ಮೋಹನಕುಮಾರ ಕೊಂಡಜ್ಜಿ ಅವರು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಸಂಸ್ಥೆಯ ಕೋಶಾಧಿಕಾರಿ ಬಸವರಾಜ ಕಡಕೋಳ, ಉಪಾಧ್ಯಕ್ಷ ವ್ಹಿ.ವ್ಹಿ.ಕಟ್ಟಿ, ಸ್ಥಾನಿಕ ಆಯುಕ್ತ ಎಸ್.ವಿ.ಮೊರಬ, ರೋವರ್ಸ ಆಯುಕ್ತ ಡಿ.ಡಿ. ಮಾಳಗಿ, ಗೈಡ ವಿಭಾಗದ ಆಯುಕ್ತೆ ಭಾಗಿರಥಿ ಕಲಕಾಂಬ್ಕರ, ಸ್ಕೌಟ್ ವಿಭಾಗದ ಆಯುಕ್ತ ಎಸ್.ಐ.ನೇಕಾರ, ಗೈಡ್ಸ್ ರಾಜ್ಯ ಸಂಘಟನಾ ಆಯುಕ್ತೆ ಸಿ.ಮಂಜುಳಾ, ಸ್ಕೌಟ್ಸ್ ರಾಜ್ಯ ಸಂಘಟನಾ ಆಯುಕ್ತ ಎಂ. ಪ್ರಭಾಕರ ಭಟ್ ಅವರು ಅತಿಥಿಗಳಾಗಿ ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

*******

## ಬದುಕಿನ ಗುರಿಗಳಿಗೆ ಶಾಂತತೆಯ ರಸ ಪ್ರವಹಿಸುವ ಶಕ್ತಿ ಕುವೆಂಪು ರವರ ಸಾಹಿತ್ಯಕ್ಕೆ ಇದೆ -ಡಾ. ಎಮ್ .ಬಿ. ನರಸಣ್ಣವರ



ಬೆಳಗಾವಿ: : ಮ.ನ.ರ. ಸಂಘದ ಶಿಕ್ಷಣ ಮಹಾವಿದ್ಯಾಲಯದಲ್ಲಿ ರಾಷ್ಟ್ರಕವಿ, ರಸಋಷಿ ಕುವೆಂಪು ರವರ 120 ನೇ ಜಯಂತಿಯನ್ನು ಆಚ-ರಿಸಲಾಯಿತು.

ವಿಶ್ವಮಾನವ ಸಂದೇಶವನ್ನು ಸಾರಿದ ಕುವೆಂಪು ರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಡಾ. ಎಮ್. ಬಿ. ನರಸಣ್ಣವರ ಸಹಾಯಕ ಪ್ರಾಧ್ಯಾಪಕರು ಸಾಗರ ಶಿಕ್ಷಣ ಮಹಾವಿದ್ಯಾಲಯ ರವರು ಕುವೆಂಪು ರವರ ಆಶಯದಂತೆ ಅಲ್ಪಮಾನವನನ್ನು ವಿಶ್ವ ಮಾನವನ್ನಾಗಿಸುವ ಶಕ್ತಿ ಶಿಕ್ಷಕ-ರಿಗಿದೆ, ಕುವೆಂಪು ರವರ ಕನ್ನಡ ಪ್ರೇಮ, ಪ್ರಕೃತಿಪ್ರೇಮ, ಮಾನವ ಪ್ರೇಮ ಸರ್ವರಿಗೂ ಆದ-'ರ್ಶವಾಗಿದೆ. ಕುವೆಂಪು ರವರ ಬರಹ - ಸಾಹಿತ್ಯ ದಲ್ಲಿ ಕಂಡು ಬರುವ ವೈಚಾರಿಕತೆ, ವಾಸ್ತವಿಕ ಚಿಂತನೆ, ವೈಜ್ಞಾನಿಕ ಮನೋಭಾವ, ಮನೋವೈಜ್ಞಾನಿಕ ಜ್ಞಾನ, ಶುದ್ಧ ಆಧ್ಯಾತ್ಮಿಕತೆ, ನೈತಿಕತೆ, ಗುರು ಶಿಷ್ಯ ಪರಂಪರೆಯೂ ಕರುನಾಡಿನ ಸಾಂಸ್ಕೃತಿಕ ಹಾಗೂ ಸಾಹಿತ್ಯಕ , ಸಾಮಾಜಿಕ ಪರಂಪರೆಯ ಮೇಲೆ ಅಗಾಧ ವಾಗಿ ಪ್ರಭಾವ ಬೀರಿದೆ. ಬದುಕಿನ ಗುರಿಗಳಿಗೆ ಶಾಂತತೆ ರಸ ತುಂಬುವ ಅದ್ಭುತ ಶಕ್ತಿ ಕುವೆಂಪು ರವರ ಸಾಹಿತ್ಯಕ್ಕಿದೆ. ಕುವೆಂಪು ರವರ ಸಾಹಿತ್ಯದ ವಿವಿಧ ಪ್ರಕಾರಗಳನ್ನು ತಾರ್ಕಿಕವಾಗಿ ವಿಶ್ಲೇಷಿಸಿದರು. ಶ್ರೀ ರಾಮಾಯಣ ದರ್ಶನಂ ಕೃತಿಯ ಮೂಲ ತತ್ವಗಳನ್ನು ವಿಮರ್ಶಿಸಿದರು. ಕುವೆಂಪು ರವರ ಜೀವನ ಹಾಗೂ ಬರಹಗಳನ್ನು ಭಾವೀ ಶಿಕ್ಷಕರು ಅಳವಡಿಸಿಕೊಳ್ಳುವುದು ಪ್ರಸ್ತುತ ಹಾಗೂ ಎಂದೆಂದಿಗೂ ಅವಶ್ಯಕವಾಗಿದೆ ಎಂದು ಹೇಳಿದರು.ಡಾ.ನಿರ್ಮಲಾ ಜಿ. ಬಟ್ಟಲ ಪ್ರಾಚಾರ್ಯೆ ರವರು ಅಧ್ಯಕ್ಷತೆ ವಹಿಸಿ ಮಾತನಾಡಿ ಇವತ್ತಿನ ಜಗತ್ತಿಗೆ ಬೇಕಾದ ಅವಶ್ಯಕ ಮೌಲ್ಯಗಳನ್ನು ಕುವೆಂಪು ರವರ ಸಾಹಿತ್ಯದಲ್ಲಿ ಕಾಣಬಹುದು. ವಿಶ್ವ ಪಥ, ಮನುಜಮತ ಎಂದು ಸಾರಿದ್ದ ಕುವೆಂಪು ರವರು ವೈದಿಕತೆಯ ಪ್ರೇರಿತ ಅನಾಗರೀಕ, ಮೌಢ್ಯ ಆಚರಣೆಗಳನ್ನು ತಮ್ಮ ವೈಚಾ-ರಿಕ ಚಿಂತನೆಯ ಮೂಲಕ ವಿರೋಧಿಸಿದರು. ಶ್ರೇಣೀಕೃತ ಜಾತಿ ವ್ಯವಸ್ಥೆಯನ್ನು ದಿಕ್ಕರಿಸಿ ಎಲ್ಲರೂ ಒಂದು ಎಂಬ ಮನೋಭಾವದಿಂದ ನಾವು ಜೀವಿಸಿದಾಗ ವಿಶ್ವಮಾನ'ವರಾಗಲೂ ಸಾಧ್ಯವಾಗುವುದು. ಕುವೆಂಪು ರವರ ಕಾವ್ಯದಲ್ಲಿನ ನೈತಿಕ ಹಾಗೂ ಮೌಲ್ಯಾಧಾ-ರಿತ ಅಂಶಗಳನ್ನು ದೃಷ್ಟಾಂತಗಳ ಮೂಲಕ ವಿಶ್ವಮಾನವ ಕುವೆಂಪುರವರ ಸಂದೇಶವನ್ನು ಹೇಳಿದರು.

ವಿಶೇಷ ಉಪನ್ಯಾಸಕರಾದ ಡಾ. ಎಮ್. ಬಿ. ನರಸಣ್ಣವರರಿಗೆ ಮಹಾವಿದ್ಯಾಲಯದ ಪರವಾಗಿ ಸತ್ಕರಿಸಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ಸಂಘದ ಉಪಾಧ್ಯಕ್ಷರಾದ ಡಾ. ಎಸ್. ವಿ. ವಾಲಿಶೆಟ್ಟಿ, ಕನ್ನಡ ಪ್ರಾಧ್ಯಾಪಕಿ ಪ್ರೊ. ರೂಪಾ ಅಕ್ಕಿ ಮತ್ತು ಸೋನಲ್ ಚಿನಿವಾಲ , ಪ್ರೊ. ಸುನಿಲ ಪಾಣಿ , ಡಾ.ಗೀತಾ ದಯಣ್ಣವರ ಪ್ರೊ. ಮಂಜುನಾಥ ಕಲಾಲ, ಪ್ರೊ. ಮಲ್ಲಿಕಾರ್ಜುನ ಜಮಖಂಡಿ ಹಾಗೂ ಎಲ್ಲ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು. ಪ್ರಶಿಕ್ಷಣಾರ್ಥಿ ಸಾವಿತ್ರಿ ಕುಲಕರ್ಣಿ ರವರ ತಂಡ ಪ್ರಾರ್ಥನೆ ಮಾಡಿದರು.

ಸ್ವಾಗತ ಹಾಗೂ ಅತಿಥಿ ಪರಿಚಯವನ್ನು ಪ್ರಶಿಕ್ಷಣಾರ್ಥಿ ಮಹೇಶ ಪಾಟೀಲ ನೇರವೇ-ರಿಸಿದರು. ಪ್ರಶಿಕ್ಷಣಾರ್ಥಿ ಗೌರವ್ವ ಮಿಸಿನಾಯ್ಕ ಹಾಗೂ ನಾಗರಾಜ ಅವರ ತಂಡ ಕುವೆಂಪು ರವರು ರಚಿಸಿದ ಕಾವ್ಯಗಳನ್ನು ಹಾಡಿದರು. ಪ್ರಶಿಕ್ಷಣಾರ್ಥಿ ಪೂಜಾ ದೊಡ್ಡಬೊಮ್ಮನವರ ನಿರೂಪಿಸಿದರು. ಗೌರವ್ವ ರವರು ವಂದಿಸಿದರು

# ಮಕ್ಕಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ನಾಳೆ ಜಿಲ್ಲೆಗೆ ಭೇಟಿ

ವಿಜಯಪುರ : ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಜನವರಿ 6 ಹಾಗೂ 7ರಂದು ಜಿಲ್ಲೆಗೆ ಭೇಟಿ ನೀಡಲಿದ್ದಾರೆ.

ಜ.6ರ ಬೆಳಿಗ್ಗೆ 10ರಿಂದ ಸಂಜೆ 1.30ಗಂಟೆ ವರೆಗೆ "ಆರ್.ಟಿ.ಇ ಅನುಷ್ಠಾನ ಮತ್ತು ಮಕ್ಕಳ ಶಿಕ್ಷಣದ ಜೊತೆಗಿದೆ ರಕ್ಷಣೆ" ಶೀರ್ಷಿಕೆಯಡಿ ಮಕ್ಕಳೊಂದಿಗೆ ಜಿಲ್ಲಾ ಮಟ್ಟದ ಅಹವಾಲು ಮತ್ತು ಮುಕ್ತ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ಮದ್ಯಾಹ್ನ 2ಗಂಟೆಗೆ ಶಾಲೆಯಲ್ಲಿದೆ ಶಿಕ್ಷಣದ ಜೊತೆಗೆ ರಕ್ಷಣಾ ಶೀರ್ಷಿಕೆಯಡಿ ಸಹಭಾಗೀದಾರ ಇಲಾಖಾ ಅಧಿಕಾರಿಗಳಿಗೆ ಹಮ್ಮಿಕೊಂಡಿದ ಕಾರ್ಯಾಗಾರದಲ್ಲಿ ಭಾಗವಹಿಸುವರು. ಜ.7ರ ಬೆಳಿಗ್ಗೆ 10ಗಂಟೆಗೆ ಶಾಲಾ ಶಿಕ್ಷಣ ಮತ್ತು ಸಾಕ್ಷಾರತೆ ಇಲಾಖೆಯ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸುವರು ಎಂದು ಪ್ರಕಟಣೆಯು ತಿಳಿಸಿದೆ.

# ಪೂರ್ವಭಾವಿ ಸಭೆ

ವಿಜಯಪುರ: ಸಂಕ್ರಾಂತಿ ನಿಮಿತ್ಯ ತೊರವಿ ಗ್ರಾಮದಲ್ಲಿ ನಡೆಯುವ ಶ್ರೀ ಸಿದ್ದೇಶ್ವರ ಜಾನುವಾರು ಜಾತ್ರೆಯನ್ನು ಜನವರಿ 10 ರಿಂದ 16ರ ವರೆಗೆ ನಡೆಸಲು ನಿರ್ಧರಿಸಲಾಗಿದೆ. ಜಿಲ್ಲಾ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವತಿಯಿಂದ ಜಾತ್ರೆಯ ವ್ಯವಸ್ಥೆ ಬಗ್ಗೆ ಪೂರ್ವಭಾವಿ ಸಭೆ ಜನವರಿ 7ರ ಸಂಜೆ 4ಗಂಟೆಗೆ ಜಿಲ್ಲಾಧಿಕಾರಿ ಕಛೇರಿಯಲ್ಲಿ ನಡೆಯಲಿದೆ ಎಂದು ಪ್ರಕಟಣೆಯು ತಿಳಿಸಿದೆ.

## ಫಲ–ಪುಷ್ಪ ಪ್ರದರ್ಶನ–ಹಣ್ಣುಗಳ ಮೇಳ

# ತೋಟಗಾರಿಕೆ ಅಭಿಯಾನ

ವಿಜಯಪುರ, : ತೋಟಗಾರಿಕೆ ಇಲಾಖೆ, ಜಿಲ್ಲಾ ಪಂಚಾಯತ್, ಜಿಲ್ಲಾ ತೋಟಗಾರಿಕೆ ಸಂಘ, ಕರ್ನಾಟಕ ರಾಜ್ಯ ಲಿಂಬೆ ಅಭಿವೃದ್ಧಿ ಮಂಡಳಿ ಇಂಡಿ ಹಾಗೂ ಹಾಪ್ಕಾಮ್ಸ್ ವಿಜಯಪುರ ಇವರ ಸಹಯೋಗದಲ್ಲಿ ಜ.13 ರಿಂದ 15ರವರೆಗೆ ನಗರದ ಬಸವ ವನದ ತೋಟಗಾರಿಕೆ ಉಪನಿರ್ದೇಶಕರ ಕಚೇರಿಯಲ್ಲಿ ಮೂರು ದಿಗಳ ಫಲ–ಪುಷ್ಪ ಪ್ರದರ್ಶನ, ಹಣ್ಣುಗಳ ಮೇಳ ಹಾಗೂ ತೋಟಗಾರಿಕೆ ಅಭಿಯಾನ ಆಯೋಜಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ಜಿಲ್ಲೆಯ ರೈತರು ಬೆಳೆದಿರುವ ವಿವಿಧ ಹಾಗೂ ಅತ್ಯುತ್ತಮ ತೋಟಗಾರಿಕೆ ಬೆಳೆಗಳ ಪ್ರದರ್ಶನ, ಇಲಾಖಾ ಯೋಜನೆಗಳ ಬಗ್ಗೆ ರೈತರಿಗೆ ಮಾಹಿತಿಯ ಜೊತೆಗೆ ಹಣ್ಣು, ಹೂ, ತರಕಾರಿಗಳಲ್ಲಿ ವಿವಿಧ ಕಲಾಕೃತಿಗಳ ಪ್ರದರ್ಶನ ಮತ್ತು ತೋಟಗಾರಿಕೆಯಲ್ಲಿ ಯಾಂತ್ರೀಕರಣ, ಯಂತ್ರೋಪಕರಣಗಳ ಪ್ರದರ್ಶನ ಹಾಗೂ ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದೆ.

ಕಾರ್ಯಕ್ರಮದಲ್ಲಿ ತೋಟಗಾರಿಕೆ ಬೆಳೆಗಳಾದ ದ್ರಾಕ್ಷಿ, ದಾಳಿಂಬೆ ಮತ್ತು ಲಿಂಬೆ ಕುರಿತು ಒಂದು ದಿನದ ವಿಚಾರ ಸಂಕೀರ್ಣ ಹಾಗೂ ಪ್ರತಿದಿನ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ಜಿಲ್ಲೆಯ ರೈತರು, ನಾಗರಿಕರು ಮತ್ತು ಶಾಲಾ ಕಾಲೇಜಿನ ಮಕ್ಕಳು ಭಾಗವಹಿಸಿ ಸದುಪಯೋಗ ಪಡೆದುಕೊಳ್ಳುವಂತೆ ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 7 ರಂದು ಲೋಕಾಯುಕ್ತರಿಂದ ಜನಸಂಪರ್ಕ ಸಭೆ

ಬಾಗಲಕೋಟೆ: ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಜನವರಿ 7 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ವರೆಗೆ ಗುಳೇದಗುಡ್ಡ ತಾಲೂಕಾ ಪಂಚಾಯತ ಕಾರ್ಯಾಲಯದಲ್ಲಿ ಜನಸಂಪರ್ಕ ಸಭೆ ಹಮ್ಮಿಕೊಳ್ಳಲಾಗಿದೆ.

ಸರಕಾರಿ ಕಚೇರಿಗಳಲ್ಲಿ ಅಧಿಕೃತ ಕೆಲಸಗಳನ್ನು ಮಾಡಿಕೊಡುವಲ್ಲಿ ವಿನಾಕಾರಣ ವಿಳಂಬ ಹಾಗು ಇನ್ನಿತರೆ ತೊಂದರೆ ಆಗಿದ್ದರೆ ಅಂತಹ ಅಧಿಕಾರಿ ಮತ್ತು ನೌಕರರ ವಿರುದ್ದ ಸಾರ್ವಜನಿಕರು ಸಭೆಗೆ ಹಾಜರಾಗಿ ತಮ್ಮ ಲಿಖಿತ ದೂರುಗಳನ್ನು ನಿಗದಿತ ಪ್ರಪತ್ರದಲ್ಲಿ ನೀಡಿದಲ್ಲಿ ಸ್ಥಳದಲ್ಲಿಯೇ ಪರಿಹಾರ ಕಂಡುಕೊಳ್ಳಬಹುದಾದ ದೂರುಗಳನ್ನು ಅಲ್ಲಿನ ಸ್ಥಳೀಯ ಅಧಿಕಾರಿಗ ಸಹಕಾರದೊಂದಿಗೆ ಇತ್ಯರ್ಥಪಡಿಸಲಾಗುವುದು ಎಂದು ಲೋಕಾಯುಕ್ತ ಪೋಲೀಸ್ ಅಧೀಕ್ಷಕ ಸತೀಶ ಚಿಟಗುಬ್ಬಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354–236200, 295170ಗೆ ಸಂಪರ್ಕಿಸಬಹುದಾಗಿದೆ.

*******

# ವಿದ್ಯಾರ್ಥಿಗಳ ಬೆಳವಣಿಗೆಯಲ್ಲಿ ಪಾಲಕರ ಜವಾಬ್ದಾರಿ ಹೆಚ್ಚು – ಪ್ರೋ.ತ್ಯಾಗರಾಜ

ಬೆಳಗಾವಿ,. ಜ.4: ವಿದ್ಯಾರ್ಥಿಗಳ ಪಾಲನ ಪೋಷಣೆ ಮತ್ತು ಬೆಳವಣಿಗೆಯಲ್ಲಿ ಪಾಲಕರ ಜವಾಬ್ದಾರಿ ಹೆಚ್ಚಾಗಿರುತ್ತದೆ. ಹಾಗಾಗಿ ಪಾಲಕರು ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ , ನಡುವಳಿಕೆಯನ್ನು ನೀಡುವುದು ಆದ್ಯ ಕರ್ತವ್ಯವಾಗಿದೆ ಎಂದು ರಾಣಿ ಚೆನ್ನಮ್ಮ ವಿಶ್ವ ವಿದ್ಯಾಲಯದ ಉಪ ಕುಲಪತಿ ಪ್ರೊ. ಸಿ.ಎಂ.ತ್ಯಾಗರಾಜ ಅವರು ಇಂದಿಲ್ಲಿ ಅಭಿಪ್ರಾಯಪಟ್ಟರು.



ಬೆಳಗಾವಿ ತಾಲೂಕಿನ ಶಿಂದೊಳ್ಳಿ ಗ್ರಾಮದಲ್ಲಿರುವ ದೇವೇಂದ್ರ ಜಿನಗೌಡ ಕನ್ನಡ ಮತ್ತು ಆಂಗ್ಲ ಮಾಧ್ಯಮ ಶಾಲೆಯ 25 ನೇ ವಾರ್ಷಿದ ರಜತ ಮಹೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದು ಮಕ್ಕಳಲ್ಲಿ ಕಲಿಕಾ ಭಾವನೆ ಕಡಿಮೆಯಾಗುತ್ತಿದೆ. ಪಾಲಕರು ತಮ್ಮ ಮಕ್ಕಳನ್ನು ದುಡ್ಡು ಕೊಟ್ಟು ಶಾಲೆಗೆ ಸೇರಿಸಿ ಎಲ್ಲ ಜವಾಬ್ದಾರಿಯನ್ನು ಶಿಕ್ಷಕರಿಗೆ ಒಪ್ಪಿಸಿದರೆ ಸಾಲದು. ಶಿಕ್ಷಕರ ಜೊತೆ ಮನೆಯಲ್ಲಿ ತಮ್ಮ ಮಕ್ಕಳ ಜವಾಬ್ದಾರಿಯನ್ನು ಪಾಲಕರು ಸರಿಯಾಗಿ ನಿರ್ವಹಿಸಬೇಕು. ಅವರಿಗೆ ಉತ್ತಮ ಸಂಸ್ಕಾರ ನೀಡಬೇಕೆಂದು ಅವರು ತಿಳಿಸಿದರು.

ಮಕ್ಕಳ ಜೊತೆ ಉತ್ತಮ ಒಡನಾಟವನ್ನು ಪಾಲಕರು ಹೊಂದಿರಬೇಕು. ಇದರಿಂದಾಗಿ ಸಂಬಂಧಗಳು ಗಟ್ಟಿಯಾಗುತ್ತವೆ. ಈ ಸಂಬಂಧವೇ ಜೀವನದ ಮುಖ್ಯ ಆಧಾರಸ್ಥಂಭವಾಗುತ್ತದೆ. ಇಂದಿನ ಶಿಕ್ಷಣ ಪದ್ದತಿ ಅತೀ ವೇಗದಲ್ಲಿ ಬದಲಾಗುತ್ತಿದೆ. ಈ ಶಿಕ್ಷಣಕ್ಕೆ ತಕ್ಕಂತೆ ತಮ್ಮ ಮಕ್ಕಳಿಗೆ ಶಿಕ್ಷಣ ನೀಡಬೇಕೆಂದು ಹೇಳಿದ ಅವರು ಇಂದು ಜಿನಗೌಡ ಶಾಲೆಯು 25 ನೇ ವರ್ಷಾಚರಣೆಯ ಸಂಭ್ರಮದಲ್ಲಿದೆ. ಇದಕ್ಕೆ ಮುಖ್ಯ ಕಾರಣ ಗೋಪಾಲ ಜನಗೌಡ ಅವರು. ಅವರ ಕಠಿಣ ಪರಿಶ್ರಮ ಮತ್ತು ಅವರ ಸಾಮಾಜಿಕ ಕಾರ್ಯವನ್ನು ಗಮನಿಸಿ ಅವರಿಗೆ ತಮ್ಮ ವಿಶ್ವವಿದ್ಯಾಲಯದ ವತಿಯಿಂದ ಗೌರವ ಡಾಕ್ಟರೇಟ ಪದವಿ ನೀಡಿದ್ದು ಹೆಮ್ಮೆಯ ಸಂಗತಿಯಾಗಿದೆ ಎಂದು ಅವರು ಹೇಳಿದರು.

ಸಮಾರಂಭದ ಇನ್ನೋರ್ವ ಅತಿಥಿ ವಿಜಯನಗರದ ಶ್ರೀ. ಕೃಷ್ಣದೇವರಾಯ ವಿಶ್ವವಿದ್ಯಾಲಯದ ವಿಶ್ರಾಂತ ಉಪ ಕುಲಪತಿ ಸಿದ್ದು ಅಲಗೂರ ಅವರು ಮಾತನಾಡಿ, ಗೋಪಾಲ ಜಿನಗೌಡ ಅವರು ಗ್ರಾಮೀಣ ಪ್ರದೇಶಧಲ್ಲಿ ಇಂತಹ ಅತ್ಯುತ್ತಮ ಶಿಕ್ಷಣ ಸಂಸ್ಥೆಯನ್ನು ಪ್ರಾರಂಭಿಸುವ ಮೂಲಕ ಗ್ರಾಮೀಣ ಜನರ ಮತ್ತು ರೈತರ ಮಕ್ಕಳಿಗೆ ಉನ್ನತ ಹಾಗೂ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದಾರೆ. ಇಂದಿನ ಡೊನೇಷನ ಹಾವಳಿಯ ನಡುವೆ ಯಾವುದೇ ಡೊನೆಷನ ಪಡೆಯದೆ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವ ಮೂಲಕ ಶಿಕ್ಷಣ ಮಾರಾಟದ ವಸ್ತುವಲ್ಲ ಎಂಬುದನ್ನು ಸಾಬಿತು ಪಡಿಸಿದ್ದಾರೆ ಎಂದು ಅವರು ಹೇಳಿದರು.

ಗೋಪಾಲ ಜಿನಗೌಡ ಅವರು ಶೈಕ್ಷಣಿಕ ಮತ್ತು ಸಾಮಾಜಿಕ ಕ್ಷೇತ್ರದಲ್ಲಿ ಅನೇಕ ಕಾರ್ಯಗಳನ್ನು ಮಾಡಿದ್ದಾರೆ. ಅವರ ಈ ಕಾರ್ಯದಿಂದಲೇ ಇಂದು ಈ ಸಂಸ್ಥೆಯ ಹೆಮ್ಮರವಾಗಿ ಬೆಳೆಯಲು ಕಾರಣವಾಗಿದೆ. ಗೋಪಾಲ ಜಿನಗೌಡ ಅವರ ಕಾರ್ಯ ನಿಜಕ್ಕೂ ಶ್ಲಾಘನೀಯವಾಗಿದೆ ಎಂದು ಅವರು ತಿಳಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಗೋಪಾಲ ಜಿನಗೌಡ ಎಜ್ಯುಕೇಶನ ಟ್ರಸ್ಟ ಅಧ್ಯಕ್ಷ ಗೋಪಾಲ ಜಿನಗೌಡ ಅವರು, ನನ್ನ ಜೀವನದಲ್ಲಿ ವ್ಯವಹಾರಗಳನ್ನು ಮಾಡುವಾಗ ಪ್ರಾಮಾಣಿಕತೆ ಮತ್ತು ಕಠಿಣ ಪರಿಶ್ರಮದಿಂದ ಕಾರ್ಯ ನಿರ್ವಹಿಸಿರುವೆ. ಇದರಿಂದಾಗಿ ಇಂದು ದೊಡ್ಡದಾದ ಶಿಕ್ಷಣ ಸಂಸ್ಥೆಯನ್ನು ಕಟ್ಟಲು ಸಾಧ್ಯವಾಯಿತು. ಜೀವನದಲ್ಲಿ ಪ್ರಾಮಾಣಿಕತೆ ಇದ್ದರೆ ಎಲ್ಲವನ್ನು ಸಹ ಸಾಧಿಸಬಹುದಾಗಿದೆ ಎಂದು ಅವರು ತಿಳಿಸಿದರು.

ಸಮಾರಂಭದ ವೇದಿಕೆ ಮೇಲೆ ಟ್ರಸ್ಟ ಆಡಳಿತ ಮಂಡಳಿಯ ಸದಸ್ಯರಾದ, ಹುಕುಮಚಂದ ರತ್ತು,. ಶ್ರೀಮತಿ ಇಂದಿರಾ ಶಂಕರಗೌಡಾ, ಭುಜಬಲಿ ಶಂಕರಗೌಡಾ, ಸಂದೀಪ ಚಿಪ್ರೆ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

ದೇವೇಂದ್ರ ಜಿನಗೌಡ ಕನ್ನಡ ಮತ್ತು ಆಂಗ್ಲ ಮಾಧ್ಯಮ ಶಾಲೆಯ ಪ್ರಾಚಾರ್ಯ ವಿಜಯಲಕ್ಷ್ಮೀ ಪಾಟೀಲ ಅವರು ಅತಿಥಿಗಳನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಯವಂತ ಮಾರಿಹಾಳ ಮತ್ತು ಡಾಯಾನಾ ಡಿಸೋಜಾ ಅತಿಥಿಗಳನ್ನು ಪರಿಚಯಿಸಿದರು. ವಿಜಯಲಕ್ಷ್ಮೀ ಹಲಗತ್ತಿ ,ಅಲ್ಕಾ ಜಿಂಗಾಡೆ ಕಾರ್ಯಕ್ರಮ ನಿರೂಪಿಸಿದರು. ಗೋಪಾಲ ಜಿನಗೌಡಾ ಮಹಾವಿದ್ಯಾಲಯದ ಪ್ರಾಚಾರ್ಯ ಭಾರತಿ ರಂಗಣೇಕರ ವಂದಿಸಿದರು.ಇದೆ ಸಂದರ್ಭದಲ್ಲಿ ಶಾಲಾ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು.

**********

## ಗ್ರಾಮೀಣಾಭಿವೃದ್ಧಿ, ಪಂಚಾಯತ ರಾಜ್ ಇಲಾಖಾ ನೌಕರರ ಕ್ರೀಡಾಕೂಟ

# ವಿವಿಧ ಕ್ರೀಡೆಗಳಲ್ಲಿ ಪಾಲ್ಗೊಂಡ ಸಿಇಓ ಶಶಿಧರ ಕುರೇರ



ಬಾಗಲಕೋಟೆ : ದಿನವಿಡಿ ಒತ್ತಡದ ಕರ್ತವ್ಯದ ನಿರ್ವಹಣೆಯಲ್ಲಿ ತೊಡಗುತ್ತಿದ್ದ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ವಿವಿಧ ಕ್ರೀಡೆಗಳಲ್ಲಿ ಪಾಲ್ಗೊಳ್ಳುವ ಮೂಲಕ ಇತರೆ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಪ್ರೇರಣೆ ನೀಡಿದರು.

ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಮೂರು ದಿನಗಳ ಕಾಲ ಹಮ್ಮಿಕೊಂಡ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖಾ ನೌಕರರ ಕ್ರೀಡಾಕೂಟ ಎರಡನೇ ದಿನವಾದ ಶನಿವಾರದಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಚೆಸ್, ಕೇರಂ, ಗುಂಡು ಎಸೆತ, ಟೆನಿಕ್ವಾಯಿಟ್, ಕ್ರೀಕೇಟ ಸೇರಿದಂತೆ ಇತರೆ ಕ್ರೀಡೆಗಳಲ್ಲಿ ಪಾಲ್ಗೊಂಡು ತಾವು ಸಹ ಲವಲವಿಕೆಯಿಂದ ಇರುವದರ ಜೊತೆಗೆ ತಮ್ಮ ಜಿ.ಪಂ ವ್ಯಾಪ್ತಿಯ ಇತರೆ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಪ್ರೇರಣೆಯಾದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಯ ಎಲ್ಲ ತಾಲೂಕಿನ ನೌಕರರು ಕ್ರೀಡಾಕೂಟಗಳಲ್ಲಿ ಪಾಲ್ಗೊಂಡಿದ್ದರು. ಕಳೆದ ವರ್ಷಕ್ಕಿಂತ ಈ ವರ್ಷ ಹೆಚ್ಚಿನ ಪ್ರಮಾಣದಲ್ಲಿ ನೌಕರರು ಪಾಲ್ಗೊಂಡಿದ್ದು, ಪ್ರತಿಯೊಂದು ತಾಲೂಕಿನ ಪ್ರತ್ಯೇಕ ಕಲರಿನ ಡ್ರೇಸ್ ಕೋಡನಿಂದ ಕಂಗೊಳಿಸುತ್ತಿದ್ದರು. ರುಚಿಕರವಾದ ಊಟದ ವ್ಯವಸ್ಥೆ, ಕಲಾಭವನದಲ್ಲಿ ಸಂಜೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಕೂಡಾ ಆಯೋಜನೆ ಮಾಡಿರುವುದು ನೌಕರರಲ್ಲಿ ಉತ್ಸಾಹ ತುಂಬಿತ್ತು.

ವ್ಯಯಕ್ತಿಕ ಕ್ರೀಡೆ (ಪುರುಷ)

ಪುರುಷರ ವಿಭಾಗದ ವ್ಯಯಕ್ತಿಕ ಕ್ರೀಡೆಗಳಾದ 100 ಮೀಟರ (ಎಸ್‌ಡಿಎ) ಓಟದಲ್ಲಿ ಸಿ.ಆರ್.ಆಸಂಗಿ (ಪ್ರಥಮ), ಎನ್.ಡಿ.ಕುಂಬಾರ (ದ್ವಿತೀಯ), ಎಂ.ಎಸ್.ದೇಸಾಯಿ (ತೃತೀಯ), 100 ಮೀಟರ್ ಓಟ (ಝಡ್‌ಪಿ, ಟಿಪಿ) ಚೇತನ ಚೋತಗತ್ತಿ (ಪ್ರಥಮ), ದಾನೇಶ ಕಾಂಬಳೆ (ದ್ವಿತೀಯ), ಸದಾಶಿವ ಪಟ್ಟೆಪ್ಪಗೋಳ (ತೃತೀಯ), 100 ಮೀಟರ್ (ಎಡಿಆರ್‌ಓ) ಮಹೇಶ ಜಗಲಿ (ಪ್ರಥಮ), ಗಂಗಾಧರ ಹನಮಸಾಗರ (ದ್ವೀತೀಯ), ಶೇಖರ ಅಂಗಡಿ (ತೃತೀಯ), ಉದ್ದ ಜಿಗಿತದಲ್ಲಿ ಅನೀಲ ಲಮಾಣಿ (ಪ್ರಥಮ), ಮಂಜುನಾಥ ಗೌಡರ (ದ್ವಿತೀಯ), ಬ್ರಹ್ಮಾನಂದ ಹಲಕುರ್ಕಿ (ತೃತೀಯ), ಗುಂಡು ಎಸೆತದಲ್ಲಿ ಅನೀಲ್ ಲಮಾಣಿ (ಪ್ರಥಮ), ದಯಾನಂದ ಅದಾನಿ (ದ್ವಿತೀಯ), ಗಜಾನಂದ ಪಶ್ಚಾಪೂರ (ತೃತೀಯ), ಚಕ್ರ ಎಸೆತದಲ್ಲಿ ಅನೀಲ ಲಮಾಣಿ (ಪ್ರಥಮ), ಚೇತನಸಿಂಗ್ ರಜಪೂತ (ದ್ವಿತೀಯ), ಮಹಾಂತೇಶ ಕೊಡಕೇರಿ (ತೃತೀಯ), ಎತ್ತರ ಜಿಗಿತದಲ್ಲಿ ಬ್ರಹ್ಮಾನಂದ ಹಲಕುರ್ಕಿ (ಪ್ರಥಮ), ಚೇತನಸಿಂಗ್ ರಜಪೂತ (ದ್ವಿತೀಯ), ರಾಮು ಕರೆಪ್ಪನವರ (ತೃತೀಯ).

ವ್ಯಯಕ್ತಿಕ ಕ್ರೀಡೆ (ಮಹಿಳೆ)

ಮಹಿಳಾ ವಿಭಾಗದ ವ್ಯಯಕ್ತಿಕ ಕ್ರೀಡೆಗಳಾದ ಗುಂಡು ಎಸೆತದಲ್ಲಿ ಕಾವೇರಿ ಹೋಳಿಕಟ್ಟಿ (ಪ್ರಥಮ), ಲಕ್ಕವ್ವ ಜನವಾಡ (ದ್ವಿತೀಯ), ಕೀರ್ತಿ ಚಂದನಶಿರ (ತೃತೀಯ), ಉದ್ದ ಜಿಗಿತದಲ್ಲಿ ಲಕ್ಷ್ಮೀ ತಿಮ್ಮನ್ನವರ (ಪ್ರಥಮ), ರೇಣುಕಾ ಅಮರಿ (ದ್ವಿತೀಯ), ಲಕ್ಷ್ಮೀ ಅವರಾಧಿ (ತೃತೀಯ), ಎತ್ತರ ಜಿಗಿತದಲ್ಲಿ ಲಕ್ಷ್ಮೀ ತಿಮ್ಮನ್ನವರ (ಪ್ರಥಮ), ಶಕುಂತಲಾ ಯಲ್ಲಡಗಿ (ದ್ವಿತೀಯ), ಕೀರ್ತಿ ಚಂದನಶಿವ (ತೃತೀಯ), ಚಕ್ರ ಎಸೆತದಲ್ಲಿ ಕಾವೇರಿ ಹೊಳಿಕೊಟ್ಟಿ (ಪ್ರಥಮ), ಲಕ್ಕವ್ವ ಜುನವಾಡ (ದ್ವಿತೀಯ), ಅಮೃತ ಎಂ.ಬಿ. (ತೃತೀಯ), 100 ಮೀಟರ್ ಓಟ (ಮಹಿಳಾ ಕಾರ್ಯದರ್ಶಿ) ಸುಕನ್ಯಾ ಕಲ್ಲೊಳ್ಳಿ (ಪ್ರಥಮ), ಸಾವಿತ್ರಿ ಸಿದ್ದಾಪೂರ (ದ್ವಿತೀಯ), ಸವಿತಾ ವಾಲಿಕಾರ (ತೃತೀಯ), 100 ಮೀಟರ್ ಓಟ (ಪಿಡಿಓ) ಸುನಿತಾ ಅಂಕೋಲೆ (ಪ್ರಥಮ), ಮಾಲಾಶ್ರೀ ಕೆಂಚನಗೌಡ (ದ್ವಿತೀಯ), ಅರ್ಚನಾ ಕಲಕರ್ಣಿ (ತೃತೀಯ) ಸ್ಥಾನ ಪಡೆದುಕೊಂಡಿದ್ದಾರೆ.

## ತೇರದಾಳ ಪುರಸಭೆ ಬಜೆಟ್ ಪೂರ್ವಭಾವಿ ಸಭೆ

# ಮೂಲಭೂತ ಸೌಲಭ್ಯಗಳಿಗೆ ಆದ್ಯತೆ ನೀಡಿ



ತೇರದಾಳ–ಪಟ್ಟಣದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ದಿನೇ ದಿನೆ ಹೆಚ್ಚಾಗುತ್ತಿವೆ. ಆದ್ದರಿಂದ 2025–26ನೇ ಸಾಲಿನ ಪುರಸಭೆ ಬಜೆಟ್‌ನಲ್ಲಿ ಸಾರ್ವಜನಿಕರಿಗೆ ಸೌಲಭ್ಯಗಳನ್ನು ಒದಗಿಸುವ ದಿಸೆಯಲ್ಲಿ ಆದ್ಯತೆ ನೀಡಿ ಎಂದು ಹಲವು ಮುಖಂಡರು ಪುರಸಭೆಯಲ್ಲಿ ನಡೆದ ಬಜೆಟ್ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷರಿಗೆ ಹಾಗೂ ಅಧಿಕಾರಿಗಳಿಗೆ ಒತ್ತಾಯಿಸಿದರು.

ಪಟ್ಟಣದ ಸ್ವಚ್ಛತೆಗೊಳಿಸುವ ಪೌರ ಕಾರ್ಮಿಕರ ವೇತನಕ್ಕೆ ಅನುದಾನದಲ್ಲಿ ಮೊದಲು ಮೀಸಲು ಇಟ್ಟಕೊಳ್ಳಿ. ಅದರಂತೆ ಕಲೂತಿ ನಗರದಲ್ಲಿ ಚರಂಡಿ ವ್ಯವಸ್ಥೆ, ಬೀದಿ ದೀಪ, ಶೌಚಾಲಯಗಳ ಸ್ವಚ್ಛತೆ, ಉದ್ಯಾನಗಳ ಅಭಿವೃದ್ಧಿ, ರಸ್ತೆಗಳ ಅಭಿವೃದ್ಧಿ ಸೇರಿದಂತೆ ಹಲವು ಬೇಡಿಕೆಗಳನ್ನು ಸಾರ್ವಜನಿಕರು ಅಧಿಕಾರಿಗಳಿಗೆ ಹೇಳಿದರು. ಸರಕಾರ ನೀಡುವ ಅನುದಾನ ಹಾಗೂ ಪುರಸಭೆ ಆದಾಯ ನಿಧಿಯಿಂದ ಹಂತ ಹಂತವಾಗಿ ಪಟ್ಟಣದಲ್ಲಿನ ಸಮಸ್ಯೆಗಳನ್ನು ಈಡೇರಿಸುವ ಕೆಲಸ ಮಾಡಲಾಗುವುದು. ಸಾರ್ವಜನಿಕರು ಸಕಾಲಕ್ಕೆ ಆಸ್ತಿ ತೆರಿಗೆ, ನೀರಿನ ಕರ, ಕಟ್ಟಡ ಪರವಾನಗಿ ಸೇರಿದಂತೆ ಪುರಸಭೆಗೆ ಸಂದಾಯ ಮಾಡಬೇಕಾದ ಹಣವನ್ನು ಪಾವತಿಸುವ ಮೂಲಕ ಪಟ್ಟಣದ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಅಧ್ಯಕ್ಷೆ ಶಿಲ್ಪಾ ರೋಡಕರ ಹಾಗೂ ಮುಖ್ಯಾಧಿಕಾರಿ ಆನಂದ ಕೆಸರಗೊಪ್ಪ ಸಾರ್ವಜನಿಕರಿಗೆ ಮನವಿ ಮಾಡಿದರು. ಉಪಾಧ್ಯಕ್ಷೆ ನಸ್ರೀನ್‌ಬಾನು ನಗಾರ್ಜಿ, ಕಚೇರಿ ವ್ಯವಸ್ಥಾಪಕ ಮಲ್ಲಿಕಾರ್ಜುನ ಬಿರಾದಾರಪಾಟೀಲ, ಸದಸ್ಯ ಸಂತೋಷ ಜಮಖಂಡಿ, ಕಂದಾಯ ಅಧಿಕಾರಿ ಎಫ್.ಬಿ. ಗಿಡ್ಡಿ, ಸಂಗಮೇಶ ಕಾಲತಿಪ್ಪಿ, ಶ್ರೀಶೈಲ ತೆಳಗಿನಮನಿ, ಮಹಾಂತೇಶ ಪಂಚಾಕ್ಷರಿ, ಎಂ.ಬಿ. ಮಾಳೇದ, ರಮೇಶ ಶೇಡಬಾಳ, ಸಾಗರ ಶಿರಹಟ್ಟಿ, ಎಂ.ಎಚ್. ಥರಥರಿ, ಭಾಗ್ಯಶ್ರೀ ಪಾಟೀಲ, ರೂಪಾ ಗೊಂಬಿ, ಮಹಾದೇವಿ ಮರೆಗುದ್ದಿ, ಬರಮು ದನಗರ, ಇರ್ಫಾನ ಝಾರೆ ಇನ್ನಿತರಿದ್ದರು.

# ಫೆ.22, 23 – 24 ರಂದು ರನ್ನ ವೈಭವ ಆಚರಿಸಲು ನಿರ್ಧಾರ

ಬಾಗಲಕೋಟೆ : ಹಲವು ವರ್ಷಗಳಿಂದ ಸ್ಥಗಿತಗೊಂಡಿದ್ದ ಮುಧೋಳ ರನ್ನವೈಭವ–2025ನ್ನು ಇದೇ ಫೆಬ್ರವರಿ 22, 23 ಹಾಗೂ 24 ರಂದು ಒಟ್ಟು ಮೂರು ದಿನಗಳ ಕಾಲ ಹಮ್ಮಿಕೊಳ್ಳಲು ಜಿಲ್ಲಾಡಳಿತ ನಿರ್ಧರಿಸಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.



ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ರನ್ನ ವೈಭವ ಆಚರಣೆ ಕುರಿತಂತೆ ಪೂರ್ವಭಾವಿಯಾಗಿ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ರನ್ನ ಪ್ರತಿಷ್ಠಾನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿಯಾಗಿ ರನ್ನ ವೈಭವ–2025ನ್ನು ವಿಜ್ರಂಭಣೆಯಿಂದ ಆಚರಿಸಲು ನಿರ್ಧರಿಸಲಾಗಿದೆ.

ಕಾರ್ಯಕ್ರಮ ರೂಪುರೇಷೆ ತಯಾರಿಸಲು ವಿವಿಧ ರೀತಿಯ ಸಮಿತಿಗಳನ್ನು ರಚಿಸಲಾಗುತ್ತಿದ್ದು, ಪ್ರತಿಯೊಂದು ಸಮಿತಿಯವರು ಅಚ್ಚುಕಟ್ಟಾಗಿ ಕೆಲಸ ನಿರ್ವಹಿಸಲು ತಿಳಿಸಿದರು.

ರನ್ನ ವೈಭವದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮದ ಜೊತೆಗೆ ಕ್ರೀಡೆಗಳನ್ನು ಸಹ ಆಯೋಜನೆ ಮಾಡಲಾಗುತ್ತಿದೆ. ಅಧಿಕಾರಿಗಳು ತಮಗೆ ಯಾವುದರ ಮೇಲೆ ಆಸಕ್ತಿ ಇರುವುದು ಅಂತಹ ಸಮಿತಿಗಳಲ್ಲಿ ತೊಡಗಿಸಿಕೊಂಡು ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಸಲು ಸನ್ನದ್ದರಾಗಬೇಕು. ಆಚರಣೆ ಸಂಬಂಧಿಸಿದಂತೆ ಸಾಂಸ್ಕೃತಿಕ ಕಾರ್ಯಕ್ರಮ, ಕವಿಗೋಷ್ಠಿ, ವಿಚಾರಗೋಷ್ಠಿ ಸೇರಿದಂತೆ ಇತರೆ ವಿಷಯಗಳ ಕುರಿತು ಸಾರ್ವಜನಿಕರು, ಕಲಾ ಆಸಕ್ತರು, ತಮ್ಮ ಅಭಿಪ್ರಾಯಗಳನ್ನು ತಿಳಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಶ್ವೇತಾ ಬೀಡಿಕರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ವಿವೇಕಾನಂದ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ರಾಜಶೇಖರ ಪಟ್ಟಣಶೆಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಜೈನಾಪೂರ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಆಯಾ ತಾಲೂಕಿನ ತಹಶೀಲ್ದಾರರು ಉಪಸ್ಥಿತರಿದ್ದರು.

*********

# ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿ

ವಿಜಯಪುರ: ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್ ಎ.ಕ್ಯೂ ಗುಣಮಟ್ಟದ ತೊಗರಿ ಖರೀದಿ ಕುರಿತು ಜರುಗಿದ ಜಿಲ್ಲಾಮಟ್ಟದ ಟಾಸ್ಕ ಪೋರ್ಸ್ ಸಮಿತಿ ಸಭೆ ಜಿಲ್ಲಾಧಿಕಾರಿ ಕಛೇರಿಯಲ್ಲಿ ಜನವರಿ 3ರ ಸಂಜೆ 4ಗಂಟೆಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅಧ್ಯಕ್ಷತೆಯಲ್ಲಿ ನಡೆಯಿತು. ಸಭೆಯಲ್ಲಿ ಪ್ರತಿ ಕ್ವಿಂಟಾಲ್ ತೊಗರಿ ಬೆಲೆಯನ್ನು ರೂ .7550/–ನಂತೆ ಪ್ರತಿ ರೈತನಿಂದ ಗರಿಷ್ಠ 40 ಕ್ವಿಂಟಾಲ್ ತೊಗರಿ ಖರೀದಿಸಲು ಆದೇಶ ನೀಡಲಾಯಿತು.

1. ಖರೀದಿ ಕೇಂದ್ರಗಳಲ್ಲಿ ತೊಗರಿಯನ್ನು ಖರೀದಿಸುವ ಪೂರ್ವದಲ್ಲಿ ರೈತರ ನೋಂದಣಿಯನ್ನು ಓಖಅ ಸಂಸ್ಥೆಯು ಬೆಂಬಲ ಬೆಲೆ ಯೋಜನೆಯಡಿ ಭತ್ತ ಮತ್ತು ರಾಗಿ ಬೆಳೆಗಳ ಉತ್ಪನ್ನವನ್ನು ಖರೀದಿಸಲು ಸಿದ್ಧಪಡಿಸಿರುವ ತಂತ್ರಾಂಶವನ್ನು ಸೂಕ್ತವಾಗಿ ಉನ್ನತೀಕರಿಸಿ, ಬಯೋಮೆಟ್ರಿಕ್ ಮೂಲಕ ತೊಗರಿ ಬೆಂಬಲ ಬೆಲೆ ಯೋಜನೆಯಡಿ ನೋಂದಾಯಿಸಲು ಬಳಸಬೇಕು. ಓಖಅ ಸಂಸ್ಥೆಯು ಅಭಿವೃದ್ಧಿಪಡಿಸಿರುವ ಸದರಿ ನೋಂದಣಿ ತಂತ್ರಾಂಶವು ಈಗಾಗಲೇ ಈಖಗಖಖಿಖ ತಂತ್ರಾಂಶದೊಂದಿಗೆ ಸಂಯೋಜಿಸಲಾಗಿದೆ. ಈಖಗಖಖಿಖ ದತ್ತಾಂಶದಲ್ಲಿ ರೈತರಿಗೆ ಸಂಬಂಧಿಸಿದ ವಿವರಗಳನ್ನು ಭೂಮಿ. ಗಖಆಂಖ ಮತ್ತು ಬೆಳೆ ಸಮೀಕ್ಷೆ ದತ್ತಾಂಶದೊಂದಿಗೆ ತಾಳೆ ಮಾಡಿ ವಿವರಗಳನ್ನು ಇಂದೀಕರಿಸಲಾಗಿದೆ. ಸದರಿ ವಿವರಗಳನ್ನು ಬೆಂಬಲ ಬೆಲೆ ಯೋಜನೆಯಡಿ ಮಾಡಲು ನೋಂದಣಿ ಸಿದ್ಧಪಡಿಸಿದ ತಂತ್ರಾಂಶಕ್ಕೆ ವಿದ್ಯುನ್ಮಾನ ರೀತಿಯಲ್ಲಿ ಒದಗಿಸಲಾಗುತ್ತದೆ. ಬೆಂಬಲ ಬೆಲೆ ಯೋಜನೆಯಡಿ ನೋಂದಣಿ ಮಾಡಿದ ನಂತರ NIC ತಂತ್ರಾಂಶದಿಂದ ನಾಫೆಡ್ ಹಾಗೂ ಎನ್.ಸಿ.ಸಿ.ಎಫ್ ಸಂಸ್ಥೆಯ ತಂತ್ರಾಂಶಕ್ಕೆ ರೈತರ ನೋಂದಣಿ ಮಾಹಿತಿಯನ್ನು ಒದಗಿಸಲಾಗುವುದು. ನಾಫೆಡ್ ಹಾಗೂ ಎನ್.ಸಿ.ಸಿ.ಎಫ್. ಸಂಸ್ಥೆಯು ತಮ್ಮ ತಂತ್ರಾಂಶದಲ್ಲಿ ಈ ಮಾಹಿತಿಯನ್ನು ಬಳಸಿ ರೈತರಿಂದ ತೊಗರಿ ಖರೀದಿ ಕೇಂದ್ರಗಳಿಂದ ಖರೀದಿಸತಕ್ಕದ್ದು.

2. ಸದರಿ ಯೋಜನೆಯಡಿಯಲ್ಲಿ ಖರೀದಿಸಬಹುದಾದ ಗರಿಷ್ಠ ತೊಗರಿ ಪ್ರಮಾಣ ಹಾಗೂ ಅವಶ್ಯವಿರುವ ಮುಂಗಡ ಹಣವನ್ನು ರಾಜ್ಯದ ಖರೀದಿ ಸಂಸ್ಥೆಗಳು ನ್ಯಾಫೆಡ್ ಸಂಸ್ಥೆಯೊಂದಿಗೆ ಸಮಾಲೋಚಿಸಿ ಹಣ ಪಡೆದು ಖರೀದಿಸಿರುವ ರೈತರಿಗೆ ಡಿ.ಬಿ.ಟಿ ಮುಖಾಂತರ ಪಾವತಿಸತಕ್ಕದ್ದು.

3. ಈ ಆದೇಶ ಹೊರಡಿಸಿದದ ದಿನದಿಂದ ರೈತರ ನೋಂದಣಿ ಕಾಲಾವಧಿಯನ್ನು 75 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗದಿಪಡಿಸಿದೆ. ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸತಕ್ಕದ್ದು. ಈ ಯೋಜನೆಗಾಗಿ ಕೇಂದ್ರ ಸರ್ಕಾರವು ಹೊರಡಿಸಿರುವ Standard operating procedure (SOP) ರನ್ವಯ ಖರೀದಿಸತಕ್ಕದ್ದು,

5. ಈ ಯೋಜನೆಯಡಿಯಲ್ಲಿ ಖರೀದಿಸುವ ಪ್ರಗತಿಯ ವಿವರವನ್ನು ಪ್ರತಿದಿನ ಸರ್ಕಾರಕ್ಕೆ ಹಾಗೂ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಈ ಮೇಲ್ ಮೂಲಕ ಸಲ್ಲಿಸತಕ್ಕದ್ದು,

6. ಖರೀದಿ ಕೇಂದ್ರಗಳಲ್ಲಿ ತೊಗರಿಯನ್ನು ಖರೀದಿಸುವ ಪೂರ್ವದಲ್ಲಿ ರೈತರಿಂದ ಆಧಾರ್ ಕಾರ್ಡ್ ಪ್ರತಿ ಕಡ್ಡಾಯವಾಗಿ ಸಂಗ್ರಹಿಸಿಡುವುದು. ಪಡೆದು ಪರಿಶೀಲಿಸಿ ನೋಂದಾಯಿಸಿಕೊಳ್ಳತಕ್ಕದ್ದು ಹಾಗೂ ದಾಖಲೆಗಳನ್ನು 7. ರೈತರ ಹೆಸರಿನ ಆಧಾರ್ ಸಂಖ್ಯೆ ಜೋಡಣೆಗೊಂಡ ಬ್ಯಾಂಕ್ ಖಾತೆಗೆ ಅಥವಾ ರೈತರು ನೀಡಿರುವ ಬ್ಯಾಂಕ ಖಾತೆಗೆ ಮಾತ್ರ ಉತ್ಪನ್ನದ ಮೌಲ್ಯವು ಆಃಖಿ/ಓಇಈಖಿ ಮೂಲಕ ಜಮಾ ಆಗುವಂತೆ ಪಾವತಿ ಮಾಡತಕ್ಕದ್ದು.

8. ತೊಗರಿ ಖರೀದಿ ಕೇಂದ್ರದಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ತೊಗರಿಯನ್ನು ಖರೀದಿಸದಂತೆ ಹಾಗೂ ಖರೀದಿ ಸಂಸ್ಥೆಗಳ ಯಾವುದೇ ರೀತಿಯ ದುರುಪಯೋಗ ಆಗದಂತೆ ಹಾಗೂ ಖರೀದಿ ಕೇಂದ್ರಗಳಲ್ಲಿ ತೊಂದರೆಗಳು ಉದ್ಭವಿಸಿದಲ್ಲಿ ಸಂಬಂಧಿಸಿದ ಕಾರ್ಯದರ್ಶಿಗಳು ಹಾಗೂ ಸಂಘಗಳ ವಿರುದ್ಧ ಸೂಕ್ತ ಕ್ರಮ ವಹಿಸುವಂತೆ ಮತ್ತು ವರದಿಗಳನ್ನು ಮಾನ್ಯ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲು ಸಹಕಾರ ಸಂಘಗಳ ಜಿಲ್ಲಾ ಉಪ ನಿಬಂಧಕರು, ವಿಜಯಪುರ ರವರು ಕ್ರಮ ವಹಿಸತಕ್ಕದ್ದು.ಈ. ತೊಗರಿಯನ್ನು ಖರೀದಿ ಪೂರ್ವದಲ್ಲಿ ಖರೀದಿ ಕೇಂದ್ರಗಳಾದ PACS/VSSN/FPO/TAPCMS ಸಂಘಗಳು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳ ವಿಜಯಪುರ ಅವರೊಂದಿಗೆ ಒಪ್ಪಿಗೆ ಪತ್ರ (Agreement) ಮಾಡಿಕೊಂಡು ನಂತರ ಖರೀದಿಸಲು ಸೂಚಿಸಿದೆ. 10. ರೈತರು ಹೊಗರಿ ಕಾಳು, ಖರೀದಿ ಕೇಂದ್ರಕ್ಕೆ ತಂದು ತಮ್ಮ ಉಪಸ್ಥಿತಿಯಲ್ಲಿಯೇ ತೂಕ ಮಾಡಿಕೊಳ್ಳಬೇಕು. ಆಧೀಕೃತ ರಿಶಿದೀಯನ್ನು ಪಡೆದುಕೊಳ್ಳಬೇಕು. ಖರೀದಿ ಕೇಂದ್ರಕ್ಕೆ ತೊಗರಿ ಕಾಳು ಇಳಿಸುವ ಜವಾಬ್ದಾರಿ ರೈತರದ್ದಾಗಿರುತ್ತದೆ ಎಂಬ ನಿಬಂಧನೆಗಳನ್ನು ವಿಧಿಸಲಾಗಿದೆ.

ಮೇಲ್ಕಂಡ ಎಲ್ಲ ಅಂಶಗಳನ್ನು ಕಟ್ಟು ನಿಟ್ಟಾಗಿ ಪಾಲಿಸಿ ರೈತರಿಗೆ ಅನ್ಯಾಯವಾಗದಂತೆ ಸರ್ಕಾರದ ಯೋಜನೆಯನ್ನು ಯಶಸ್ವಿಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ಹಾಗೂ ಆಯಾ ತಾಲೂಕಿನ ಸಹಕಾರಿ ಸಂಘಗಳ ಖರೀದಿ ಕೇಂದ್ರಗಳಲ್ಲಿ ಖರೀದಿ ಪ್ರಕ್ರಿಯೆ ಸುಗಮವಾಗಿ ಜರುಗಿಸಲು ಸಂಬಂಧಿಸಿದ ಸ್ಥಳಿಯ ಸಂಸ್ಥೆ ಹಾಗೂ ಖರೀದಿ ಏಜೆನ್ಸಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲಾ ಕೃಷಿ ಇಲಾಖೆ ಜಂಟಿ ನಿರ್ದೇಶಕರು, ಸಹಕಾರ ಸಂಘಗಳ ಉಪ ನಿಬಂಧಕರು, ಕೆ.ಎಸ್.ಸಿ.ಎಮ್.ಎಫ್ ಶಾಖಾ ವ್ಯವಸ್ಥಾಪಕರು, ಕೃಷಿ ಮಾರಾಟ ಇಲಾಖೆ ಸಹಾಯಕ ನಿರ್ದೇಶಕರು ಹಾಗೂ ಮಾರುಕಟ್ಟೆ ವ್ಯವಸ್ಥಾಪಕರು ಸಭೆಯಲ್ಲಿ ಉಪಸ್ಥಿತರಿದ್ದರು.


**ಕರ್ನಾಟಕ ನೀರಾವರಿ ನಿಗಮ ನಿಯಮಿತ**
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯನಿರ್ವಾಹಕ ಅಭಿಯಂತರರ ಕಚೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಘ.ಬ.ದಂ.ಕಾ.ನಿ. ವಿಭಾಗ–4, ಚಿಕ್ಕೋಡಿ
ಫೋನ ನಂ:08338–272485 Email:ee_knnlgrbc4ckd@rediffmail.com

**ಅಲ್ಪಾವಧಿ ಟೆಂಡರ ಪ್ರಕಟಣೆ (3ನೇ ಕರೆ)**
**(ಇ–ಪ್ರೊಕ್ಯೂರಮೆಂಟ ಮುಖಾಂತರ ಮಾತ್ರ)**

ಪ್ರಕಟಣೆ ಸಂಖ್ಯೆ:KNNL/GRBCC-4/Tender/2024-25/21 Date:02-01-2025

ವ್ಯವಸ್ಥಾಪಕ ನಿರ್ದೇಶಕರು,ಕನೀನಿನಿ ಬೆಂಗಳೂರು ಇವರ ಪರವಾಗಿ ಈ ಕೆಳಗೆ ಸಹಿ ಮಾಡಿರುವವರಿಂದ ಕರ್ನಾಟಕ ಸರ್ಕಾರದ ಕೆ.ಪಿ.ಪಿ ಪೋರ್ಟಾಲ್‌ನಲ್ಲಿ (https://kppp.karnataka.gov.in) ಲೆಕ್ಕ ಶೀರ್ಷಿಕೆ 2701 ಅಡಿಯಲ್ಲಿನ 7 ಕಾಮಗಾರಿಗಳಿಗೆ ಮೇಲ್ಕಾಣಿಸಿದ ಪ್ರಕಟಣೆಯಲ್ಲಿ ಅರ್ಹ ಗುತ್ತಿಗೆದಾರರಿಂದ ಟೆಂಡರ್ ಕರೆಯಲಾಗಿರುತ್ತದೆ. **ವಿವರ :** ಟೆಂಡರ ಪ್ರಕಟಣೆ ಸಂ.:21 dtd 02-01-2025,ಕೆ.ಪಿ.ಪಿ. ಪೋರ್ಟಾಲ್ ಇಂಡೆಂಟ ಸಂಖ್ಯೆ:Single Cover System:General:Indent No 2529, 2530, 2531, 2535 & 2536 SC Reserved: Indent No 2528 & 2533, ಅಂದಾಜು ಪತ್ರಿಕೆಯಂತೆ ಟೆಂಡರಿಗೆ ಇಡಲಾದ ಮೊತ್ತ ರೂ.:2.52 lakhs to 10.16 lakhs each, ಇಎಂಡಿ ಮೊತ್ತ ರೂ.:3500/- to 25500/-,ಟೆಂಡರಕುರಿತ ಪ್ರಶ್ನೆಗಳಿಗಾಗಿ/ಸ್ಪಷ್ಟೀಕರಣಗಳಿಗಾಗಿ ಕೊನೆಯ ದಿನಾಂಕ & ಸಮಯ:09-01-2025, Up to 17.00 hrs.,ಭರ್ತಿ ಮಾಡಿದ ಟೆಂಡರಗಳನ್ನು ಕೆ.ಪಿ.ಪಿ ಪೋರ್ಟಾಲ್ ಮುಖಾಂತರ ಸಲ್ಲಿಸಲು ಕೊನೆಯ ದಿನಾಂಕ & ಸಮಯ:13-01-2025, at 16.00 hrs, ಆರ್ಥಿಕ ಬಿಡ್‌ನ್ನು ತೆರೆಯುವ ದಿನಾಂಕ:15-01-2025, at 16.30 hrs.,

ಕಾಮಗಾರಿಗಳ ಹೆಸರು/ಗುತ್ತಿಗೆದಾರರ ಅರ್ಹತೆ/ಟೆಂಡರಿನ ನಿಯಮ/ ಟೆಂಡರ ಪ್ರೋಸೆಸಿಂಗ್ ಶುಲ್ಕ ಇತ್ಯಾದಿ ವಿವರಗಳಿಗೆ https://kppp.karnataka.gov.in ಮೂಲಕ ಮಾಹಿತಿ ಪಡೆಯಬಹುದು ಅಥವಾ ಈ ಕೆಳಗೆ ಸಹಿ ಮಾಡಿದವರ ಕಚೇರಿಯಲ್ಲಿ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು. ಟೆಂಡರಗಳನ್ನು ಸ್ವೀಕರಿಸುವ ಅಧಿಕಾರಿಯು ಯಾವುದೇ ಕಾರಣ ನೀಡದೆ ಯಾವುದೇ ಟೆಂಡರನ್ನು ಅಥವಾ ಎಲ್ಲಾ ಟೆಂಡರಗಳನ್ನು ತಿರಸ್ಕರಿಸುವ ಅಧಿಕಾರವನ್ನು ಹೊಂದಿರುತ್ತಾರೆ.

ಸಹಿ/–ಕಾರ್ಯನಿರ್ವಾಹಕ ಅಭಿಯಂತರು,
ಕನೀನಿನಿ, ಘಬದಂಕಾನಿ ವಿಭಾಗ–4, ಚಿಕ್ಕೋಡಿ

DIPR/BGM/RO-NO-1410/KSMCA/2024-25


BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 280, Postal Reg No. PMG/KA/NK/BM/135/22-24 / POST AT Vantamury Colony Post Office